ಸಂಪುಟ: 13 Volume ಸಂಚಿಕೆ: 242 Issue ಪುಟಗಳು: 08 Pages ಬುಧವಾರ 12 ನವೆಂಬರ 2025 ₹2 PRGINO. 120927(RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ನಾಯಕಯಾವಾಗನಿರುಪಯುಕ್ತನಾಗುತ್ತಾನೆಂದರೆ, ಯಾವಾಗ ಆತತನ್ನಆತ್ಮಸಾಕ್ಷಿಗೆವಿರುದ್ಧವಾಗಿ ನಡೆದುಕೊಳ್ಳುತ್ತಾನೆಯೋ ಆಗ.
ಮಹಾತ್ಮ ಗಾಂಧಿ

4 ಪೂರ್ವಭಾವಿ ಸಭೆಗೆ ಸೂಚನೆ | 2 ಕೇಂದ್ರ ಸರ್ಕಾರಕ್ಕೆ ಅಭಿನಂದನೆ | 8 ನೀರಾವರಿ ಸಲಹಾ ಸಮಿತಿ ಸಭೆ | 3 ಸಾರ್ವಜನಿಕ ಅಭಿಪ್ರಾಯ ಸಂಗ್ರಹಣೆ ಸಭೆ

## ದೆಹಲಿಯಲ್ಲಿ ಸ್ಫೋಟ: ಬೀದರ್‌ನಲ್ಲಿ ಅಲರ್ಟ್



ಬೀದರ್.ನ.11:-ನವದೆಹಲಿಯ ಕೆಂಪುಕೋಟೆ ಬಳಿ ಸೋಮವಾರ ಬಾಂಬ್‌ಸ್ಫೋಟಸಂಭವಿಸಿರುವುದರಿಂದ ಮುನ್ನೆಚ್ಚರಿಕೆಕ್ರಮವಾಗಿಗಡಿಜಿಲ್ಲೆ ಬೀದರ್‌ನ ಪ್ರಮುಖ ಸ್ಥಳಗಳಲ್ಲಿ ಭದ್ರತೆ ಹೆಚ್ಚಿಸಲಾಗಿದೆ.

ನಗರದವಿಮಾನನಿಲ್ದಾಣ, ರೈಲು ನಿಲ್ದಾಣ, ಕೇಂದ್ರ ಬಸ್ ನಿಲ್ದಾಣ, ಸಿಖ್ ಧರ್ಮೀಯರಪವಿತ್ರ ಧಾರ್ಮಿಕ ಕ್ಷೇತ್ರ, ಗುರುದ್ವಾರಕ್ಕೆಭದ್ರತೆಹೆಚ್ಚಳ ಮಾಡಲಾಗಿದೆ.

ಈಎಲ್ಲಾಸ್ಥಳಗಳಲ್ಲಿಮಂಗಳವಾರ ಶ್ವಾನ ದಳದಿಂದ ತಪಾಸಣೆ ನಡೆಸಲಾಯಿತು. ಪ್ರತಿಯೊಬ್ಬರನ್ನೂ ತಪಾಸಣೆನಡೆಸಿಒಳಗೆಬಿಡಲಾಗುತ್ತಿದೆ. ಪೊಲೀಸರ ಗಸ್ತು ಹೆಚ್ಚಿಸಲಾಗಿದೆ. ಸಿಬ್ಬಂದಿಯನ್ನುನಿಯೋಜಿಸಲಾಗಿದೆ. ಬಾಂಬ್‌ನಿಷ್ಕ್ರಿಯದಳವನ್ನುಸನ್ನದ್ಧ ಸ್ಥಿತಿಯಲ್ಲಿ ಇರಿಸಲಾಗಿದೆ.

ಅದೇ ರೀತಿ ಜಿಲ್ಲೆಯ ಗಡಿ ಭಾಗದಚೆಕ್‌ಪೋಸ್ಟ್‌ಗಳಲ್ಲೂತೀವ್ರ ಕಟ್ಟೆಚ್ಚರ ವಹಿಸಲಾಗಿದೆ. ನೆರೆಯ ತೆಲಂಗಾಣ, ಮಹಾರಾಷ್ಟ್ರದಿಂದಬರುವ ವಾಹನಗಳ ಮೇಲೆ ವಿಶೇಷ ನಿಗಾ ಇರಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಕೊಲೆ: 6 ಜನ ಆರೋಪಿಗಳಿಗೆ ಜೀವಾವಧಿ ಶಿಕ್ಷೆ, ತಲಾ 10 ಸಾವಿರ ದಂಡ

ಕಲಬುರಗಿ,ನ.11-ಹಳೆಯ ವೈಮನಸ್ಸಿ ನಿಂದಮಾರಕಾಸ್ತ್ರಗಳಿಂದ ಹೊಡೆದುಯುವಕನೊಬ್ಬನನ್ನುಕೊಲೆ ಮಾಡಿದ 6 ಜನ ಆರೋಪಿಗಳಿಗೆ ಇಲ್ಲಿನ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಜೀವಾವಧಿಶಿಕ್ಷೆ ಹಾಗೂತಲಾ10ಸಾವಿರರೂಪಾಯಿ ದಂಡ ವಿಧಿಸಿ ತೀರ್ಪು ನೀಡಿದೆ.

ಸುರೇಶತಂದೆಹಣಮಂತಜಾಧವ, ನೀಲಕಂಠ ತಂದೆ ಶಿವಯೋಗಪ್ಪ ಮಮನಿ, ಕೃಷ್ಣತಂದೆಬಾಬುರಾವ ಜಮಾದಾರ, ಸುನೀಲ ತಂದೆ ಮಾರುತಿಲಾಡಂತಿ, ಅಂಬಿಕಾಗಂಡ ವಿಜಯಕುಮಾರಕೊಡೆಕಲ್‌ಮತ್ತು ಸಂತೋಷತಂದೆಚಂದ್ರಕಾಂತತಳವಾರ ಶಿಕ್ಷೆಗೆಗುರಿಯಾದಆರೋಪಿಗಳು.

ಆಳಂದ ತಾಲ್ಲೂಕಿನ ಸುಕ್ರವಾಡಿ ಗ್ರಾಮದ ದಯಾನಂದ ತಂದೆ ಶಿವಶರಣಪ್ಪಲಾಡಂತಿ (26) ಎಂಬ ಯುವಕನನ್ನುಹಳೆವೈಮನಸ್ಸಿ ನಿಂದ 24.06.2022ರಂದುಕಲಬುರಗಿನಗರದ ಹೊರವಲಯದಲ್ಲಿರುವವಾಜಪೇಯಿ ಬಡಾವಣೆಹತ್ತಿರರಸ್ತೆಯಪಕ್ಕದಲ್ಲಿ ಮಾರಕಾಸ್ತ್ರಗಳಿಂದಹೊಡೆದುಕೊಲೆ ಮಾಡಲಾಗಿತ್ತು. ಈಕೊಲೆಪ್ರಕರಣಕ್ಕೆ ಸಂಬಂಧಿಸಿದಂತೆವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪಿಐಸುಶೀಲಕುಮಾರ ಅವರುತನಿಖೆನಡೆಸಿನ್ಯಾಯಾಲಯಕ್ಕೆ ದೋಷಾರೋಪಣೆಪತ್ರಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲದ ನ್ಯಾಯಾಧೀಶ ಮೋಹನ್ ಭಾಗದಂಡಿ ಅವರು ಆರೋಪಿತರಾದಸುರೇಶಜಾಧವ,

2ನೇ ಪುಟನೋಡಿ

# ಪ್ರತೀಕಾರಕ್ಕೆ ಸಜ್ಜಾದ ಸೇನೆ

## ಉಗ್ರರ ದಾಳಿಯ ಪ್ರತೀಕಾರಕ್ಕೆ ಸಜ್ಜಾದ ಸೇನೆ ಆಪರೇಷನ್ ಸಿಂಧೂರ್ 2.0ಗೆ ನಾಂದಿಯಾಗುತ್ತಾ ದೆಹಲಿ ಸ್ಫೋಟ

## ರಾಜ್ಯದೆಲ್ಲೆಡೆ ಕಟ್ಟೆಚ್ಚರಕ್ಕೆ ಸಿಎಂ ಸೂಚನೆ



ಬೆಂಗಳೂರು,ನ.11-ದೆಹಲಿಯ ಕೆಂಪುಕೋಟೆಬಳಿಸಂಭವಿಸಿದಕಾರ್ ಬಾಂಬ್‌ಸ್ಫೋಟವನ್ನುರಾಜ್ಯಸರ್ಕಾರ ಅತ್ಯಂತಗಂಭೀರವಾಗಿಪರಿಗಣಿಸಿದ್ದು, ರಾಜಧಾನಿಬೆಂಗಳೂರುಸೇರಿದಂತೆ ಎಲ್ಲಜಿಲ್ಲಾಕೇಂದ್ರಗಳಲ್ಲೂತೀವ್ರ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚನೆ ನೀಡಿದ್ದೇನೆಎಂದುಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.

ಮೈಸೂರಿನಲ್ಲಿಸುದ್ದಿಗಾರರೊಂದಿಗೆ ಮಾತನಾಡಿದಅವರು, ಜನನಿಬಿಡ ಸ್ಥಳಗಳಲ್ಲಿ ಭದ್ರತೆಯನ್ನು ಹೆಚ್ಚಿಸಿ ಜನರಸುರಕ್ಷತೆಗೆಗಮನಕೊಡುವಂತೆ ಗೃಹ ಇಲಾಖೆಗೆ ಸೂಚಿಸಲಾಗಿದೆ. ರಾಜ್ಯದಲ್ಲಿ ಯಾವುದೇ ರೀತಿಯ ಅವಘಡಗಳಾಗದಂತೆಮುನ್ನೆಚ್ಚರಿಕೆ ಕ್ರಮಗಳನ್ನುಕೈಗೊಳ್ಳಲಾಗುತ್ತಿದೆ. ಸಾರ್ವಜನಿಕರೂಕೂಡಾಪೊಲೀಸ್ ಇಲಾಖೆಜತೆಸಹಕರಿಸಬೇಕುಎಂದರು.

ಕೇಂದ್ರಸರ್ಕಾರವೇಉತ್ತರಿಸಬೇಕು ಚುನಾವಣೆಯ ಸಂದರ್ಭದಲ್ಲೇ ಬಾಂಬ್‌ಬ್ಲಾಸ್ಟ್‌ಗಳುಆಗುತ್ತಿವೆ. ನಿನ್ನೆ ದೆಹಲಿ ಬಾಂಬ್ ಬ್ಲಾಸ್ಟ್ ಇವತ್ತಿನ ಬಿಹಾರಚುನಾವಣೆಮೇಲೆಪ್ರಭಾವ ಬೀರುತ್ತದಾ ಎಂಬ ಪ್ರಶ್ನೆಗೆ ಪ್ರತಿ ಚುನಾವಣಾವೇಳೆಬಾಂಬ್‌ಬ್ಲಾಸ್ಟ್‌ಗಳ ಬಗ್ಗೆ ಕೇಂದ್ರ ಸರ್ಕಾರವೇ ಹೇಳಬೇಕು. ಕೇಂದ್ರವೇ ತನಿಖೆ ನಡೆಸಿ, ಉತ್ತರಿಸಲಿ. ನಿನ್ನೆಯದೆಹಲಿ ಬ್ಲಾಸ್ಟ್ ಇವತ್ತಿನಬಿಹಾರಚುನಾವಣೆ ಮೇಲೆ ಪ್ರಭಾವ ಬೀರಬಹುದು ಎಂದರು. ಬೌಂಬ್ ಬ್ಲಾಸ್ಟ್‌ಗಳು ಆಗಬಾರದು. ಅಮಾಯಕರ ಜೀವಹಾನಿ ಬೇಸರದ ಸಂಗತಿ. ಭಾರತವನ್ನು ಒಂದು ಧರ್ಮದ ದೇಶಎನ್ನುವಪ್ರಶ್ನೆಗಳಿಗೂಉತ್ತರಿಸಿದ ಮುಖ್ಯಮಂತ್ರಿಗಳು, ಭಾರತ ಸಂವಿಧಾನ ಬದ್ಧ ಬಹುತ್ವ ದೇಶ ಎಂದರು. ದೆಹಲಿಬಾಂಬ್‌ಬ್ಲಾಸ್ಟ್‌ನಲ್ಲಿ ಅಮಾಯಕರುಮೃತಪಟ್ಟಿರುವುದಕ್ಕೆ ಮುಖ್ಯಮಂತ್ರಿಗಳುದುಃಖವ್ಯಕ್ತಪಡಿಸಿ. ಇಂತಹಘಟನೆಗಳುಆಗಬಾರದು. ಅಮಾಯಕರಸಾವುನೋವುತಂದಿದೆ ಎಂದರು.

**15ರಂದು ದೆಹಲಿಗೆ**

ಈ ತಿಂಗಳ 15 ರಂದು ದೆಹಲಿಗೆ

2ನೇ ಪುಟನೋಡಿ

**ಈ ಮೂವರು ವೈದರು ದೆಹಲಿಯ ಜನದಟ್ಟಣೆಯ ಪ್ರದೇಶದಲ್ಲಿ ಬಾಂಬ್ ಇಟ್ಟು, ದೂರ ನಿಯಂತ್ರಣದ ಮೂಲಕ ಸ್ಫೋಟಿಸಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.**




ನವದೆಹಲಿ,ನ.11:ಈಹಿಂದೆಪುಲ್ವಾಮದಲ್ಲಿ ಸಂಭವಿಸಿದ ಉಗ್ರರ ದಾಳಿಗೆ ಪ್ರತಿಕಾರವಾಗಿ ಪಾಕಿಸ್ತಾನ ಹಾಗೂ ಪಿಒಕೆಯಲ್ಲಿ ಭಾರತದ ಸೇನಾಪಡೆ ನಡೆಸಿದ ಆಪರೇಷನ್ ಸಿಂಧೂರ್ ಮಾದರಿಯಲ್ಲೆಮತ್ತೊಂದುಕಾರ್ಯಾಚರಣೆಗೆ ಸೇನಾಪಡೆಗಳು ಸಜ್ಜಾಗಿವೆ. ಸೋಮವಾರ ಸಂಜೆ ದೆಹಲಿಯ ಪ್ರತಿಷ್ಠಿತ ಕೆಂಪುಕೋಟೆ ಬಳಿ ಕಾರ್ ಬಾಂಬ್ ಸ್ಫೋಟ ಸಂಭವಿಸಿರುವುದನ್ನು ಗಂಭೀರವಾಗಿಪರಿಗಣಿಸಿರುವಕೇಂದ್ರಸರ್ಕಾರ ಉಗ್ರರ ಹೆಡೆಮುರಿ ಕಟ್ಟಲು ಪಣತೊಟ್ಟಿದೆ.

ಬುಧವಾರಸಂಜೆಪ್ರಧಾನಿನರೇಂದ್ರಮೋದಿ ಅಧ್ಯಕ್ಷತೆಯಲ್ಲಿಉನ್ನತಮಟ್ಟದಸಭೆನಡೆಯಲಿದೆ. ಸಭೆಗೆಮೂರುಸೇನಾಪಡೆಗಳಮುಖ್ಯಸ್ಥರು, ರಾಷ್ಟ್ರ?ಯ ಭದ್ರತಾ ಸಲಹೆಗಾರ, ಗುಪ್ತಚರ ವಿಭಾಗಸೇರಿದಂತೆಎಲ್ಲಾಹಿರಿಯಅಧಿಕಾರಿಗಳ ಸಭೆ ಕರೆಯಲಾಗಿದೆ. ಪ್ರಕರಣ ಕುರಿತಂತೆ ಕೂಲಂಕುಷವಾಗಿ ಮಾಹಿತಿ ಪಡೆಯಲಿರುವ ಪ್ರಧಾನಿ ನರೇಂದ್ರಮೋದಿ ಅವರು ಮುಂದೆ ಕೈಗೊಳ್ಳಬೇಕಾದ ಕಾರ್ಯಾಚರಣೆ ಕುರಿತು ಮಾಹಿತಿಪಡೆಯಲಿದ್ದಾರೆ. ಈದಾಳಿಯಹಿಂದೆ ಪಾಕಿಸ್ತಾನಮೂಲದಭಯೋತ್ಪಾದಕಸಂಘಟನೆ ಜೈಷ್-ಎ-ಮೊಹಮದ್‌ಕೈವಾಡವಿದೆಎಂದು ತನಿಖಾಸಂಸ್ಥೆಗಳುಶಂಕೆವ್ಯಕ್ತಪಡಿಸಿದೆ. ಆದರೆಈ ಕೃತ್ಯವೈದ್ಯಕೀಯವೃತ್ತಿಯಲ್ಲಿರುವಮೂವರು ವೈದ್ಯರು ಮತ್ತು ಒಬ್ಬ ಮಹಿಳಾ ವೈದ್ಯೆಯ ಸಹಾಯದೊಂದಿಗೆ ನಡೆದಿದೆ ಎನ್ನಲಾಗಿದೆ.

2ನೇ ಪುಟನೋಡಿ

## ಸೇಡಂ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ- ಡಾ. ಶರಣಪ್ರಕಾಶ ಪಾಟೀಲ್



ಖಾಚೂರ ಬ್ಯಾರೇಜ್ ಮೂಲದಿಂದ ನೀರು ಸರಬರಾಜು ಯೋಜನೆಯ ಶಂಕುಸ್ಥಾಪನೆ


ಕಲಬುರಗಿ,ನ.10.(ಕ.ವಾ.)-ಸೇಡಂ ಪಟ್ಟಣಕ್ಕೆಖಾಚೂರು ಬಾಂದಾರು ನೀರನ್ನುಪೂರೈಸುವಯೋಜನೆಗೆ ಅಡಿಗಲ್ಲಿಡಲಾಗಿದೆ. ಇದರಿಂದಬರುವ ದಿನಗಳಲ್ಲಿಪಟ್ಟಣದನೀರಿನಸಮಸ್ಯೆಗೆ ಶಾಶ್ವತಪರಿಹಾರದೊರಕಲಿದೆಎಂದು ಸೇಡಂಶಾಸಕರುಹಾಗೂರಾಜ್ಯದ ವೈದ್ಯಕೀಯ ಶಿಕ್ಷಣ,

2ನೇ ಪುಟನೋಡಿ

## ದೆಹಲಿ ಸ್ಫೋಟದ ಪಾಕ್ ಕೈವಾಡ

ನವದೆಹಲಿ,ನ.11- ದೆಹಲಿಯ ಸ್ಫೋಟಪ್ರಕರಣಲ್ಲಿಪಾಕಿಸ್ತಾನಮೂಲದ ಭಯೋತ್ಪಾದಕ ಘಟಕ ಜೈಶ್-ಎ-ಮೊಹಮದ್ (ಜೆಇಎಂ) ಮತ್ತು ಅನ್ಸರ್ ಘಜ್ವತ್-ಉಲ್-ಹಿಂದ್‌ನ ಸಂಭಾವ್ಯ ಪಾತ್ರ ಸೇರಿದಂತೆ ಗುಪ್ತಚರ ಸಂಸ್ಥೆಗಳು ಭಾಗಿಯಾಗಿರಬಹುದೆಂಬ ಎಲ್ಲಾ ಆಯಾಮಗಳಲ್ಲೂ ಪರಿಶೀಲನೆ ನಡೆಸುತ್ತಿವೆ. ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಗಳಿಂದ ದೆಹಲಿಯ ಜನದಟ್ಟಣೆಯ ಸ್ಥಳಗಳಲ್ಲಿ ಸಂಭಾವ್ಯ ಭಯೋತ್ಪಾದಕ ದಾಳಿಯ ಬಗ್ಗೆರಾಜ್ಯ ಕಾನೂನುಜಾರಿಸಂಸ್ಥೆಗಳಿಗೆ ಎಚ್ಚರಿಕೆನೀಡಲಾಗಿತ್ತು ಎಂದು ತನಿಖಾ ಸಂಸ್ಥೆಗಳು ತಿಳಿಸಿವೆ.

## ಬಿಜೆಪಿ ಜಿಲ್ಲಾ ಯುವ ಮೋರ್ಚಾದಿಂದ ಪ್ರತಿಭಟನೆ: ಜೈಲಲ್ಲಿ ಕೈದಿಗಳಿಗೆ ರಾಜಾತಿಥ್ಯ ಗೃಹ ಸಚಿವ ಡಾ. ಪರಮೇಶ್ವರ ರಾಜಿನಾಮೆ ಕೊಡಲಿ



ಯಾದಗಿರಿ: ಬೆಂಗಳೂರಿನಪರಪ್ಪನಅಗ್ರಹಾರದಲ್ಲಿ ಕೈದಿಗಳಿಗೆ ರಾಜಾತಿಥ್ಯ ಸಿಗುತ್ತಿದ್ದು, ಸರ್ಕಾರದ ಲೋಪವೇ ಇದಕ್ಕೆ ಕಾರಣ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಯುವ ಮೋರ್ಚಾದಿಂದ ಮಂಗಳವಾರ ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆಪ್ರತಿಭಟನೆನಡೆಸಲಾಯಿತು. ಪರಪ್ಪನ ಅಗ್ರಹಾರಜೈಲುಒಂದುರೀತಿನೈಟ್‌ಕ್ಲಬ್ ಆಗಿ, ಮನರಂಜನಾಕ್ಲಬ್ ಆಗಿಪರಿವರ್ತನೆಗೊಂಡಿದೆ. ಭಯೋತ್ಪಾದಕರು, ಐಎಸ್‌ಐಏಜೆಂಟರು, ಮುಸ್ಲಿಂ ಮೂಲಭೂತವಾದಿಗಳುಇವರೆಲ್ಲರಿಗೂ ಜೈಲಲ್ಲಿ ಟಿ.ವಿ, ಮೊಬೈಲ್ ಫೋನ್, ಗುಂಡುತುಂಡುಗಳ ವ್ಯವಸ್ಥೆಕಲ್ಪಿಸಲಾಗುತ್ತಿದ್ದು, ಎಲ್ಲವೂಬಹಳಸರಾಗವಾಗಿ ನಡೆಯುತ್ತಿದ್ದರೂರಾಜ್ಯ ಸರಕಾರವುಕಣ್ಮುಚ್ಚಿ ಕುಳಿತಿರುವುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ ಎಂದು ಪದಾಧಿಕಾರಿಗಳು ಆರೋಪಿಸಿದರು.

ಪೊಲೀಸ್ ಠಾಣೆಗಳನ್ನು ಇವರುಕಾಂಗ್ರೆಸ್ ಕಚೇರಿ ಮಾಡಿದ್ದಾರೆ, ಈ ಸರಕಾರದಕುಮ್ಮಕ್ಕಿನಿಂದಲೇ ದೇಶದ್ರೋಹಿಗಳಿಗೆಐಷಾರಾಮಿವ್ಯವಸ್ಥೆಗಳನ್ನು ಪರಪ್ಪನ ಅಗ್ರಹಾರ ಜೈಲಲ್ಲಿ ಮಾಡಲಾಗಿದೆ. ರಾಜ್ಯದಲ್ಲಿಭ್ರಷ್ಟಾಚಾರತಾಂಡವವಾಡುತ್ತಿದ್ದು,

2ನೇ ಪುಟನೋಡಿ

## ವರದಿ ಮಕ್ಕಳ ಸುನ್ನಿತ ಭಾವಕ್ಕೆ ಧಕ್ಕೆ ತರದಿರಲಿ: ಸ್ವಪ್ನ




ಬೆಂಗಳೂರು: ಆರೋಗ್ಯಕುರಿತಸ್ಟೋರಿ ಅಥವಾವರದಿಗಳನ್ನುಮಾಡುವಾಗ ವರದಿಗಾರರುತಲಸ್ಪರ್ಶಿ ವಿವೇಚನೆ ಬಳಸಬೇಕು ಎಂದು ಪ್ರೊ. ಸ್ವಪ್ನ ಅವರು ಅಭಿಪ್ರಾಯಪಟ್ಟಿದ್ದಾರೆ.

ಮೈಸೂರುವಿವಿಪತ್ರಿಕೋದ್ಯಮ ವಿಭಾಗ, ಯುನಿಸೆಫ್ ಜಂಟಿಯಾಗಿ ಇಲ್ಲಿಆಯೋಜಿಸಿದ್ದಬದಲಾವಣೆಗೆ ಮಾಧ್ಯಮಕಾರ್ಯಾಗಾರದಲ್ಲಿಅವರು ಮಾತನಾಡಿ, ವಿಶೇಷವಾಗಿಮಕ್ಕಳಬಗ್ಗೆ, ಅವರಆರೋಗ್ಯ ಕುರಿತುಅದರಲ್ಲೂ ಮುಖ್ಯವಾಗಿ ಕ್ಯಾನ್ಸರ್ ನಂಥ ಮಾರಕಕಾಯಿಲೆಯಪೂರ್ವಾಪರ ವರಿದಿಗಳನ್ನುದಾಖಲಿಸುವಾಗಅನೇಕ ಅಂಶಗಳನ್ನುಗಮನದಲ್ಲಿರಿಸಬೇಕು. ವಸ್ತು ನಿಷ್ಠ ವಿಷಯ ವಿಶ್ಲೇಷಣೆಗೆ ಒತ್ತುಕೊಡಬೇಕು. ಸಂಬಂಧಿತ ವಿಷಯದಪರಿಣತರನ್ನುಸಂಪರ್ಕಿಸಿ ಕೋಟ್‌ಗಳನ್ನುಪಡೆಯಬೇಕುಎಂದು ಸಲಹೆನೀಡಿದ್ದಾರೆ. ಬದಲಾಗುತ್ತಿರುವ ತಂತ್ರಜ್ಞಾನದಧಾವಂತದಲ್ಲಿನಾವು ಮಾನವೀಯ ಮೌಲ್ಯಗಳನ್ನು ಮರೆಯುತ್ತಿದ್ದೇವೆ.

ಎಷ್ಟೋಕಡೆಗೊತ್ತಿದ್ದೋ, ಗೊತ್ತಿಲ್ಲದೆಯೋ ಬಾಲಾಪರಾಧಿಗಳಾಗುವ ಮಕ್ಕಳ ಫೋಟೋಗಳನ್ನುಎಡಿಟ್ ಮಾಡದೆ ಪ್ರಕಟಿಸುತ್ತಾರೆ. ಇದು ಅಕ್ಷಮ್ಯ ಅಪರಾಧವಾಗಿದೆ. ವರದಿಗಾರರು ಮಕ್ಕಳ ಮನಸಿನ

2ನೇ ಪುಟನೋಡಿ

## ಕೇಂದ್ರ ಸ್ಥಾನದಲ್ಲಿ ವಾಸಿಸದ ಅಧಿಕಾರಿಗಳ ವಿರುದ್ಧ ಕ್ರಮ: ಸಿಎಂ ಸಿದ್ದರಾಮಯ್ಯ

ಬೆಂಗಳೂರು, ಅ.11: ಎಲ್ಲಾಅಧಿಕಾರಿಗಳುಇನ್ನೂ ಮುಂದೆತಾವುನಿರ್ವಹಿಸಿದ ಕೆಲಸ, ಎಲ್ಲಿಗೆಭೇಟಿನೀಡಲಾಗಿತ್ತು, ಅಲ್ಲಿ ಏನು ಸೂಚನೆನೀಡಲಾಗಿದೆ ಎಂಬ ಬಗ್ಗೆ ಡೈರಿಬರೆಯಲುಆದೇಶಿಸಿರುವುದಾಗಿಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನಲ್ಲಿಕೆಡಿಪಿಸಭೆಯಕುರಿತುಇಂದುಬೆಳಗ್ಗೆಸುದ್ದಿಗೋಷ್ಠಿಯಲ್ಲಿಮಾಹಿತಿ ನೀಡಿದಅವರು, ಸರ್ಕಾರಿಅಧಿಕಾರಿಗಳುಯಾವುದೇಇಲಾಖೆಯಾದರೂಕೇಂದ್ರ ಸ್ಥಾನದಲ್ಲೇ ವಾಸಿಸಬೇಕು, ತಾಲ್ಲೂಕು ಮತ್ತು ಪಂಚಾಯತ್ ಮಟ್ಟದಲ್ಲಿ ಕೆಲಸ ಮಾಡುವವರುಜಿಲ್ಲಾಮಟ್ಟದಲ್ಲಿನೆಲೆಸುವುದು, ತಾಲ್ಲೂಕುಹಾಗೂಗ್ರಾಮಗಳಿಗೆ ಪ್ರತಿನಿತ್ಯ ಸಂಚರಿಸುವುದು ಸರಿಯಲ್ಲ. ಕೇಂದ್ರ ಸ್ಥಾನದಲ್ಲೇ ವಾಸಿಸಬೇಕು ಮತ್ತು ಕಚೇರಿಯಲ್ಲಿಹಾಜರಿದ್ದು ಜನರಸಮಸ್ಯೆ ಸ್ಪಂದಿಸಬೇಕು ಎಂದು ಈ ಮೊದಲೇ ಸೂಚಿಸಿದ್ದೇನೆ. ಕೇಂದ್ರ ಸ್ಥಾನದಲ್ಲಿ ವಾಸವಿಲ್ಲದ ಅಧಿಕಾರಿಗಳು ಹಾಗೂಸಿಬ್ಬಂದಿಗಳ ವಿರುದ್ಧ ವರದಿನೀಡುವಂತೆಜಿಲ್ಲಾಧಿಕಾರಿಗಳಿಗೆಸೂಚನೆ ನೀಡಲಾಗಿದೆ. ವರದಿ ಬಂದ ಬಳಿಕ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಜಾತಿ ಆದಾಯ ಮತ್ತು ಜಾತಿ ಸಿಂಧು ಪ್ರಮಾಣ ಪತ್ರಗಳನ್ನು ನೀಡುವ ವಿಚಾರದಲ್ಲಿ ನಿಧಾನ ಮಾಡಬಾರದು.

## ಸಂವಿಧಾನ ಉಳಿವಿಗಾಗಿ ಮತ ಚಲಾಯಿಸಿ: ಪ್ರಿಯಾಂಕಾ ಗಾಂಧಿ



ನವದೆಹಲಿ, ನ. 11 (ಪಿಟಿಐ) ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿವಾದ್ರಾ ಅವರು, ಬಿಹಾರದ ಜನರುಉದ್ಯೋಗ, ಶಿಕ್ಷಣ, ಆರೋಗ್ಯ ಮತ್ತುಕೈಗಾರಿಕೆಹಾಗೂಪ್ರಜಾಪ್ರಭುತ್ವ ಮತ್ತು ಸಂವಿಧಾನದ ರಕ್ಷಣೆಗಾಗಿ ಮತಚಲಾಯಿಸಬೇಕೆಂದುಮನವಿ ಮಾಡಿಕೊಂಡಿದ್ದಾರೆ.

ಬಿಹಾರದ 122 ಕ್ಷೇತ್ರಗಳಿಗೆ ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ಅತ್ಯಂತಕಠಿಣವಾದವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಹಂತದಲ್ಲಿ ಮತದಾನ ನಡೆಯುತ್ತಿರುವಾಗ ಅವರ ಈ ಹೇಳಿಕೆ ಹೊರಬಿದ್ದಿದೆ.

ಮತದಾನ ಬೆಳಿಗ್ಗೆ 7 ಗಂಟೆಗೆ ಪ್ರಾರಂಭವಾಯಿತು ಮತ್ತು ಸಂಜೆ 5 ಗಂಟೆಯವರೆಗೆ ಮುಂದುವರಿಯುತ್ತದೆ. ಬಿಹಾರದಲ್ಲಿ ಇಂದು ಎರಡನೇ ಮತ್ತು ಅಂತಿಮ ಹಂತದಮತದಾನ. ಪ್ರಜಾಪ್ರಭುತ್ವದಈ ಮಹಾಉತ್ಸವದಲ್ಲಿಉತ್ಸಾಹದಿಂದ ಭಾಗವಹಿಸಲು ನಾನು ರಾಜ್ಯದ ಎಲ್ಲಾಸಹೋದರಸಹೋದರಿಯರಿಗೆ ಮನವಿಮಾಡುತ್ತೇನೆಎಂದುಅವರು ಎಕ್ಸ್ ನಲ್ಲಿ ಹಿಂದಿಯಲ್ಲಿ ಪೋಸ್ಟ್ ಮಾಡಿದ್ದಾರೆ.

ಉದ್ಯೋಗ, ಶಿಕ್ಷಣ, ಆರೋಗ್ಯ ಮತ್ತು ಕೈಗಾರಿಕೆಗಳಿಗೆ ಮತ ಚಲಾಯಿಸಿ, ಪ್ರಜಾಪ್ರಭುತ್ವಮತ್ತುಸಂವಿಧಾನದ ರಕ್ಷಣೆಗಾಗಿ, ಬಿಹಾರದ ಉಜ್ವಲ ಭವಿಷ್ಯಕ್ಕಾಗಿ ಮತ್ತು ನಿಮಗಾಗಿ ಸಮರ್ಪಿತವಾಗಿಕೆಲಸಮಾಡುವ ಸರ್ಕಾರವನ್ನುರಚಿಸಿಎಂದುಕಾಂಗ್ರೆಸ್ ಪ್ರಧಾನಕಾರ್ಯದರ್ಶಿ ಹೇಳಿದರು.

**ಬಾಲಿವುಡ್ ನಟ ಧರ್ಮೇಂದ್ರ ಆರೋಗ್ಯ ಸ್ಥಿರ**

# ಒಂದನೇ ಪುಟದಿಂದ

## ಜೀವಾವಧಿ ಶಿಕ್ಷೆ, ತಲಾ 10 ಸಾವಿರ ದಂಡ

ನೀಲಕಂಠ ಮಮನಿ, ಕೃಷ್ಣ ಜಮಾದಾರ, ಸುನೀಲ ಲಾಡಂತಿ, ಅಂಬಿಕಾ ಕೊಡೆಕಲ್ ಮತ್ತು ಸಂತೋಷ ತಳವಾರಗೆ ಜೀವಾವಧಿ ಶಿಕ್ಷೆ ಮತ್ತು ತಲಾ 10 ಸಾವಿರ ರೂ.ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ರಾಜ ಮಹೇಂದ್ರ ಅವರು ವಾದ ಮಂಡಿಸಿದ್ದರು.

## ಶಾಶ್ವತ ಪರಿಹಾರ- ಡಾ. ಶರಣಪ್ರಕಾಶ ಪಾಟೀಲ್

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ಅವರು ಹೇಳಿದ್ದಾರೆ.

ಮಂಗಳವಾರ ಸೇಡಂ ಪಟ್ಟಣದ ಸರ್ವೇ ನಂ. 705ರ ಆಶ್ರಯ ಕಾಲೋನಿಯಲ್ಲಿ ಕಲಬುರಗಿ ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಹಾಗೂ ಸೇಡಂ ಪುರಸಭೆ ವತಿಯಿಂದ ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಡಿ ಸೇಡಂ ಪಟ್ಟಣಕ್ಕೆ ಖಾಚೂರ ಬ್ಯಾರೇಜ್ ಮೂಲದಿಂದ ನೀರು ಸರಬರಾಜು ಯೋಜನೆಯ (ಅಂದಾಜು ಮೊತ್ತ ರೂ. 47.85 ಕೋಟಿಗಳು) ಶಂಕುಸ್ಥಾಪನೆಯನ್ನು ಪೂಜೆ ಮಾಡುವ ಮೂಲಕ ನೆರವೇಸಿಸಿ ಮಾತನಾಡಿದರು.

ಸೇಡಂ ಪಟ್ಟಣಕ್ಕೆ ಈಗ ಸಟಪಟನಹಳ್ಳಿ ಬಾಂದಾರಿನ ನೀರು ಪೂರೈಕೆ ಇದ್ದರೂ ಅಲ್ಲಲ್ಲಿ ಸಮಸ್ಯೆಯಾಗುತ್ತಿರೋದು 2004 ರಲ್ಲೇ ಮೊದಲಿಗೆ ಶಾಸಕನಾದಾಗ ಗಮನಕ್ಕೆ ಬಂತು. ಇದೀಗ ಅವೆಲ್ಲಾ ಸಮಸ್ಯೆಗೆ ಕಾಯಂ ಪರಿಹಾರವಾಗಿ ಈ ಯೋಜನೆ ರೂಪಿಸಲಾಗಿದೆ. ಇದರಿಂದ ಸೇಡಂನಲ್ಲಿ ಇನ್ನು ಒಂದೂವರೆ ವರ್ಷದ ನಂತರ ಪ್ರತಿಯೊಬ್ಬರಿಗೂ 135 ಲೀಟರ್ ಶುದ್ಧ ನೀರು ಲಭ್ಯವಾಗಲಿದೆ ಎಂದರು.

ಆಶ್ರಯ ಕಾಲೋನಿ, ಚಿಂಚೋಳಿ ರಸ್ತೆ, ಕಲಬುರಗಿ ರಸ್ತೆ ಸೇರಿದಂತೆ ಸೇಡಂನಲ್ಲಿ 5 ಕಡೆ ಹೊಸ ಮೇಲ್‌ಸ್ತರದ ಟ್ಯಾಂಕ್‌ಗಳ ನಿರ್ಮಾಣ ಮಾಡಲಾಗುತ್ತಿದೆ. ಇದರಿಂದ ಹೆಚ್ಚಿನ ನೀರು ಸಂಗ್ರಹಿಸಿ ಜನರಿಗೆ ತಲುಪಿಸುವ ಗುರಿ ಹೊಂದಲಾಗಿದೆ. ಸದರಿ ಕಾಮಗಾರಿ ಗುಣಮಟ್ಟದಿಂದ ಮಾಡುವಂತೆ ಸ್ಥಳದಲ್ಲಿದ್ದ ಗುತ್ತಿಗೆದಾರರು, ಅಧಿಕಾರಿಗಳಿಗೆ ಸಿವರು ಖಡಕ್ ಸೂಚನೆ ನೀಡಿದರು. ಸೇಡಂ ತಾಲೂಕು ಆಸ್ಪತ್ರೆ ಹಾಸಿಗೆ ಸಂಖ್ಯೆ 150ಕ್ಕೆ ಹೆಚ್ಚಿಸಲಾಗಿದೆ. ಪುರಸಬೆ ನಗರಸಭೆಯಾಗಿಸುವ ಕೆಲಸ ಸಾಗಿದೆ. 500 ಕೋಟಿ ರುನಲ್ಲಿ ಕಲ್ಯಾಣ ಪಥ, ಪ್ರಗತಿ ಪಥ ಸೇರಿದಂತೆ ಹಲವು ಯೋಜನೆಗಳಲ್ಲಿ ಸೇಡಂ ಸಂಪರ್ಕ ರಸ್ತೆ ಮರು ನಿರ್ಮಾಣ ಸಾಗಿದೆ. ಇದಲ್ಲದೆ ತಾಲೂಕು ಆಸ್ಪತ್ರೆಗೆ 5 ಕೋಟಿ ರೂ ಹೆಚ್ಚಿನ ಅನುದಾನ ತರಲಾಗಿದೆ. ಸೇಡಂ ಸೇರಿದಂತೆ ಕಲಬುರಗಿಯಲ್ಲಿ ಹೆಲ್ತ್ ಹಬ್ ನಿರ್ಮಾಣ ತಮ್ಮ ಗುರಿ ಎಂದರು. ಜಯದೇವ, ಕಿದ್ವಾಯಿ, ಸೂಪರ್ ಸ್ಪೇಶ್ಯಾಲಿಟಿ, ಟ್ರಾಮಾ ಕೇರ್ ಆಸ್ಪತ್ರೆಗಳು ಚೆನ್ನಾಗಿ ಕೆಲಸ ಮಾಡುತ್ತಿವೆ ಎಂದು ಸಮಾಧಾನ ಹೊರಹಾಕಿದ ಸಚಿವರು ಬಡವರು ಖಾಸಗಿ ಸಂಸ್ಥೆಗಳತ್ತ ಮುಖ ಮಾಡದೆ ಸರಕಾರಿ ಸಂಸ್ಥೆಗಳಿಗೆ ಬಂದು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಕರೆ ನೀಡಿದರು. ಸೇಡಂ ಪಟ್ಟಣದಲ್ಲಿ ಒಳ ಚರಂಡಿ ಜಾಲ ಬಲವರ್ಧನೆಗೂ ಕ್ರಮ ಕೈಗೊಳ್ಳಲಾಗಿದೆ. ಈ ಯೋಜನೆಯಡಿಯಲ್ಲಿ ಇನ್ನು 800 ಮೀಟರ್ ಕಾಮಗಾರಿ ಬಾಕಿ ಇದೆ. ಇದು ಜೋಡಣೆಯಾದಲ್ಲಿ ಒಳ ಚರಂಡಿ ಸಮಸ್ಯೆಯೂ ಬಗೆಹರಿಯಲಿದೆ. 56 ಕೋಟಿ ಯೋಜನೆ ಇದಾಗಿದ್ದು, ಈಗಾಗಲೇ ಎಸ್‌ಟಿಪಿ ಕೂಡ ಆಗಿದೆ ಎಂದು ಸಚಿವ ಡಾ. ಶರಣಪ್ರಕಾಶ ಹೇಳಿದರು. ಇಇ ನರಸಿಂಹ ರೆಡ್ಡಿ, ಸಂಜೀವ ಕುಮಾರ್ , ಎಸಿ ಪ್ರಭು ರೆಡ್ಡಿ, ತಹಶೀಲ್ದಾರ್ ಶ್ರೇಯಾಂಕ್ ಧನಶ್ರೀ, ಪುರಸಭೆ ಅಧ್ಯಕ್ಷ ವೀರೇಂದ್ರ ರುದನೂರ್, ಉಪಾಧ್ಯಕ್ಷೆ ಸೈಜಾದಬಿ ಸೇರಿದಂತೆ ಅನೇಕರಿದ್ದರು.

## ಪ್ರತೀಕಾರಕ್ಕೆ ಸಜ್ಜಾದ ಸೇನೆ

ಡಾ. ಉಮರ್, ಡಾ. ಮುಜಾಮಿಲ್ ಮತ್ತು ಡಾ. ಆದಿಲ್ ಸ್ಫೋ?ಟದಲ್ಲಿ ಭಾಗಿಯಾದ ಮುಖ್ಯ ಆರೋಪಿಗಳು. ಇವರೆಲ್ಲರೂ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಆದರೆ ಇವರ ನಿಜವಾದ ಗುರುತು ಜೈಷ್-ಎ-ಮೊಹಮದ್ ಸಕ್ರಿಯ ಸ್ಲಿ?ಪರ್ ಸೆಲ್ ಸದಸ್ಯರು ಎಂಬುದು ಬಯಲಾಗಿದೆ. ಈ ಸ್ಫೋ?ಟದಲ್ಲಿ 12 ಮಂದಿ ಸಾವನ್ನಪ್ಪಿದ್ದು, 50ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಈ ಪುರುಷ ವೈದ್ಯರಿಗೆ ಮಹಿಳಾ ವೈದ್ಯೆ ಡಾ. ಶಾಹೀನಾ ನೆರವು ನೀಡಿದ್ದಾರೆ ಎಂದು ಹೇಳಲಾಗಿದೆ. ಡಾ. ಶಾಹೀನಾ ದೆಹಲಿಯ ಪ್ರತಿಷ್ಠಿತ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದು, ಆಕೆಯ ಮೂಲಕವೇ ಬಾಂಬ್ ತಯಾರಿಕೆಗೆ ಅಗತ್ಯ ವಸ್ತುಗಳು ಮತ್ತು ಮಾಹಿತಿ ಸಂಗ್ರಹವಾಗಿದೆ ಎಂದು ತನಿಖಾಧಿಕಾರಿಗಳು ಹೇಳಿದ್ದಾರೆ. ಈ ಘಟನೆಗೆ ಭಾರತೀಯ ವಾಯುಪಡೆಯ ಆಪರೇಷನ್ ಸಿಂಧೂರಕ್ಕೆ ನೇರ ಪ್ರತೀಕಾರವೇ ಎಂದು ಅನುಮಾನ ವ್ಯಕ್ತವಾಗಿದೆ. ಆಪರೇಷನ್ ಸಿಂಧೂರವೇಳೆ (2025ರ ಮೇ ತಿಂಗಳಲ್ಲಿ) ಭಾರತೀಯ ವಾಯುಪಡೆ ಪಾಕಿಸ್ತಾನದ ಬಹಾವಲ್ಪುರ ಪ್ರದೇಶದ ಮೇಲೆ ದಾಳಿ ನಡೆಸಿತ್ತು. ಬಹಾವಲ್ಪುರದಲ್ಲಿ ಜೈಷ್-ಎ-ಮೊಹಮದ್‌ನ ಪ್ರಮುಖ ತರಬೇತಿ ಶಿಬಿರವೊಂದನ್ನು ಸಂಪೂರ್ಣ ಧ್ವಂಸಗೊಳಿಸಲಾಗಿತ್ತು. ಈ ದಾಳಿಯಲ್ಲಿ ಜೈಷ್ ಮುಖ್ಯಸ್ಥ ಮಸೂದ್ ಅಜರ್‌ನ ಸಮೀಪದ ಸಂಬಂಧಿಕರು ಸೇರಿದಂತೆ ಹಲವು ಉಗ್ರರನ್ನು ಕೊಲ್ಲಲಾಗಿತ್ತು. ಇದಕ್ಕೆ ಪ್ರತೀಕಾರ ತೀರಿಸಿಕೊಳ್ಳಲು ಜೈಷ್ ಸಂಘಟನೆಯು ತನ್ನ ಸ್ಲಿ?ಪರ್ ಸೆಲ್‌ಗಳನ್ನು ಸಕ್ರಿಯಗೊಳಿಸಿ, ದೆಹಲಿಯಲ್ಲಿ ದಾಳಿ ನಡೆಸಿರಬಹುದು ಎಂದು ಮೂಲಗಳು ತಿಳಿಸಿವೆ.

## ಕಟ್ಟೆಚ್ಚರಕ್ಕೆ ಸಿಎಂ ಸೂಚನೆ

ಹೋಗುತ್ತಿದ್ದೇನೆ. ದೆಹಲಿಯಲ್ಲಿ ಪಕ್ಷದ ಹಿರಿಯ ನಾಯಕರಾದ ಕಪಿಲ್ ಸಿಬಲ್ ಅವರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳುತ್ತಿದ್ದೇನೆ. ಅಂದೇ ವಾಪಸ್ ಬರವ ಅಂದಾಜಿದೆ. ಹೈಕಮಾಂಡ್ ಸಮಯ ಕೊಟ್ಟರೆ ವರಿಷ್ಠರನ್ನು ಭೇಟಿ ಮಾಡುತ್ತೇನೆ. ಇನ್ನೂ ಹೈಕಮಾಂಡ್‌ನ ಭೇಟಿಗೆ ಸಮಯ ಕೇಳಿಲ್ಲ ಎಂದರು.

## ಡಾ. ಪರಮೇಶ್ವರ ರಾಜಿನಾಮೆ ಕೊಡಲಿ

ಆದೇರೀತಿ ಜೈಲಿನ ವ್ಯವಸ್ಥೆಯೂ ಭ್ರಷ್ಟಾಚಾರದಲ್ಲೇ ಮುಳುಗಿಹೋಗಿದೆ. ಕಾಂಗ್ರೆಸ್ ಸರಕಾರದ ಕುಮ್ಮಕ್ಕು ಇಲ್ಲದಿದ್ದರೆ ಈ ರೀತಿ ಜೈಲಿನಲ್ಲಿ ವ್ಯವಸ್ಥೆ ಆಗಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಭಯೋತ್ಪಾದಕರಿಗೆ ಜೈಲಿನಲ್ಲೇ ಎಲ್ಲ ಅವಶ್ಯ ಸೌಲಭ್ಯ ನೀಡುವ ತೀರ್ಮಾನಕ್ಕೆ ರಾಜ್ಯದ ಕಾಂಗ್ರೆಸ್ ಸರಕಾರ ಬಂದ ಹಾಗಿದೆ. ಹೀಗೇ ಬಿಟ್ಟರೆ ಸಿದ್ದರಾಮಯ್ಯರ ಕಾಂಗ್ರೆಸ್ ಸರಕಾರ ದೇಶದ್ರೋಹಿಗಳ ಕೇಸನ್ನು ಹಿಂಪಡೆಯಲೂ ಹೇಸುವುದಿಲ್ಲ ಮಾನ್ಯ ಮುಖ್ಯಮಂತ್ರಿಗಳೆ ಮತ್ತು ಗೃಹ ಸಚಿವರೆ ಮಾನ ಮರ್ಯಾದೆ ಇದ್ದರೆ ತಕ್ಷಣ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಮಾಜಿ ಜಿಲ್ಲಾಧ್ಯಕ್ಷ ಮಾಜಿ ಜಿಲ್ಲಾಧ್ಯಕ್ಷ ಡಾ. ಶರಣಭೂಪಾಲರೆಡ್ಡಿ, ಬಿಜೆಪಿ ಯುವಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಆರ್ ಸಾಹುಕಾರ, ವೇಣುಗೋಪಾಲ್ ಜೇವರ್ಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರಶುರಾಮ್ ಕುರುಕುಂದಿ, ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವಿಂದ್ರನಾಥ ನಾದ್, ವೆಂಕಟರಡ್ಡಿ ಅಬ್ಬೆತುಮಕೂರ್, ದೇವರಾಜ ನಾಯಕ್ ಉಳ್ಳೆಸೂಗೂರು, ಜಿಲ್ಲಾ ಉಪಾಧ್ಯಕ್ಷ ಅಡಿವೆಪ್ಪ ಜಾಕ, ಸ್ವಾಮಿದೇವ ದಾಸನಕೇರಿ, ರಾಮು ರಾಠೋಡ, ಜಿಲ್ಲಾ ಕಾರ್ಯದರ್ಶಿ ಮಲ್ಲಿಕಾರ್ಜುನ ಹೋನಗೇರಾ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ ಕಾಡಂನೋರ್, ಚನ್ನವೀರಯ್ಯಸ್ವಾಮಿ, ಗೋವಿಂದಪ್ಪ ಕೊಂಚಟ್ಟಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುನಿತಾ ಚೌವ್ಹಾಣ, ರಮಾದೇವಿ ಕವಲಿ, ಕರೆಮ್ಮ, ಬಾಲಮ್ಮ, ಶಿವಲೀಲಾ, ಸಾಯಿಬಣ್ಣ ಚಂಡ್ರಿಕಿ, ಸಿ ಮಲ್ಲು ಕೋಲಿವಾಡ, ಮಂಜುನಾಥ್ ಗುತ್ತೇದಾರ, ಹಣಮಂತ ಬಂದಳ್ಳಿ, ಅಜಯ ಮಡ್ಡಿ, ಮಲ್ಲಿಕಾರ್ಜುನ್ ಬಂಗಿ, ವಿಶ್ವನಾಥ ಜಾಕನಹಳ್ಳಿ, ಮರಲಿಂಗ ಜಿನಿಕೇರಿ, ಮೌನೇಶ್ ತುಂಬಳ, ಬಸ್ಸು ಬಳಿಚಕ್ರ, ಶಿವು ಗಣಪೂರ, ಭೀಮು ದೇಸಾಯಿ, ತಿರುಪತಿ ಚೌವ್ಹಾಣ, ಸಲ್ಲು ದಂಡಿನ, ಆಕಾಶ ಗುತ್ತೇದಾರ, ಶಿವು ಗುತ್ತೇದಾರ, ನಾಗರೆಡ್ಡಿ, ಸಾಯಿ ಕುಮಾರ್, ಸಲ್ಲು ಯಡಳ್ಳಿ ಸೇರಿದಂತೆ ಪಕ್ಷದ ಯುವ ಮೋರ್ಚಾ ಕಾರ್ಯಕರ್ತರು ಮುಖಂಡರು ಉಪಸ್ಥಿತರಿದ್ದರು..

## ಭಾವಕ್ಕೆ ಧಕ್ಕೆ ತರದಿರಲಿ: ಸ್ವಪ್ನ

ಭವಿಷ್ಯದಲ್ಲಿ ಅವರ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ದಟ್ಟವಾಗುತ್ತದೆ ಎಂದು ವಿವರಿಸಿದ್ದಾರೆ. ನಗರ ಪ್ರದೇಶ ಹೊರತಾಗಿ ಗ್ರಾಮೀಣ ಭಾಗದಲ್ಲಿ ಆರೋಗ್ಯ, ಶಿಕ್ಷಣದ ಬಗ್ಗೆ ಹೆಚ್ಚೆಚ್ಚು ವರದಿಗಳು ಪ್ರಕಟಗೊಳ್ಳಬೇಕು. ಇಂದಿಗೂ ನಾಡಿನ ಹಲವು ಹಿಂದುಳಿದ ಪ್ರದೇಶಗಳಲ್ಲಿ ಬಾಲ್ಯವಿವಾಹವಾಗುತ್ತಿವೆ. ಇಂಥ ಕಡೆ ಗ್ರೌಂಡ್ ಲೆವೆಲ್‌ಗೆ ಇಳಿದು ಸಮಾಜದ ಕಣ್ಣು ತೆರೆಯುವಂಥ ಸ್ಟೋರಿಗಳನ್ನು ಮಾಡುವುದು ಇಂದಿನ ತುರ್ತು ಅಗತ್ಯ ಎಂದು ತಿಳಿಸಿದ್ದಾರೆ.

# ಜಿಲ್ಲೆಗೆ ಸೋಯಾಬೀನ್ ಘಟಕ ಮಂಜೂರಿ
# ಕೇಂದ್ರ ಸರ್ಕಾರಕ್ಕೆ ಅಭಿನಂದನೆ



ಬೀದರ್. ನ. 11 :– ಬೀದರ ಜಿಲ್ಲೆಯಲ್ಲಿ ಸುಮಾರು 2.50ಲಕ್ಷ ಹೇಕ್ಟೇರ್ ಭೂಮಿಯಲ್ಲಿ ಹಾಗೂ ದೇಶದಲ್ಲಿಯೇ ಉತ್ಕೃಷ್ಟ ರ್ಜೆಯ ಸೋಯಾಬಿನ್ ಬೆಳೆ ಬೆಳೆಯುತ್ತಿದ್ದಾರೆ. ಆದರೆ ಈ ಸೋಯಾಬಿನ್ ಸಂಸ್ಕರಣೆ ಘಟಕಗಳಾಗಲಿ, ಸೋಯಾಬಿನ್ ಎಣ್ಣೆ ಸಂಸ್ಕರಣೆ ಘಟಕಗಳಾಗಲಿ ಇರುವುದಿಲ್ಲ. ಇತ್ತೀಚಿನ ದಿನಗಳಲ್ಲಿ ಸೋಯಾಬಿನ್ ಕಚ್ಚಾ ಉತ್ಪನ್ನಗಳಿಂದ ವೈದ್ಯಕೀಯ ಕ್ಷೇತ್ರಗಳಲ್ಲಿ ಉತ್ತಮ ರ್ಜೆಯ ಪ್ರೊಟೀನ್ ಯುಕ್ತ ಔಷಧಗಳನ್ನಾಗಿ ಬಳಸುವುದರ ಜೊತೆಗೆ ಇನ್ನಿತರ ಉತ್ಪನ್ನಗಳು ತಯಾರಿಸುವುದು ಉದಾ:– ಹಾಲು, ಮೊಸರು, ತುಪ್ಪ, ಪನ್ನಿರ, ಐಸ್ಕ್ರಿಂ, ಮತ್ತು ಸಿಹಿ ತಿನಿಸುಗಳು ಉತ್ಪಾದಿಸಲು ಸಹಕಾರಿಯಾಗಿ ಇದಕ್ಕೆ ಪೂರಕ ಕೈಗಾರಿಕೆಗಳು ಸ್ಥಾಪಿಸಬೇಕು, ಇದರಿಂದ ಬೀದರ ಕೃಷಿ ಬೆಳೆಗಾರರಿಗೆ, ಬೀದರ ಮಾರುಕಟ್ಟೆಗೆ ಅನುಕೂಲವಾಗುತ್ತದೆ, ಹಾಗೂ ರೈತರಿಗೆ ಉಪಯುಕ್ತ ಬೆಲೆ ಸಿಕ್ಕು ರೈತರ ರ್ಥಿಕ ಬೆಳವಣಿಗೆ ಆಗುವದರ ಜೊತೆಗೆ ಯುವಕರಿಗೆ ಉದ್ಯೋಗವಕಾಶಗಳು ಹುಟ್ಟಿಕೊಳ್ಳುತ್ತವೆ. ಸೋಯಾಬಿನ್ ಉತ್ಪನ್ನ ನೆರೆ ರಾಜ್ಯಗಳಾದ ಮಹಾರಾಷ್ಟ್ರ, ಆಂದ್ರಪ್ರದೇಶ ಹಾಗೂ ತೆಲಂಗಾಣಾ ಪ್ರದೇಶಕ್ಕೆ ಹೋಗದೇ ಸ್ಥಳೀಯವಾಗಿ ಬಳಕೆಯಾಗುವುದಕ್ಕೆ ಅನುಕೂಲ ಮಾಡಿಕೊಡಬೇಕು. ಎಂಬ ಎಲ್ಲ ಮಾಹಿತಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯ ರ್ಕಾರಕ್ಕೆ ಮತ್ತು ಕೇಂದ್ರ ರ್ಕಾರಕ್ಕೆ ಸತತ ಪತ್ರ ವ್ಯವಹಾರ ಮಾಡಿದುದರ ಫಲವಾಗಿ ಇಂದು ಕೇಂದ್ರ ರ್ಕಾರದ ಮಾನ್ಯ ಹಣಕಾಸು ಮಂತ್ರಿಗಳು ಹಾಗೂ ಬೀದರ ಜಿಲ್ಲೆಯ ಜನಪರ ಅಪಾರ ಕಾಳಜಿಯುಳ್ಳ ಮಾನ್ಯ ಜಿಲ್ಲಾಧಿಕಾರಿಗಳಾದ ಶ್ರೀಮತಿ ಶಿಲ್ಪಾ ರ್ಮಾರವರ ಪ್ರಯತ್ನದ ಫಲದಿಂದ ಬೀದರ ಜಿಲ್ಲೆಗೆ "ಸೋಯಾಬಿನ್ ಸಂಸ್ಕರಣೆ ಘಟಕ ಮಂಜೂರಿಯಾಗಿದೆ.

ಕೇಂದ್ರದ ಹಣಕಾಸು ಮಂತ್ರಾಲಯದ ಮಾನ್ಯ ಹಣಕಾಸು ಸಚಿವರ ಸ್ವತಃ ಇಲಾಖೆಯಿಂದ ರೂ 50–00ಲಕ್ಷಗಳು ಮಂಜುರಿ ಮಾಡಿದಕ್ಕಾಗಿ ಹಾಗೂ ಮಂಜುರಿಗೆ ಕಾರಣಿಭೂತರಾದ ಮಾನ್ಯ ಜಿಲ್ಲಾಧಿಕಾರಿಗಳಾದ ಶ್ರೀಮತಿ ಶಿಲ್ಪಾ ರ್ಮಾರವರಿಗೂ ಮಾನ್ಯ ಕೇಂದ್ರ ಹಣಕಾಸು ಸಚಿವೆ ಶ್ರೀಮತಿ ನರ್ಮಲಾ ಸೀತಾರಾಮನ ರವರಿಗೂ ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರು ಶ್ರೀ ಬಿ.ಜಿ ಶೆಟಕಾರಜಿ, ಉಪಾಧ್ಯಕ್ಷರುಗಳಾದ ಶ್ರೀ ಸೋಮಶೇಖರ ಪಾಟೀಲಜಿ (ಗಾದಗಿ), ಡಾ.ರಜನಿಶ ವಾಲಿಜಿ, ಡಾ. ವೀರೆಂದ್ರ ಶಾಸ್ತ್ರೀಜಿ ಗೌರವ ಕಾರ್ಯದರ್ಶಿಗಳು, ಶ್ರೀ ಮಡಿವಾಳಪ್ಪ ಗಂಗಶೆಟ್ಟಿಜಿ ಖಜಾಂಚಿಗಳು, ಶ್ರೀ ರಾಜಶೇಖರ ಮಿಟಕರಿ ಜಂಟಿ ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಸದಸ್ಯರುಗಳು ವ್ಯಕ್ತ ಮಾಡಿ ಬೀದರ ಜಿಲ್ಲೆಯ ರೈತರು ಮತ್ತು ವ್ಯಾಪಾರೋದ್ಯಮಿಗಳ ಪರವಾಗಿ ಹಾರ್ದಿಕ್ ಅಭಿನಂದನೆಗಳು ಹಾಗೂ ಧನ್ಯವಾದಗಳು ಸಲ್ಲಿಸುತ್ತೇವೆ.

## ಇಂದು ವಿದ್ಯುತ್ ವ್ಯತ್ಯಯ

ಬೀದರ, ನವೆಂಬರ್.11 (ಕರ್ನಾಟಕ ವಾರ್ತೆ): 110/33–11ಕೆ.ವಿ ಉಪ-ವಿತರಣಾ ಕೇಂದ್ರ, ಕ.ವಿ.ಪ್ರ.ನಿ.ನಿ. ರಾಜೇಶ್ವರ (ಬಸವಕಲ್ಯಾಣ ಕಾರ್ಯ ಮತ್ತು ಪಾಲನೆ ಉಪ ವಿಭಾಗ) ವ್ಯಾಪ್ತಿಯ ಬರುವ 110ಕೆ.ವಿ ರಾಜೇಶ್ವರ ವಿದ್ಯುತ್ ಉಪ-ಕೇಂದ್ರದಲ್ಲಿ ತುರ್ತು ಕೆಲಸದ ಪ್ರಯುಕ್ತ ದಿನಾಂಕ: 13–11–2025 ರಂದು ಬೆಳಗ್ಗೆ 9 ರಿಂದ 4 ಗಂಟೆಯವರೆಗೆ ಗ್ರಾಮಾಂತರ ಪ್ರದೇಶಗಳಾದ 11ಕೆ.ವಿ ಹನಮಂತವಾಡಿ, ಗೊಗ್ಗಾ, ವೈನಯಾರ್ಡ, ರಾಜೋಳಾ, ತಡೋಳಾ, ಕವಡಿಯಾಳ, ರಾಜೇಶ್ವರ, ಯರಬಾಗ, ಪಂಡರಗೇರಾ, ಇಸ್ಲಾಂಪೂರ, ಮಾರ್ಗದ ಗ್ರಾಮಿಣ ಪ್ರದೇಶದಲ್ಲಿ ಹಾಗೂ ಸೌರ್ಯ ವಿದ್ಯುತ ಉತ್ಪಾದನೆ ಐ.ಪಿ.ಪಿ 11ಕೆ.ವಿ ಎನ್.ಟಿ.ಪಿ.ಪಿ ಸೋಲಾರ ಮತ್ತು 110ಕೆ.ವಿ ವರದಾ ಸೌರ್ಯ ವಿದ್ಯುತ ಮಾರ್ಗದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕಾರಣ ಗ್ರಾಹಕರು ಸಹಕರಿಸಬೇಕೆಂದು ಹುಮನಾಬಾದ 220ಕೆವಿ ಸ್ವೀಕರಣಾ ಕೇಂದ್ರದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಗ್ರ ಚಟುವಟಿಕೆಯಲ್ಲಿ ವೈದ್ಯರು ಭಾಗಿ: ಖಂಡನೆ



ಬೀದರ್.ನ.11:–ಉಗ್ರ ಚಟುವಟಿಕೆಗಳಲ್ಲಿ ವೈದ್ಯರು ಭಾಗಿಯಾಗಿರುವುದನ್ನು ಖ್ಯಾತ ಚರ್ಮರೋಗ ತಜ್ಞರೂ ಆದ ಆರೋಗ್ಯ ಭಾರತಿ ಅಧ್ಯಕ್ಷ ಡಾ. ಅಶೋಕಕುಮಾರ ನಾಗೂರೆ ತೀವ್ರವಾಗಿ ಖಂಡಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಉಗ್ರ ಜಾಲ ಭೇದಿಸಿ, ಬಂಧಿಸಿರುವ ಎಂಟು ಮಂದಿಯಲ್ಲಿ ಮೂವರು ವೈದ್ಯರಿರುವುದು ಆಘಾತಕಾರಿಯಾಗಿದೆ ಎಂದು ಹೇಳಿದ್ದಾರೆ.

ವೈದ್ಯ ವೃತ್ತಿ ಶ್ರೇಷ್ಠವಾದದ್ದು. ಹೀಗಾಗಿ ವೈದ್ಯರನ್ನು ದೇವರಿಗೆ ಹೋಲಿಸಲಾಗಿದೆ. ಆದರೆ, ವೈದ್ಯರು ಜೀವ ಉಳಿಸುವ ಪವಿತ್ರ ವೃತ್ತಿಯನ್ನು ಆಯ್ಕೆ ಮಾಡಿಕೊಂಡು, ಅಮಾಯಕರ ಜೀವ ತೆಗೆಯುವಂತಹ ಉಗ್ರ ಚಟುವಟಿಕೆಗಳಲ್ಲಿ ಪಾಲ್ಗೊಂಡಿರುವುದು ಸಮಾಜವನ್ನು ಬೆಚ್ಚಿ ಬೀಳಿಸಿದೆ ಎಂದು ತಿಳಿಸಿದ್ದಾರೆ.

ದೇಶದ ಕಾನೂನಿಗಿಂತ ಯಾರೂ ದೊಡ್ಡವರಲ್ಲ. ದೇಶ ವಿರೋಧಿ ಹಾಗೂ ಉಗ್ರ ಚಟುವಟಿಕೆಯಲ್ಲಿ ತೊಡಗಿದವರು ಯಾರೇ ಆಗಿದ್ದರೂ ಅವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಡಾ. ಶಿವಕುಮಾರ ಸ್ವಾಮೀಜಿ ಜಯಂತಿ ಮಹೋತ್ಸವ ಆರಂಭ
# ಆತ್ಮ–ಅನಾತ್ಮ ಜ್ಞಾನದಿಂದ ದುಃಖ ನಿವಾರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್.ನ.11:–ಆತ್ಮ–ಅನಾತ್ಮದ ಜ್ಞಾನದಿಂದ ಮಾತ್ರ ಜೀವನದ ದುಃಖ ನಿವಾರಣೆ ಸಾಧ್ಯವಿದೆ ಎಂದು ಸಿದ್ಧಾರೂಢ ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ನುಡಿದರು.


ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಮಂಗಳವಾರ ಆರಂಭವಾದ ಡಾ. ಶಿವಕುಮಾರ ಸ್ವಾಮೀಜಿ ಅವರ 82ನೇ ಜಯಂತಿ ಮಹೋತ್ಸವದ ಉದ್ಘಾಟನಾ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು.

ಉದ್ಧಾರವಾಗುತ್ತಾನೆ. ಜ್ಞಾನ ತೃಷೆ ಶಿಷ್ಯನಿಗಿರಬೇಕು. ತೀವ್ರ ಇಚ್ಛಾಶಕ್ತಿ ಇದ್ದವನೇ ಗುರುವಿಗೆ ಶರಣು ಹೋಗುತ್ತಾನೆ. ಆಸೆ ಬಿಟ್ಟವನೇ ಈಶನಾಗುತ್ತಾನೆ ಎಂದು ತಿಳಿಸಿದರು.

ಮಾತೆ ಆನಂದಮಯಿ ಮಾತನಾಡಿ, ಜಗತ್ತಿನಲ್ಲಿ ನಾನು ಅನ್ನುವುದೇ ಅಜ್ಞಾನ. ತಾನಾರು ಎಂದು ತಿಳಿಯದಿರುವುದೇ ಅಜ್ಞಾನಕ್ಕೆ ಕಾರಣ. ಮನುಷ್ಯ ಜನನ–ಮರಣವೆಂಬ ಭವ ಬಾಧೆಗೆ ಕಾರಣನಾಗುತ್ತಿದ್ದಾನೆ. ಜನ್ಮದಿಂದ ಜನ್ಮಕ್ಕೆ ಹೋಗುವುದೇ ಸಂಸಾರ

ಪ್ರಬೋಧಾನಂದಗಿರಿ ಸ್ವಾಮೀಜಿ, ಶರಣಾನಂದ ಸ್ವಾಮೀಜಿ, ಮಾತೆ ಜ್ಞಾನೇಶ್ವರಿ, ಮಾತೆ ಸುಶಾಂತಾ, ಮಾತೆ ಸಂಗೀತಾ, ಮಾತೆ ರಾಜೇಶ್ವರಿ, ಮಾತೆ ಶಶಿಕಲಾ, ಮಾತೆ ಸಂಪೂರ್ಣನಂದಮಯಿ, ಮಾತೆ ಅಮೃತಾನಂದ, ಮಾತೆ ನಿರಂಜನಾನಂದಮಯಿ, ಮಾತೆ ಮೇಘಾ, ಗೋಪಾಲಶಾಸ್ತ್ರಿ, ಸಾಧಕರಾದ ಮನೋಜ, ಸಿದ್ದು ಉಪಸ್ಥಿತರಿದ್ದರು.

ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಬಿ.ಜಿ. ಶೆಟಕಾರ್, ಬಸವರಾಜ ಜಾಬಶೆಟ್ಟಿ,



ಜನನ ಮೊದಲ, ಮರಣ ಎರಡನೇ ದುಃಖ. ದುಃಖಕ್ಕೆ ಮೂಲ ಅಜ್ಞಾನ. ದುಃಖಕ್ಕೆ ಕಾರಣ ತಿಳಿಯದಿದ್ದರೆ ಅದರಿಂದ ಪಾರಾಗಲು ಸಾಧ್ಯವಿಲ್ಲ ಎಂದು ತಿಳಿಸಿದರು.

ಕಲಬುರಗಿಯ ಮಾತೆ ಲಕ್ಷ್ಮಿದೇವಿ ಮಾತನಾಡಿ, ಜನ–ಮರಣದ ಬೇರು ಕತ್ತರಿಸಲು ಗುರು ಕೃಪೆ ಬೇಕೇ ಬೇಕು. ಶರೀರ, ಇಂದ್ರೀಯ ತಾನಾರೆಂದು ಅರಿಯಲು ಗುರುವಿಗೆ ಶರಣಾಗಬೇಕು. ಭಕ್ತಿ ಮಾರ್ಗ ಅಷ್ಟು ಸುಲಭವಲ್ಲ. ಅನಂತ ಜನ್ಮದ ಪುಣ್ಯದ ಫಲವಿದ್ದರೇನೇ ಅದು ಸಾಧ್ಯ ಎಂದು ಹೇಳಿದರು.

ಜಡಿಸಿದ್ಧ ಸ್ವಾಮೀಜಿ ಮಾತನಾಡಿ, ಗುರು ಎಂಬ ಎರಡಕ್ಷರ ತಿಳಿದರೆ ಶಿಷ್ಯ ಎಂದು ಹೇಳಿದರು.

ದಯಾನಂದ ಸ್ವಾಮೀಜಿ ಮಾತನಾಡಿ, ನಾನಾರೆಂಬುದ್ದನ್ನು ತಿಳಿಯುವುದೇ ಮನುಷ್ಯ ಮಾಡಬೇಕಾದ ಮೊದಲ ಕೆಲಸ. ಈ ತಿಳಿವಳಿಕೆ ಬರಬೇಕಾದರೆ ಗುರುವಿನ ಮಾರ್ಗದರ್ಶನ ಅವಶ್ಯಕ ಎಂದು ಹೇಳಿದರು.

ಸ್ವಾಮಿ ಸ್ವಾತ್ಮಾನಂದಗಿರಿ ಮಾತನಾಡಿ, ಶಿಷ್ಯನ ಹಿತ ಬಯಸುವವನು ಹಾಗೂ ಜನ–ಮರಣವೆಂಬ ಭವಾರಣ್ಯದಿಂದ ಪಾರು ಮಾಡುವ ಸಾಮರ್ಥ್ಯ ಇದ್ದವನೇ ಗುರು ಎಂದು ತಿಳಿಸಿದರು.

ಶಂಕರಾನಂದ ಸ್ವಾಮೀಜಿ, ಗಣೇಶಾನಂದ ಮಹಾರಾಜ, ಅದ್ವೈತಾನಂದ ಸ್ವಾಮೀಜಿ, ಶಿವಪ್ರಕಾಶಾನಂದ ಸ್ವಾಮೀಜಿ, ಸಿದ್ದೇಶ್ವರಿ ಮಾತೆ, ಪ್ರಭುಶೆಟ್ಟಿ ಮುದ್ದಾ, ಶಿವಶರಣಪ್ಪ ಸಾವಳಗಿ, ಉದಯಭಾನು ಹಲವಾಯಿ, ಮಡಿವಾಳಪ್ಪ ಗಂಗಶೆಟ್ಟಿ, ಸುಭಾಷ್ ಉಪ್ಪೆ, ವಿರೇಖಾ ಪಾಟೀಲ, ಸಹಜಾನಂದ ಕಂದಗೂಳ, ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ, ಡಾ. ಆನಂದ ಜಾಬಶೆಟ್ಟಿ, ಡಾ. ಚಂದ್ರಪ್ಪ ಭತಮುರ್ಗೆ, ಲಕ್ಷ್ಮಣ ಎಂ. ಪೂಜಾರಿ, ಬಸವರಾಜ ಮ್ಯಾಗೇರಿ, ನಾಗಪ್ಪ ಜಾನಕನೋರ, ಡಾ. ಚಂದ್ರಕಾಂತ ಹಳ್ಳಿ, ಡಾ. ವಿಜಯಕುಮಾರ ಬಿರಾದಾರ, ಸಾಧಕ ವಿನಾಯಕ ಪಾಲ್ಗೊಂಡಿದ್ದರು.

ಶ್ರೀಗಳ ಜಯಂತಿ ನಿಮಿತ್ತ ಶ್ರೀ ಸಿದ್ಧಾರೂಢ ಧರ್ಮಾರ್ಥ ಆಸ್ಪತ್ರೆ ನ. 15 ರವರೆಗೆ ವರೆಗೆ ಉಚಿತ ಆರೋಗ್ಯ

# ಕನ್ನಡ ಮಾತನಾಡಿದಾಗ ಮತ್ತು ಬಳಸಿದಾಗ ಮಾತ್ರ ಕನ್ನಡದ ಬೆಳವಣಿಗೆ ಸಾಧ್ಯ



ಔರಾದ್ : ಕನ್ನಡವನ್ನು ನಾವೆಲ್ಲರೂ ಮಾತನಾಡಿದಾಗ ಮತ್ತು ಬಳಸಿದಾಗ ಮಾತ್ರ ಕನ್ನಡದ ಬೆಳವಣಿಗೆ ಸಾಧ್ಯ ಎಂದು ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು ಹಾಗೂ ತಾಲೂಕು ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ವಿನಾಯಕ ವಾನಖಂಡೇ ನುಡಿದರು.

ವಕೀಲರ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು, ಕಾನೂನು ಸೇವೆಗಳ ಸಮಿತಿ ಹಾಗೂ ತಾಲೂಕು ವಕೀಲರ ಸಂಘ ಸಹಯೋಗದೊಂದಿಗೆ ನಡೆದ ಕನ್ನಡದಲ್ಲಿ ನ್ಯಾಯದ ಬೆಳಕು ಹಾಗೂ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿದರು.

ವಕೀಲ ಮಿತ್ರರು ಕನ್ನಡದಲ್ಲಿ ವಾದ ಮಾಡಬೇಕು. ವಾದಪತ್ರ ಕನ್ನಡದಲ್ಲಿ ಮಂಡಿಸಬೇಕು. ತೀರ್ಪುಗಳು ಕೂಡ ಕನ್ನಡದಲ್ಲಿಯೇ ನೀಡುವುದರ ಮೂಲಕ ಜನಸಾಮಾನ್ಯರಿಗೆ ಅನುಕೂಲವಾಗುತ್ತದೆ ಎಂದರು. ಬಳಿಕ ಡಿ.13 ರಂದು ನಡೆಯುವ ಬೃಹತ್ ಲೋಕ ಅದಾಲತ್‌ನ ಸಂಬಂಧಿತ ವಿವರಗಳ ಮಾಹಿತಿ ನೀಡಿದರು.

ವಕೀಲರ ಸಂಘದ ಅಧ್ಯಕ್ಷ ಬಾಲಾಜಿ ಕಂಬಾರ ಮಾತನಾಡಿ, ಕನ್ನಡಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ಇಂತಹ ಭವ್ಯ ಇತಿಹಾಸ ಹೊಂದಿರುವ ನಮ್ಮ ಕನ್ನಡ ಭಾಷೆ ಮತ್ತು ಸಂಸ್ಕೃತಿ ನಮ್ಮ ಉಸಿರಾಗಬೇಕು. ಕನ್ನಡದಲ್ಲಿಯೇ ವಾದ ಮಾಡುವ ತೀರ್ಪುಗಳ ನೀಡುವುದರಿಂದ ನಿತ್ಯ ನಿರಂತರ ಕನ್ನಡ ಬಳಕೆಯಾಗಲಿದೆ ಎಂದರು.

ಅಮರೇಶ್ವರ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಆರ್.ಪಿ ಮಠ ಮಾತನಾಡಿ, ಕನ್ನಡ ನಾಡಿನ ಸಂಸ್ಕೃತಿ ಸಂಸ್ಕಾರದ ಪ್ರತಿಬಿಂಬದಂತಿದ್ದು, ಕರ್ನಾಟಕದಲ್ಲಿ ನ್ಯಾಯದ ಬೆಳಕು ಕನ್ನಡದಲ್ಲಿ ಮೂಡಿ ಬರಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಜಿಹುಸೇನಸಾಬ ಯಾದವಾಡ ಅವರು ಸಮಾರಂಭ ಉದ್ಘಾಟಿಸಿದರು. ನ್ಯಾಯಾಲಯದಲ್ಲಿ ಕನ್ನಡದಲ್ಲಿಯೇ ವ್ಯವಹರಿಸುವ, ವಾದ ಮಾಡುವ ವಕೀಲರಾದ ರಮೇಶ ಅಲಮಾಜೆ, ಪುರುಷೋತ್ತಮ ದೇಸಾಯಿ ಹಾಗೂ ಅಶೋಕ ಹಾಲಕುಡೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ ಪ್ರಾಸ್ತಾವಿಕ ಮಾತನಾಡಿದರು. ಕಲ್ಯಾಣ ಕರ್ನಾಟಕ ಖಾಸಗಿ ಶಾಲಾ ಆಡಳಿತ ಮಂಡಳಿ ಸಂಘದ ಅಧ್ಯಕ್ಷ ಸಂಜೀವ ಶಟಕಾರ, ಸಹಾಯಕ

## ಮುಜಾಹಿದ್ ಕನ್ನಡ ಸೇವ ರತ್ನ ಪ್ರಶಸ್ತಿ.

ಬೀದರ್: ಸರ್ಕಾರಿ ಹೊರ ಗುತ್ತಿಗೆ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮುಜಾಹಿದ್ ಪಾಶಾ

ಸಾರ್ವಜನಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಸೇವಾ ಮನೋಭಾವನೆ ಹೊಂದಿ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಹಗಲಿರುಳು ಶ್ರಮಿಸುತ್ತಿರುವ ಮುಜಾಹಿದ್ ಪಾಷಾ ಅವರಿಗೆ ಶ್ರೀ ಕೇತಗಿ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಹಾಗೂ ಹಣ್ಣು ಪಾಜಿ ಗೆಳೆಯರ ಬಳಗದ



ವತಿಯಿಂದ ಸಾಮಾಜಿಕ ಕ್ಷೇತ್ರದಲ್ಲಿ ರಾಜ್ಯಮಟ್ಟದ ಕನ್ನಡ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

# ಹೃದಯ ತಜ್ಞ ವೈದ್ಯರ ನೇಮಕಾತಿಗಾಗಿ ಅರ್ಜಿ ಆಹ್ವಾನ

ಬೀದರ, ನವೆಂಬರ್.11 (ಕರ್ನಾಟಕ ವಾರ್ತೆ): 2025–26ನೇ ಸಾಲಿನ ಎನ್. ಹೆಚ್.ಎಂ ಯೋಜನೆಯಡಿಯಲ್ಲಿ ಬ್ರಿಮ್ಸ್ ಬೋಧಕ ಆಸ್ಪತ್ರೆ ಹೃದಯ ರೋಗ ಘಟಕ್ಕೆ ಹೃದಯ ತಜ್ಞ ವೈದ್ಯರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹರು ನವೆಂಬರ್.15 ರೊಳಗಾಗಿ ವೈಯಕ್ತಿಕವಾಗಿ/ ಮಿಂಚಂಚೆ (dpmbidar@gmail.com) ಮುಖಾಂತರ ಕಛೇರಿ ಸಮಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಎನ್.ಹೆಚ್.ಎಂ ವಿಭಾಗದಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ಅರ್ಜಿಯೊಂದಿಗೆ ವಿದ್ಯಾಭ್ಯಾಸದ ಹಾಗೂ ಇನ್ನಿತರೆ ಅಗತ್ಯ ಮೂಲದಾಖಲೆಗಳೊಂದಿಗೆ ಸ್ವಯಂ ದೃಢಿಕರಿಸಿದ ಒಂದು ಜೊತೆ ಝೆರಾಕ್ಸ್ ಪ್ರತಿ ಹಾಗೂ ತಮ್ಮ ಇತ್ತಿಚಿನ ಭಾವಚಿತ್ರವನ್ನು ಲಗತ್ತಿಸಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಎನ್.ಹೆಚ್.ಎಂ ಘಟಕ ಬೀದರ ಇಲ್ಲಿಗೆ ಅಥವಾ ಮೊಬೈಲ್ ಸಂಖ್ಯೆ: 9449843100 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳನ್ನು ಅಳವಡಿಸ್ಯಿ–ಬಳಿರಾಮ

ಬೀದರ, ನವೆಂಬರ್.11 (ಕರ್ನಾಟಕ ವಾರ್ತೆ): ಶಿಕ್ಷಣಕ್ಕಾಗಿ, ಭಾರತದ ಸ್ವಾತಂತ್ರ್ಯಕ್ಕಾಗಿ ನೀಡಿರುವ ಕೊಡುಗೆಗಳನ್ನು ಸ್ಮರಿಸಿ ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ನೈತಿಕ ಮೌಲ್ಯಗಳನ್ನು ಅಳವಡಿಸಿಕೊಂಡಿದ್ದಲ್ಲಿ ಮಾತ್ರ ಉತ್ತಮ ನಾಗರೀಕರಾಗಬಲ್ಲರು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಬಳಿರಾಮ ಕುಶಾಲರಾವ ತಿಳಿಸಿದರು. ಅವರು ಮಂಗಳವಾರ ಮೌಲಾನಾ ಅಬುಲ್ ಕಲಾಂ ಆಜಾದ್ ರವರ ಜನ್ಮದಿನಾಚರಣೆ ಅಂಗವಾಗಿ ರಾಷ್ಟ್ರೀಯ ಶಿಕ್ಷಣ ದಿನವನ್ನು ಅಲ್ಪಸಂಖ್ಯಾತರ ಅಧಿನದ ಎಲ್ಲಾ ಶಾಲಾ/ಕಾಲೇಜುಗಳಲ್ಲಿ ಶಿಕ್ಷಣದ ಮಹತ್ವವನ್ನು ಸಾರಲು ಶಿಕ್ಷಣ ಜಾಥಾ ಹಮ್ಮಿಕೊಂಡು ಹಾಗೂ ಜಿಲ್ಲಾ ಹಂತದಲ್ಲಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.




ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಕಪಲಾಪುರ–ಎ ರಲ್ಲಿ ಶಿಕ್ಷಣ ದಿನ

ರಾಷ್ಟ್ರೀಯ ಶಿಕ್ಷಣ ದಿನಾಚಾರಣೆಯ ಅಂಗವಾಗಿ ಮಕ್ಕಳಲ್ಲಿ ಶಿಕ್ಷಣದ ಮಹತ್ವ ಹಾಗೂ ಅರಿವು ಮೂಡಿಸಲು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ಶಾಲಾ ಹಂತದಲ್ಲಿ ಪ್ರಥಮ, ದ್ವಿತಿಯ ಮತ್ತು ತೃತಿಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಜಿಲ್ಲಾ ಮಟ್ಟದಲ್ಲಿ ಸ್ಪರ್ಧೆಯನ್ನು ಹಮ್ಮಿಕೊಂಡು ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪುರಸ್ಕಾರ ಮಾಡಿದರು. ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಅಧೀನದ ಎಲ್ಲಾ ಶಾಲಾ ಕಾಲೇಜಿನ ವಿದ್ಯಾರ್ಥಿ ವಿದ್ಯಾರ್ಥಿನಿಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಮಲನಗರ ಗ್ರಾಪಂ ಶೀಘ್ರ ಮೇಲ್ದರ್ಜೆಗೆ: ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಅತಿ ದೊಡ್ಡ ಕಮಲನಗರ ಗ್ರಾಮ ಪಂಚಾಯಿತಿಯನ್ನು

ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರುವ ಕಾಲ ಹತ್ತಿರವಾಗಿದೆ ಎಂದು ಶಾಸಕ ಪ್ರಭು.ಬಿ ಚವ್ಹಾಣ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಕಮಲನಗರದ ಸವಾಂ9ಗೀಣ ಅಭಿವೃದ್ಧಿಯ ಹಿತದೃಷ್ಟಿಯಿಂದ ನಿರಂತರ ಶ್ರಮ



ವಹಿಸುತ್ತಿದ್ದೇನೆ. ಸಾಕಷ್ಟು ಪ್ರಯತ್ನಪಟ್ಟು ಹೊಸ ತಾಲೂಕು ಕೇಂದ್ರವನ್ನಾಗಿ ಮಾಡಲಾಗಿದೆ. ಇನ್ನೂ ಗ್ರಾಮ ಪಂಚಾಯಿತಿ ಇರುವ ಕಾರಣ ಅಭಿವೃದ್ಧಿ ನಿರೀಕ್ಷೆಗೆ ತಕ್ಕಂತೆ ಆಗುತ್ತಿಲ್ಲ. ಹಾಗಾಗಿ ಪಟ್ಟಣ ಪಂಚಾಯಿತಿ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲು ನಿರಂತರ ಪ್ರಯತ್ನ ಮಾಡಲಾಗುತ್ತಿದೆ. ಮುಖ್ಯಮಂತ್ರಿ, ಸಚಿವ, ಸರಕಾರದ ಪ್ರಧಾನ ಕಾರ್ಯದರ್ಶಿ ಮತ್ತು ಆರ್ಥಿಕ ಇಲಾಖೆ ಸೇರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಪತ್ರಗಳನ್ನು ಬರೆಯಲಾಗಿದ್ದು, ಖುದ್ದು ಭೇಟಿ ಮಾಡಿ ಮನವರಿಕೆ ಮಾಡಿಕೊಡಲಾಗಿದೆ ಎಂದು ತಿಳಿಸಿದ್ದಾರೆ. ಗ್ರಾಪಂ ಕೇಂದ್ರವನ್ನು ಪಟ್ಟಣ ಪಂಚಾಯಿತಿಗೆ ಮೇಲ್ದರ್ಜೆಗೇರಿದಲ್ಲಿ ಸರಕಾರದ ಅನುದಾನ ಹೆಚ್ಚಿನ ಪ್ರಮಾಣದಲ್ಲಿ ಲಭಿಸಲಿದೆ. ಅಭಿವೃದ್ಧಿ ಕೆಲಸಗಳಿಗೆ ಮತ್ತಷ್ಟು ವೇಗ ಸಿಗಲಿದ್ದು, ಸಾರ್ವಜನಿಕರಿಗೆ ಸಾಕಷ್ಟು ಅನುಕೂಲಗಳಾಗುತ್ತವೆ ಎಂದು ಹೇಳಿದರು.

# ನೀರು ಸರಬರಾಜು ಯೋಜನೆಗೆ ಡಾ. ಶರಣಪ್ರಕಾಶ ಪಾಟೀಲ ಅವರಿಂದ ಅಡಿಗಲ್ಲು



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ನ. 11 ತಾಲ್ಲೂಕಿನಲ್ಲಿ ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ ಸಂಯುಕ್ತಾಶ್ರಯದಲ್ಲಿ ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಡಿಯಲ್ಲಿ ಸೇಡಂ ಪಟ್ಟಣ-ಕ್ಕೆ ಖಾಚೂರ್ ಗ್ರಾಮದ ಬ್ಯಾರೇಜ್ ಮೂಲದಿಂದ ನೀರು ಸರಬರಾಜು ಯೋಜನೆಯ ಕಾಮಗಾರಿಗೆ ಶಂಕುಸ್ಥಾಪನೆಯನ್ನು ಸಚಿವರಾದ ಡಾ.ಶರಣಪ್ರಕಾಶ ಪಾಟೀಲರು ನೆರವೇರಿಸಿದರು.

47.85 ಕೋಟಿ ರೂಪಾಯಿ ಮೊತ್ತದ ನೀರು ಸರಬರಾಜು ಯೋಜನೆಯ ಕಾಮಗಾರಿಗೆ ಸೇಡಂ ಪಟ್ಟಣದ ಸರ್ವೇ ನಂಬರ್ 705 ಆಶ್ರಯ ಕಾಲೋನಿಯಲ್ಲಿ ಚಾಲನೆ ನೀಡಿದರು. ಸೇಡಂ ಪಟ್ಟಣಕ್ಕೆ ಸಮರ್ಪಕ ಕುಡಿಯುವ ನೀರು ದೊರಕಿಸಿ ಕೊಡುವ ನಿಟ್ಟಿನಲ್ಲಿ ಈ ಕಾಮಗಾರಿ ಆರಂಭವಾಗಿದೆ ಎಂದರು.

ನನ್ನ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರಿಗೆ ಕುಡಿಯುವ ನೀರು ದೊರಕಿಸುವ ಬದ್ಧತೆ ನನ್ನದಾಗಿದ್ದು, ಸೇಡಂ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಹೊಸ ಹೊಸ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ

ಎಂದು ಮಾತನಾಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ತಾಲೂಕಾಡಳಿತ, ಪುರಸಭೆ ಅಧ್ಯಕ್ಷರು, ಚುನಾಯಿತ ಪ್ರತಿನಿದಿಗಳು ಮತ್ತು ಅದಿಕಾರಿಗಳು, ಹಾಗೂ ನಗರಾಭಿವೃದ್ಧಿ ಇಲಾಖೆ ಮುಖ್ಯಸ್ಥರು, ಅಧಿಕಾರಿಗಳು , ಹಿರಿಯರು, ಸ್ಥಳೀಯರು ಇನ್ನಿತರರು ಉಪಸ್ಥಿತರಿದ್ದರು.

# ಸಾರ್ವಜನಿಕ ಅಭಿಪ್ರಾಯ ಸಂಗ್ರಹಣೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.11.: -ಜೆಸ್ಕಾಂ ಸಂಸ್ಥೆಯಿಂದ ವಿದ್ಯುತ್ ದರ ಪರಿಷ್ಕರಣೆಗೆ ಪ್ರಸ್ತಾವನೆ ಸಲ್ಲಿಸಿದ ಹಿನ್ನೆಲೆಯಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ನವೆಂಬರ್ 12 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ಆಯೋಗದ ನ್ಯಾಯಾಲಯದ ಸಭಾಂಗಣದಲ್ಲಿ (ಭೌತಿಕ ಮತ್ತು ಆನ್‌ಲೈನ್ ಎರಡು ವಿಧಾನದ ಮೂಲಕ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಣಾ ಸಭೆ ನಡೆಯಲಿದೆ.

ನೀರಾವರಿ ಪಂಪ್ ಸೆಟ್‌ಗಳು, ವಾಣಿಜ್ಯ ಮತ್ತು ಕೈಗಾರಿಕಾ ಗ್ರಾಹಕ ವರ್ಗಗಳಿಗೆ ಸಂಬಂಧಿಸಿದಂತೆ (ಜಕಾತಿ ಆದೇಶ-2025)ರ ಜಕಾತಿ ದರಗಳಲ್ಲಿ ಮಾರ್ಪಾಡು ಕೋರಿ ವಿದ್ಯುತ್ ಸರಬರಾಜು ಕಂಪನಿಗಳು (ಎಸ್ಕಾಂಗಳು) ಸಲ್ಲಿಸಿದ ಪರಿಶೀಲನಾ ಅರ್ಜಿ (ಖಕ-08 ಠಜಿ 2025) ಗೆ ಸಂಬಂಧಿಸಿದಂತೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ಸಾರ್ವಜನಿಕ ವಿಚಾರಣೆಯನ್ನು ನಡೆಸಲಿದೆ.

ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಗು.ವಿ.ಸ.ಕಂ.ನಿ) ವ್ಯಾಪ್ತಿಗೆ ಬರುವ ಆಸಕ್ತ ಪಾಲುದಾರರು/ ಸಾರ್ವಜನಿಕರು ವಿಚಾರಣೆಗೆ ಖುದ್ದಾಗಿ ಹಾಗೂ ವೈಯಕ್ತಿಯವಾಗಿ ಆನ್‌ಲೈನ್‌ನಲ್ಲಿ ಹಾಜರಾಗಲು ಸಾಧ್ಯವಾಗದವರಿಗೆ ಅಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಜೆಸ್ಕಾಂ ನಿಗಮ ಕಚೇರಿಯ ನೆಲ ಮಹಡಿಯಲ್ಲಿ ನಡೆಯುವ ವರ್ಚುವಲ್ ಸಭೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿದ್ದು, ಇಲ್ಲಿ ಸಾರ್ವಜನಿಕ ವಿಚಾರಣೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಜೆಸ್ಕಾಂ ಕಾರ್ಯಚರಣೆ ವಿಭಾಗದ ಮುಖ್ಯ ಅಭಿಯಂತರರು (ವಿದ್ಯುತ್) ತಿಳಿಸಿದ್ದಾರೆ.

# ಸಹಾಯಧನ ನೀಡಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.11: ಕಲಬುರಗಿ ಮಹಾನಗರ ಪಾಲಿಕೆಯಿಂದ 2025-26ನೇ ಸಾಲಿನ ಎಸ್.ಎಫ್.ಸಿ. (ಮುಕ್ತ ನಿಧಿ) (ಕಲಬುರಗಿ ಜಿಲ್ಲಾಧಿಕಾರಿಗಳಿಂದ ಅನುಮೋದನೆಗೊಂಡಿರುವ) ಶೇ 7.25ರ ಯೋಜನೆಯ ಕ್ರಿಯಾ ಯೋಜನೆಗಳಲ್ಲಿ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗ ನಿಗದಿಪಡಿಸಿದ ಕಾರ್ಯಕ್ರಮ ಯೋಜನೆಯಡಿ ಉನ್ನತ ವ್ಯಾಸಂಗಕ್ಕಾಗಿ ಪಿ.ಹೆಚ್.ಡಿ/ಪೋಸ್ಟ್ ಡಾ-ಕ್ಟರೇಟ್ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಕಲಬುರಗಿ ಮಹಾನಗರ ಪಾಲಿಕೆಯ ಶೇ. 7.25ರಡಿ ಉನ್ನತ ವ್ಯಾಸಂಗಕ್ಕಾಗಿ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದ ಪಿ.ಹೆಚ್.ಡಿ /ಪೋಸ್ಟ್ ಡಾಕ್ಟರೇಟ್ ವಿದ್ಯಾರ್ಥಿಗಳಿಗೆ 30,000 ರೂ. ಮೀರದಂತೆ (11 ವಿದ್ಯಾರ್ಥಿಗಳಿಗೆ) ಮಾತ್ರ ಸಹಾಯಧನ ನೀಡಲಾಗುತ್ತದೆ. ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗ ಅರ್ಹ ವಿದ್ಯಾರ್ಥಿಗಳಿಗೆ ಮಾತ್ರ ಸಹಾಯಧನ ನೀಡಲಾಗುತ್ತದೆ. ಕಲಬುರಗಿ ನಗರದ ನಿವಾಸಿಯಾಗಿರಬೇಕು. ವಾರ್ಷಿಕ ಆದಾಯ 2.50 ಲಕ್ಷ ರೂ. ಮೀರಿರಬಾರದು.

ಆಧಾರ ಕಾರ್ಡ್, ಪಡಿತರ ಚೀಟಿ, ಚುನಾವಣಾ ಗುರುತಿನ ಚೀಟಿ ಕಡ್ಡಾಯವಾಗಿ ಲಗತ್ತಿಸಿಬೇಕು.

ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರಪಾಲಿಕೆಯ ಆವಕ ಶಾಖೆಯಿಂದ ಕಚೇರಿ ವೇಳೆಯಲ್ಲಿ ಪಡೆದು ಭರ್ತಿ ಮಾಡಿ ಕಡ್ಡಾಯವಾಗಿ ಅಗತ್ಯ ದಾಖಲೆಗಳನ್ನು ದೃಢೀಕರಣದೊಂದಿಗೆ 2025ರ ಡಿಸೆಂಬರ್ 11ರ ಸಂಜೆ 5.30 ಗಂಟೆಯೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರ ಪಾಲಿಕೆಯ ಶೇ. 7.25 ಶಾಖೆಯನ್ನು ಹಾಗೂ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

# ಗುರುವಂದನಾ ಸ್ನೇಹ ಸಮ್ಮಿಲನ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ: ಕನ್ನಿಕಾ ಪರಮೇಶ್ವರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ 1999/2000 ಖಖಐಅ ವಿದ್ಯಾರ್ಥಿಗಳಿಂದ 9/11/2025ರಂದು ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಹಮ್ಮಿಕೊಳ್ಳಲಾಗಿತ್ತು.

ರಾಧಾಕೃಷ್ಣನ್ ಮತ್ತು ಕನ್ನಿಕಾ ಪರಮೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

ಪ್ರಥಮವಾಗಿ ಕುಮಾರಿ ಸುಸ್ಮಿತ ಮತ್ತು ಅಮೃತ . ಸನ್ನಿಧಿ ಇವರು ನೃತ್ಯ ಮಾಡಿದಳು. ಪ್ರಾಸ್ತಾವಿಕವಾಗಿ ಶ್ರೀಮತಿ ಬೇಬಿ ಶಿಕ್ಷಣ ಪಡೆದ ವ್ಯಕ್ತಿ ಸಮಾಜದ ಉನ್ನತಿಗೆ ಶ್ರಮಿಸುತ್ತಾನೆ. ತಂದೆ ತಾಯಿಗಳಿಗೆ ಗುರುಹಿರಿಯರಿಗೆ ಗೌರವ ನೀಡುವ ವ್ಯಕ್ತಿ. ಎತ್ತರ-ಕ್ಕೆ ಬೆಳೆದು ನಿಲ್ಲುತ್ತಾರೆ ಅದಕ್ಕೆ ನೀವೇ ಸಾಕ್ಷಿ ಎಂದರು. ಇವತ್ತಿನ ಕಾರ್ಯಕ್ರಮ ಇಂದಿನ ಮಕ್ಕಳಿಗೆ ಮಾದರಿಯಾಗಲಿ ಎಂದು ರಮಾದೇವಿ ಹೇಳಿದರು. . ಎಲ್ಲ ಗುರುಗಳಿಗೆ. ಸ್ಮರಣಿಕೆ ನೀಡಿ ಸನ್ಮಾನಿಸಿ ಸಸಿ ನೀಡುವ ಮೂಲಕ ತಮ್ಮ ಪರಿಸರ ಪ್ರಜ್ಞೆ ತೋರಿಸಿದರು.

ಕೋಮಲ ರವರು. ರಜತ ಗುರುವಂದನಾ ನಮ್ಮೆಲ್ಲರ ಭಾಂದವ್ಯ ಭದ್ರ ಗೊಳಿಸಿತು.. ವಿಧ್ಯೆ ಜೊತೆಗೆ ವಿನಯವನ್ನು ರೂಢಿಸಿಕೊಂಡು ಸಮಾಜದ ಉತ್ತಮ ನಾಗರಿಕರಾಗಿರಿ. . ಕಲಿಕೆಗೆ ಆಸಕ್ತಿ ಸತತ ಪ್ರಯತ್ನ ದಿಂದ ನೀವೆಲ್ಲಾ ನಿಮ್ಮ ಕಾಲಮೇಲೆ ನಿಂತಿದ್ದೀರಿ. ಮುಂದೆ ಗುರಿ ಹಿಂದೆ ಗುರುಗಳ ಮಾರ್ಗದರ್ಶನ. &, ವಿದ್ಯಾರ್ಥಿಗಳ ಸತತ ಪ್ರಯತ್ನದಿಂದ ಉನ್ನತ ಸ್ಥಾನ ಗಳಿಸಬಹುದಾಗಿದೆ.

ಅಧ್ಯಕ್ಷತೆಯನ್ನು ಶಾಲಾ ಮುಖ್ಯ ಗುರು ಶ್ರೀ ಮಲ್ಲಪ್ಪ ರವರು ಮುಖ್ಯ ಅತಿಥಿಗಳಾಗಿ . ಶ್ರೀಮತಿ ರಮಾದೇವಿ. ಅತಿಥಿಗಳಾಗಿ ಶ್ರೀಮತಿ ಬೇಬಿ.

ಹಾಗೂ ಗೀತಾರಾಣಿಯವರುಗಳ ನೇತೃತ್ವ. ಶಿಕ್ಷಕರುಗಳಾದ. ರಾಧಾ. ಸ್ನೇಹಲತಾ. ವೀರಭದ್ರಪ್ಪ. ರಾಜು, . ಲಲಿತಾ. ನಾಗರಾಜ್. . ಉಮಾ. ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಬ್ಯಾಚ್ ನ ಎಲ್ಲಾ ವಿದ್ಯಾರ್ಥಿಗಳು ಕೇಂದ್ರ ಬಿಂದು ಆಗಿದ್ದರು. ಮಧುಕರ್

& ಸುದರ್ಶನ್ ಸರ್ವ ಶಿಕ್ಷಕರನ್ನು ವೇದಿಕೆಗೆ ಆಹ್ವಾನಿಸಿದರು. ನಿರೂಪಣೆ ರೇಣುಕಾ.& ಗಂಗಮ್ಮ. ಸ್ವಾಗತ ಸೌಜನ್ಯ. &, ಸಿದ್ದಲಿಂಗಮ್ಮ. ಮಾಡಿದರೆ . ಸರ್ವರಿಗೂ ಅಶೋಕ್ ಅವರು ವಂದನಾರ್ಪಣೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು

## ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶ ಸುಧಾರಣೆಗಾಗಿ ಕಾರ್ಯಾಗಾರ:

# ಕಲ್ಯಾಣ ಕರ್ನಾಟಕದ ಎಲ್ಲಾ ಜಿಲ್ಲೆಗಳು 100% ಫಲಿತಾಂಶದ ಗುರಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.11: ಮುಂಬರುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕಲ್ಯಾಣ ಕರ್ನಾಟಕದ ಎಲ್ಲಾ ಜಿಲ್ಲೆಗಳು ನೂರಕ್ಕೆ ನೂರರಷ್ಟು ಫಲಿತಾಂಶ ಸಾಧಿಸುವ ಗುರಿ ಇಟ್ಟುಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ವ್ಹಿ. ರಶ್ಮಿ ಮಹೇಶ ಅವರು ಹೇಳಿದರು.

ಅವರು ಸೋಮವಾರ ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿ ವತಿಯಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆಗಾಗಿ ಕಲಬುರಗಿಯ ಅಪ್ಪಾ ಪಬ್ಲಿಕ್ ಶಾಲೆಯಲ್ಲಿ ಬೀದರ, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ತಾಲೂಕಾವಾರು ವಿಷಯ ಶಿಕ್ಷಕರಿಗೆ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕದ ಎಲ್ಲಾ ಜಿಲ್ಲೆಗಳು ಮುಂಬರುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕಲ್ಯಾಣ ಕರ್ನಾಟಕದ ಫಲಿತಾಂಶ ನೂರಕ್ಕೆ ನೂರರಷ್ಟು ಸಾಧಿಸುವ ಗುರಿ ಇಟ್ಟುಕೊಳ್ಳಬೇಕು. ಇದಕ್ಕಾಗಿ ಪ್ರತಿ ಶಾಲೆಯಲ್ಲಿ ಮಕ್ಕಳ ಕಲಿಕಾ ಮಟ್ಟ ಆಧರಿಸಿ ಕ್ರಿಯಾ ಯೋಜನೆ ರೂಪಿಸಿಕೊಳ್ಳಬೇಕು. ಶಿಕ್ಷಕರು ಮಾತ್ರವಲ್ಲದೇ ಎಲ್ಲಾ ಹಂತದ ಅಧಿಕಾರಿಗಳು ಬರುವ ಮೂರು ತಿಂಗಳು ಪರೀಕ್ಷಾ ಫಲಿತಾಂಶ ಸುಧಾರಣೆಗೆ ತಮ್ಮನ್ನು ತಾವು ತೊಡಗಿಸಿಕೊಳ್ಳುವಂತೆ ಕಾರ್ಯಾಗಾರದಲ್ಲಿ ಪಾಲ್ಗೊಂಡ ಎಲ್ಲಾ ಅಧಿಕಾರಿಗಳಿಗೆ ಮತ್ತು ಶಿಕ್ಷಕರಿಗೆ ಸೂಚಿಸಿದರು.

ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಪಾಂಡ್ವೆ ರಾಹುಲ್ ತುಕಾರಾಮ ಅವರು ಮಾತನಾಡಿ, ಮುಂಬರುವ ಎಸ್.ಎಸ್.ಎಲ್.ಸಿ. ಪರೀಕ್ಷೆ ಫಲಿತಾಂಶ ಸುಧಾರಣೆಯ ಹಿನ್ನೆಲೆಯಲ್ಲಿ ಪರೀಕ್ಷಾ ಮಂಡಳಿ ಬಿಡುಗಡೆ ಮಾಡಿರುವ ಮಾದರಿ ಪ್ರಶ್ನೆಪತ್ರಿಕೆಗಳನ್ನು ಎಲ್ಲಾ ವಿದ್ಯಾರ್ಥಿಗಳಿಗೆ ಪರಿಚಯಿಸಬೇಕು. ನೀಲ ನಕ್ಷೆಯಂತೆ ಪ್ರಶ್ನೆಪತ್ರಿಕೆಗಳನ್ನು ತಯಾರಿಸುತ್ತಿರುವ ಹಿನ್ನೆಲೆಯಲ್ಲಿ ಅದರ ಸಂಪೂರ್ಣ ಪರಿಚಯ ಮಾಡಿಕೊಳ್ಳಬೇಕು. ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಫಲಿತಾಂಶ ಸುಧಾರಣೆಗೆ ಎಲ್ಲರೂ ಶ್ರಮಿಸಬೇಕು. ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಇನ್ನು 14 ವಾರಗಳು ಬಾಕಿ ಇರುವದರಿಂದ ಪ್ರತಿ ವಾರದಲ್ಲಿ ಮಕ್ಕಳ ಕಲಿಕೆಯನ್ನು ದಾಖಲಿಸಲು ಅಭ್ಯಾಸದ ಹಿಂಬಾಲಿಕೆ(ಖಿಡಿಚಿಛಿಞ-ಟಿರಿ) ಯನ್ನು ಎಲ್ಲಾ ಶಾಲೆಗಳಲ್ಲಿ ಅನುಸರಿಸುವುದು ಕಡ್ಡಾಯವಾಗಿದೆ ಎಂದು ಹೇಳಿದರು.

ಕಲಬುರಗಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವಾರ ಸಿಂಗ್ ಮೀನಾ ಅವರು ಮಾತನಾಡಿ, ಜಿಲ್ಲೆಯ ಫಲಿತಾಂಶ ರಾಜ್ಯದ ಸರಾಸರಿಗಿಂತ ಕಡಿಮೆ ಇರುವದರಿಂದ ಕಲಬುರಗಿ ಜಿಲ್ಲಾ ಪಂಚಾಯಿತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಎಲ್ಲಾ ಅಧಿಕಾರಿಗಳು, ಶಿಕ್ಷಕರು ಸಕ್ರಿಯವಾಗಿ ಅದರಲ್ಲಿ ತೊಡಗಿಸಿಕೊಂಡು ಫಲಿತಾಂಶ ಸುಧಾರಣೆಗೆ ಕ್ರಮವಹಿಸಬೇಕು ಎಂದರು.

ಈ ಕಾರ್ಯಾಗಾರದಲ್ಲಿ ವಿಷಯ ಸಂಪನ್ಮೂಲ ಶಿಕ್ಷಕರು, ಉಪನಿರ್ದೇಶಕರು, ಡಯಟ್ ಪ್ರಾಂಶುಪಾಲರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್ ಉಪನ್ಯಾಸಕರು, ವಿಷಯ ಪರಿವೀಕ್ಷಕರು, ಶಿಕ್ಷಣಾಧಿಕಾರಿಗಳು, ಮೂರು ಜಿಲ್ಲೆಗಳ ಪ್ರತಿಯೊಂದು ತಾಲೂಕಿನ ಆರು ವಿಷಯಗಳ ಆರು ಸಂಪನ್ಮೂಲ ವ್ಯಕ್ತಿಗಳು ಸೇರಿದಂತೆ ಒಟ್ಟು 168 ಜನ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿದ್ದರು.

# ಆಘಾತಕ್ಕೊಳಗಾದ ಕುಟುಂಬಕ್ಕೆ ಅರವಿಂದ ಅರಳಿ ಸಹಾಯ ಹಸ್ತ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ : ಜಿಲ್ಲೆಯ ಯಾವುದೇ ಕುಟುಂಬದವರು ಅನ್ಯಾಯಕ್ಕೆ ಒಳಗಾದವರಿಗೆ ಸಹಾಯ ಮಾಡಲು ಸದಾ ಸಿಧ್ಧ ಎಂದು ವಿಧಾನ ಪರಿಷನ ಮಾಜಿ ಸದಸ್ಯ ಅರವಿಂದ ಅರಳಿ ಹೇಳಿದರು. ತಾಲೂಕಿನ ಹಲಸಿ ತುಗಾಂವ ಗ್ರಾಮದಲ್ಲಿ ಕಳೆದ ತಿಂಗಳು ದಶಹರಾ ಹಬ್ಬದ ದಿನದಂದು ಧಮ್ಮ ಚಕ್ರ ಪ್ರವರ್ತನ ದರ್ಶನಕ್ಕೆ ಉದಗೀರಗೆ ತೆರಳುತ್ತಿದ್ದ ಐದಾರು ದಲಿತ ಯುಕವಕರನ್ನು ಅಳವಾಯಿ ಗ್ರಾಮದಲ್ಲಿ ಅಲ್ಲಿನ ಅನ್ಯ ಕೋಮಿನ ಯುವಕರು ಕುಡಿದ ಅಮಲಿನಲ್ಲಿ ದಲಿತ ಯುಕರನ್ನು ತಡೆದು ಹಿಗ್ಗಾ ಮುಗ್ಗಾ ಥಳಿಸಿ ನೀಲಿ ಧ್ವಜವನ್ನು ಹರಿದು ಹಾಕಿ ಜಾತಿ ನಿಂದನೆ ಮಾಡಿದ್ದರು. ಈ ಕುರಿತು ಮೆಹಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ಕೂಡಾ ದಾಖಲಾಗಿದೆ. ಜಿಲ್ಲೆಯಲ್ಲಿ ಕಳೆ ಎರಡು ವರ್ಷಗಳಿಂದ ಅತೀ ಹೆಚ್ಚು ಜಾತಿ ನಿಂದನೆ ಪ್ರಕರಣಗಳು ಭಾಲ್ಕಿ ತಾಲೂಕಿನಲ್ಲಿಯೇ ಏಕೆ ನಡೆಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು. ಹಾಗೂ ಹಲಸಿ ತುಗಾಂವ ಗ್ರಾಮದಲ್ಲಿ ಹಲ್ಲೆಗೊಳಗಾದ ದಲಿತ ಕುಟುಂಬದವರಿಗೆ ಧೈರ್ಯ ತುಂಬಿ ಸಾಂತ್ವನ ಹೇಳಿದರು. ಅದಲ್ಲದೆ ಇನ್ನು ಮುಂದೆ ಇಂತಹ: ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದು ಗ್ರಾಮಸ್ಥರಿಗೆ ಸಲಹೆ ನೀಡಿದರು. ಸಮಾಜದಲ್ಲಿ ದಲಿತರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ವಿದ್ಯಾವಂತರಾಗಿ ಮಾಡಿಬೇಕು. ಒಳ್ಳೆಯ ಸರಕಾರಿ ಉದ್ಯೋಗ ಪಡೆದುಕೊಂಡು ಸಮಾಜಕ್ಕೆ ಕೀರ್ತಿ ತರುವ ಕೆಲಸ ಮಾಡಬೇಕು ಎಂದು ಕಿವಿ ಮಾತು ಹೇಳಿದರು. ದಲಿತ ಹೋರಾಟಗಾರರಾದ ಭೀಮಶಾಹಿರ, ಕಾಳಿದಾಸ ಸೂರ್ಯವಂಶಿ, ರಾಜಕುಮಾರ ಮೂಲಭಾರತಿ, ಪ್ರೇಮನಾಥ ಜಗತಾಪ, ಶತ್ರುಘನ್ ಮುಳೆ, ಭೂಷಣ ಪ್ರಕಾಶ, ದತ್ತಾ ವಿಲಾಸ ಮೋರೆ ಸೇರಿದಂತೆ ಗ್ರಾಮ ಯುವಕರು ಮಹಿಳೆಯರು ಇದ್ದರು.

# ಕಾರ್ತಿಕ ಮಾಸ ದೀಪೋತ್ಸವ ಕಾರ್ಯಕ್ರಮ



ರಾಯಚೂರು, ನ.11-ಕಾರ್ತಿಕ ಮಾಸದ ಸೋಮವಾರ ಪ್ರಯುಕ್ತ ನಗರದ ಮಧುರಾ ನಗರ ಮತ್ತು ಶ್ರೀ ಕೃಷ್ಣದೇವರಾಯ ಕಾಲೊನಿಯಲ್ಲಿರುವ ಶ್ರೀ ಬಿಲ್ವಮಂದಿರದಲ್ಲಿ ಶ್ರೀ ಮಹಾಶಿವ ಮತ್ತು ಜಗನ್ಮಾತೇ ಶ್ರೀ ದುರ್ಗಾ ಪರಮೇಶ್ವರೀ ಅಮ್ಮನವರ ಪೂಜೆ-ಯ ನಂತರ ಸುಮಂಗಲೆಯರಿಂದ ನೂರಾರು ದೀಪಗಳನ್ನು ಬೆಳಗಿಸುವ ಮೂಲಕ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ ಜರುಗಿತು. ರಾಯಚೂರಿನ ಇಸ್ಕಾನ್ ಟೆಂಪಲ್ ವತಿಯಿಂದ ಮದ್ ಭಾಗವತಾ ಸತ್ಸಂಗ, ಕೀರ್ತನೆ ಮತ್ತು ಭಕ್ತಿ ಗೀತೆಗಳು, ಮಕ್ಕಳಿಂದ ಕೋಲಾಟ ನಂತರ ಮಹಾ ಅನ್ನ ಪ್ರಸಾದ ಬೆಳದಿಂಗಳ ವನ ಭೋಜನ ಕಾರ್ಯಕ್ರಮಗಳು ಜರುಗಿದವು. ಈ ಕಾರ್ಯಕ್ರಮದಲ್ಲಿ ಕೃಷ್ಣದೇವರಾಯ ಕಾಲೋನಿ, ಮಧುರಾ ನಗರ, ಆಶೀರ್ವಾದ ಕಾಲೋನಿ, ಸುಚಿತ್ರಾ ಕಾಲೋನಿ, ನಿಸರ್ಗ ಕಾಲೋನಿ, ಬೃಂದಾವನ ಕಾಲೋನಿ, ನ್ಯೂ ಎನ್.ಜಿ.ಓ.ಕಾಲೋನಿ, ಜಯನಗರ ಎಕ್ಸ್‌ಟೆನ್‌ಷನ್, ಜವಾಹರ್ ನಗರ, ವಾಸವಿ ನಗರ ಮತ್ತು ಸುತ್ತಮುತ್ತಲಿನ ಬಡಾವಣೆಗಳ

'ಹಿರಿಯ ನಾಗರಿಕರು, ಮಹಿಳೆಯರು ಮತ್ತು ಮಕ್ಕಳು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ವೈಜ್ಞಾನಿಕ ಆಧಾರಿತ ಕೃಷಿಯಿಂದ ಅಧಿಕ ಇಳುವರಿ



**ರೈತರ ಹಿತ ಕಾಪಾಡಿ..**

'ಬೀದರ ಜಿಲ್ಲೆಯ ಸಕ್ಕರೆ ಕಾರ್ಖಾನೆಯವರು ಸರ್ಕಾರ ಘೋಷಿಸಿದ ರೈತರ ಕಬ್ಬಿನ ಬೆಲೆ ನಿಗದಿ ಪಡಿಸಬೇಕು.ರಿಕವರಿ ನೆಪದಲ್ಲಿ ರೈತರಿಗೆ ಹಾನಿ ಮಾಡಬಾರದು.ಪ್ರಸ್ತುತ ಸಾಲಿನಲ್ಲಿ ಅತಿವೃಷ್ಠಿಯಿಂದ ರೈತರು ಕಂಗಾಲಾಗಿದ್ದಾರೆ.ರೈತ ಉಳಿದರೆ ಮಾತ್ರ ದೇಶ ಉಳಿಯುತ್ತದೆ ಎಂಬುದನ್ನು ಸರ್ಕಾರ ಅರಿತುಕೊಂಡಿರಬೇಕು.'

ಬಾಬುರಾವ ಜೋಳದಾಪ್ಕೆ ಅಧ್ಯಕ್ಷರು ರೈತ ಸಂಘ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಕಬ್ಬು ವಾಣಿಜ್ಯ ಬೆಳೆಯಾಗಿದ್ದು,ಕಬ್ಬಿನ ಪ್ರತಿಯೊಂದು ಭಾಗವು ಲಾಭದಾಯಕವಾಗಿರುವ ಕಾರಣ ರೈತರು ವೈಜ್ಞಾನಿಕ ಆಧಾರಿತ ಕೃಷಿಯಿಂದ ಅಧಿಕ ಇಳುವರಿ ಪಡೆಯಲು ಸಾಧ್ಯ ಎಂದು ಬೀದರನ ಎಆರ್‌ಎಸ್ ಸೈಂಟಿಸ್ಟ್ ಡಾ.ಆರ್.ಎಲ್.ಜಾಧವ ಅಭಿಪ್ರಾಯಪಟ್ಟರು.

ತಾಲೂಕಿನ ಕಣಜಿ ಗ್ರಾಮದ ಶೇಷರಾವ ಕಣಜಿ ಅವರ ಹೊಲದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆ ಬೀದರ ಮತ್ತು ಪ್ರಗತಿಪರ ರೈತ ಶೇಷರಾವ ಕಣಜಿಕರ್ ಅವರ ಸಹಯೋಗದಲ್ಲಿ ಸೋಮವಾರ ಹಮ್ಮಿಕೊಂಡ ಕಬ್ಬಿನ ಬೆಳೆ ಚರ್ಚಾಕೂಟ ಹಾಗೂ 'ಕಡಿಮೆ ಖರ್ಚಿನಲ್ಲಿ ಜಾಸ್ತಿ ಇಳುವರಿ' ಮತ್ತು 2025-26ನೇ ಸಾಲಿನ ರೈತ/ ರೈತ ಮಹಿಳೆಯರಿಗಾಗಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಬ್ಬಿನ ಅಧಿಕ ಇಳುವರಿಗಾಗಿ ಕ್ಯಾಲ್ಸಿಯಂ ಪ್ರಮಾಣ ಹೊಂದಿದ ಕಡಿಮೆ ಬೆಲೆಯಲ್ಲಿ ದೊರಕುವ ಟಿಎಸ್‌ಪಿ ಗೊಬ್ಬರ ಬಳಸಬೇಕು. ಮೇಲ್ಭಾಗದ ಎಲೆಗಳು ಬಿಟ್ಟು ಕೆಳಬಾಗದ ಎಲೆಗಳಿಂದ ಕಬ್ಬು ಕಟ್ಟಬೇಕು. ಯಾವುದೇ ಕಾರಣಕ್ಕೂ ರೈತರು ಕಬ್ಬಿನ ವಾಡಿ ಸುಡಬಾರದು.ರೈತರು ತಾವು ಬೆಳೆಯುವ ಬೆಳೆಗಳ ಗುಣಧರ್ಮ ಅರಿತು ಬೆಳೆ ಬೆಳೆಸಿದರೆ ಆರ್ಥಿಕ ಪರಿಸ್ಥಿತಿ ಸುಧಾರಿಸಿಕೊಳ್ಳಬಹುದು ಎಂದು ಸಲಹೆ ನೀಡಿದರು.

ನಿವೃತ್ತ ವಿಜ್ಞಾನಿ ಡಾ.ಸಿ.ಆರ್. ಕೊಂಡಾ ಮಾತನಾಡಿ, ಜಿಪ್ಸಂ ಗೊಬ್ಬರ ಮತ್ತು ಬೀಜೋಪಚಾರ ಮೂಲಕ ಭೂಮಿ ಫಲವತ್ತತೆ ಕಾಪಾಡಿಕೊಂಡು ಸಕಾಲದಲ್ಲಿ ಕಬ್ಬಿನ ನಾಟಿ ಮಾಡಿದಲ್ಲಿ ಅಧಿಕ ಇಳುವರಿ ಪಡೆಯಬಹುದು ಎಂದು ಹೇಳಿದರು.ಕೃಷಿಸಹಾಯಕನಿರ್ದೇಶಕ ಮಲ್ಲಿಕಾರ್ಜುನ ಮಾತನಾಡಿ,ಸಾವಯವ ಗೊಬ್ಬರದೊಂದಿಗೆ ರಾಸಾಯನಿಕ ಗೊಬ್ಬರ ಬಳಸುವುದು ಅಗತ್ಯ. ರೈತರು ಹುಲ್ಲು ಸಾಯಿಸುವ ಔಷಧ ಸಿಂಪರಣೆ ಮಾಡುವುದರಿಂದ ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದೆ.ಯಾವುದೇ ಕಾರಣಕ್ಕೂ ಹುಲ್ಲು ಸಾಯಿಸುವ ಔಷಧ ಬಳಸಬಾರದು ಎಂದು ತಾಕೀತು ಮಾಡಿದರು.ಕಲಬುರ್ಗಿ ಕೃಷಿ ಕಾಲೇಜಿನ ನಿವೃತ್ತ ಡೀನ್ ಡಾ.ಸುರೇಶ ಪಾಟೀಲ್,ಬೀದರನ ಕೆವಿಕೆಯ ನಿವೃತ್ತ ಮುಖ್ಯಸ್ಥ ಡಾ.ರವಿ ದೇಶಮುಖ ಅವರು ಮಾತನಾಡಿ,ಎಳ್ಳು,ನವಣೆ,ಸಜ್ಜೆ, ಔರಿಕಾಯಿ ಸೇರಿದಂತೆ ಇತರೆ ವಾಣಿಜ್ಯ ಬೆಳೆಸಲು ರೈತರು ಆಸಕ್ತಿ ತೋರಬೇಕು ಎಂದು ಹೇಳಿ,ರೈತರು ಕೇಳಿದ ಸಂಶಯಾಸ್ಪದ ಪ್ರಶ್ನೆಗಳಿಗೆ ಸಮರ್ಪಕವಾಗಿ ಉತ್ತರಿಸಿದರು. ರೈತ ಸಂಘದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಅಣದೂರೆ ಅಧ್ಯಕ್ಷತೆ ವಹಿಸಿ ,ರೈತರಿಗೆ ಸರ್ಕಾರದಿಂದ ದೊರೆಯುವ ಎಲ್ಲ ಸೌಭ್ಯಗಳನ್ನು ಕೃಷಿ ಇಲಾಖೆಯವರು ಸಕಾಲದಲ್ಲಿ ಒದಗಿಸಬೇಕು ಎಂದರು. ರೈತ ಸಂಘದ ತಾಲೂಕು ಅಧ್ಯಕ್ಷ ಬಾಬುರಾವ ಜೋಳದಾಪ್ಕೆ ಮಾತನಾಡಿದರು.ಪ್ರಗತಿಪರ ರೈತರಾದ ಮಾಣಿಕ ದೇಶಮುಖ,ಕರಬಸಯ್ಯ ಸಿಂದಬಂದ 'ಗಿ,ಬಸನಾಳೆ ಮಾತನಾಡಿ, ರಾಸಾಯನಿಕ ಗೊಬ್ಬರ ಬಳಸದೆ ,ಕಳೆ ಕಳೆಯಲು ಸೆಣಬು ಬೆಳೆಸಿ, ಡ್ರಿಪ್ ನೀರಾವರಿಯಿಂದ ಕಬ್ಬಿನ ಜೊತೆಯಲ್ಲಿ ಟೊಮೇಟೋ,ತರಕಾರಿ, ಇನ್ನೀತರ ಬೆಳೆಗಳನ್ನು ಬೆಳೆದು ಅಧಿಕ ಲಾಭ ಪಡೆಯುತ್ತಿದ್ದೇವೆ ಎಂದು ತಿಳಿಸಿದರು.

ಪ್ರಗತಿಪರ ರೈತ ಶೇಷರಾವ ಕಣಜಿಕರ,ರೈತ ಸಂಘದ ಕಾರ್ಯದರ್ಶಿ ದಯಾನಂದ ಸ್ವಾಮಿ,ರಾಜಕುಮಾರ ಎಡಿಎ,ತೋಟಗಾರಿಕೆ ಕಾಲೇಜಿನ ಡಾ.ರಾಜಕುಮಾರ ಗೌಳಿ,ಸುಭಾಷರಾವ ಕಣಜಿಕರ,ಸಂಜೀವಕುಮಾರ ಕಣಜಿಕರ್,ಭಾವುರಾವ ಪಾಟೀಲ, ಗಾಜರೆ,ಕಾರ್ಯದರ್ಶಿ ಮಲ್ಲಿಕಾರ್ಜುನ ಬಿರಾದಾರ,ಹಣಮಂತರಾವ ಪಾಟೀಲ,ಚನ್ನಬಸಪ್ಪ ಪಾಟೀಲ್,ಅನೀಲ ರಂಜೇರಿ,ದಿಲೀಪ ಪಾಟೀಲ್ ಸೇರಿದಂತೆ ಜಿಲ್ಲಾ ಕಬ್ಬು ಬೆಳೆಗಾರರು ,ರೈತರು ಪಾಲ್ಗೊಂಡಿದ್ದರು.

# ಒನಕೆ ಓಬವ್ವ ಜಯಂತಿ: ರಾಯಚೂರಿನಲ್ಲಿ ಮೆರವಣಿಗೆ, ಪುಷ್ಪ ನಮನ



ರಾಯಚೂರು:ಕನ್ನಡ ನಾಡಿನ ವೀರ ವನಿತೆ ಒನಕೆ ಓಬವ್ವ ಜಯಂತಿಯನ್ನು ನಗರದಾದ್ಯಂತ ಗೌರವಪೂರ್ವಕವಾಗಿ ಆಚರಿಸಲಾಯಿತು. ಬೆಳಿಗ್ಗೆ 10.30ಕ್ಕೆ ಅಂಬೇಡ್ಕರ್ ವೃತ್ತದಲ್ಲಿ ಹಿರಿಯ ಹೋರಾಟಗಾರರು, ಸಮಾಜದ ಮುಖಂಡರು, ನಿವೃತ್ತ ನೌಕರರು ಹಾಗೂ ಯುವ ನಾಯಕರು ಜೊತೆಗೂಡಿ ಬಾಬಾ ಸಾಹೇಬರಿಗೆ ಮಾಲಾರ್ಪಣೆ ಸಲ್ಲಿಸಿದರು. ನಂತರ ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು.

ಡೊಳ್ಳು ಹಾಗೂ ತಾಳವಾದ್ಯಗಳ ನಿನಾದದ ನಡುವೆ ಹೆಣ್ಣುಮಕ್ಕಳು ಸೇರಿದಂತೆ ನೂರಾರು ನಾಗರಿಕರು ಮೆರವಣಿಗೆಯಲ್ಲಿ ಭಾಗವಹಿಸಿ ಜಯಂತಿಯ ಸಂಭ್ರಮವನ್ನು ಹೆಚ್ಚಿಸಿದರು. ಜಿಲ್ಲೆಯ ವಿವಿಧ ಸಂಘಟನೆಗಳ ಸಹಕಾರದಿಂದ ಮೆರವಣಿಗೆ ರಂಗಮಂದಿರದತ್ತ ಸಾಗಿತು.

ಕಾರ್ಯಕ್ರಮದ ಸಂದರ್ಭದಲ್ಲಿ ಉಪ ಜಿಲ್ಲಾಧಿಕಾರಿಗಳು, ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧಿಕಾರಿಗಳು, ತಾಲೂಕು ದಂಡಾಧಿಕಾರಿ ಸುರೇಶ್ ವರ್ಮಾ ಅವರು ಉಪಸ್ಥಿತರಿದ್ದರು. ಜಯಂತಿ ಆಚರಣೆಯಲ್ಲಿ ಭಾಗವಹಿಸಿದ ಗಣ್ಯರಲ್ಲಿ ಎಂ. ವಸಂತ (ರಾಜ್ಯ ನಿರ್ದೇಶಕರು, ಛಲವಾದಿ ಮಹಾಸಭಾ, ರಾಯಚೂರು)

,ವಿಶ್ವನಾಥ್ ಪಟ್ಟಿ (ರಾಜ್ಯ ಪ್ರಧಾನ ಕಾರ್ಯದರ್ಶಿ, ಅಂಬೇಡ್ಕರ್ ಸೇನೆ; ಜಿಲ್ಲಾಧ್ಯಕ್ಷರು,ರಾಯಚೂರು),ಅಂಜಿನಯ್ಯ ಕೊಂಬಿನ್ (ಉಪಾಧ್ಯಕ್ಷರು, ಒನಕೆ ಓಬವ್ವ ಸಮಿತಿ),ತಮ್ಮಣ್ಣ (ವಕೀಲರು, ರಾಯಚೂರು),ವೀರೇಶ್ ಗಣದಾಳ,

ಸಂತೋಷ ನಂದಿನಿ ಹಾಗೂ ಹಲವಾರು ಸಮಾಜ ಸೇವಕರು ಹಾಗೂ ಮಹಿಳಾ ಬಳಗದ ಸದಸ್ಯರು ಕೂಡ ಇದ್ದರು.ಜಿಲ್ಲಾಡಳಿತದ ಸಹಕಾರದಲ್ಲಿ ನಡೆದ ಈ ಕಾರ್ಯಕ್ರಮವ

) ರಾಯಚೂರಿನಲ್ಲಿ ಒನಕೆ ಓಬವ್ವ ಅವರ ಶೌರ್ಯ, ತ್ಯಾಗ ಮತ್ತು ಪ್ರೇರಣಾದಾಯಕ ಬದುಕಿಗೆ ಪುನಃ ಸ್ಮರಣೆ ಮೂಡಿಸಿತು.

# ಶಿಬಿರಗಳಿಂದ ಸಾಮಾಜಿಕ ಸ್ವಾಸ್ಥ್ಯ ಹೆಚ್ಚುತ್ತದೆ : ಶರಣಪ್ಪ ಮೇಟಿ



ಲಿಂಗಸುಗೂರು : ಯುವಜನತೆ ಇಂತಹಶಿಬಿರಗಳಲ್ಲಿಹೆಚ್ಚಿನಸಂಖ್ಯೆಯಲ್ಲಿ ಭಾಗವಹಿಸುವುದು ಮುಖ್ಯ. ಈ ಶಿಬಿರಗಳು ಸಾಮಾಜಿಕ ಸ್ವಾಸ್ಥ್ಯ ಹೆಚ್ಚಿಸುವಲ್ಲಿ ಸಹಕಾರಿಯಾಗಲಿವೆ ಎಂದು ಶ್ರೀಶಲ ಮಲ್ಲಿಕಾರ್ಜುನ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶರಣಪ್ಪ ಮೇಟಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಭಾರತ ಸ್ಕೌಟ್ ಮತ್ತು ಗಡ್ ಕರ್ನಾಟಕ, ಜಿಲ್ಲಾ ಸ್ಕೌಟ್ ಮತ್ತು ಗಡ್ ಸ್ಥಳೀಯ ಸ್ಕೌಟ್ ಮತ್ತು ಗಡ್ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವುಗಳ ಸಂಯುಕ್ತಾಶ್ರಯದಲ್ಲಿ ನವೆಂಬರ್ 10 ರಿಂದ 12 ರವರೆಗೆ ಹಮ್ಮಿಕೊಂಡಿರುವ ಜಿಲ್ಲಾ ಮಟ್ಟದ ನಿಪುಣಪರೀಕ್ಷಾಶಿಬಿರವನ್ನುಉದ್ಘಾಟಿಸಿ ಮಾತನಾಡಿದ ಅವರು ಇಂತಹ ಶಿಬಿರಗಳಿಂದ ಯುವ ಜನತೆ ಕಲಿಯಬೇಕಾದದ್ದು ಬಹಳಷ್ಟು ಇದೆ. ಕರುಣೆ, ಪ್ರೀತಿ ಅನುಕಂಪ, ದಯೆ, ಉಪಕಾರದಂತಹ ಮಾನವೀಯ ಗುಣಗಳು ಮರೆಯಾಗುತ್ತಿರುವ ಈ ದಿನಗಳಲ್ಲಿ ಶಿಬಿರಗಳು ಕಲಿಸುತ್ತವೆ ಸ್ಕೌಟ್ ಮತ್ತು ಗಡ್ ಸೇವೆ ಅನನ್ಯವಾಗಿದ್ದು ಆ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡು ಮಾನವೀಯ ಮೌಲ್ಯಗಳನ್ನುಗಟ್ಟಿಗೊಳಿಸಿ ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ವೆಂಕಟನಾರಾಯಣ ಮಾತಾನಾಡಿ ವ್ಯಕ್ತಿತ್ವ ನಿರ್ಮಾಣದಲ್ಲಿ ಸ್ಕೌಟ್ಸ್ ಮತ್ತುಗಡ್ಸ್ ಶಿಬಿರ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಶಿಬಿರದಲ್ಲಿ ಅರವತ್ತುರೋವರ್ಸ್ ನೂರಾಹದಿಮೂರು ರೇಂಜರ್ಸ ಸೇರಿ ಒಟ್ಟು ನೂರಾ ಎಪ್ಪತ್ತೆಂಟು ಜನ ಶಿಬಿರಾರ್ಥಿಗಳಿದ್ದು, ಶಿಬಿರದ ನಾಯಕ ವ ನರಸಿಂಹ ಮತ್ತು ಸ್ಕೌಟ್ಸ್ ಲೀಡರ್ ಗಂಗಮ್ಮ ಕಟ್ಟಿಮನಿ ಶಿಬಿರಾರ್ಥಿಗಳಿಗೆ ತರಬೇತಿ ನೀಡುತ್ತಿದ್ದಾರೆ.

ಈ ಸಂದರ್ಭದಲ್ಲಿ ಭಾರತ ಸ್ಕೌಟ್ಸ ಮತ್ತು ಗಡ್ಸ್ ನ ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ಟಿ. ಶರಣಪ್ಪ ಉಪಾಧ್ಯಕ್ಷೆ ಸಂಗೀತಾ ಮಜ್ಜಿಗಿ ಸಿಂಧನೂರಿನ ಬೀರಪ್ಪ ಶಂಭೋಜಿ ಜಿಲ್ಲಾ ಶಿಬಿರ ಸಂಘಟಕ ಅಂಬಣ್ಣ ನಾಯಕ ಎಸ್ ಜಿ ವ್ಹಿ ಶಿಬಿರದ ಸಹಾಯಕರಾದ ಮಲ್ಲಪ್ಪಕುಂಬಾರ ಮಹೇಶಕುಮಾರ ನಜ್ಮಾಬೇಗಂ ಜಯಶ್ರೀ ಕುಪ್ಪಣ್ಣ ಶಿವಮೂರ್ತಿ ಇದ್ದರು.

# ವಿದ್ಯಾರ್ಥಿನಿಯರು ಓಬವ್ವನ ಶೌರ್ಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು: ಶಾಸಕ ಚನ್ನಾರೆಡ್ಡಿ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11: ಧೈರ್ಯ, ಶೌರ್ಯ, ದೇಶಭಕ್ತಿ ಎನ್ನುವ ಮಾತು ಕೇಳಿದರೆ ಮೊದಲು ನೆನಪಾಗುವ ಹೆಸರು ಓನಕೆ ಓಬವ್ವದ್ದು ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದರು.

ನಗರದ ಲಿಂಗೇರಿ ಕೋನಪ್ಪ ಮಹಿಳಾ ಕಾಲೇಜಿನಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ವೀರ ವನಿತೆ ಓನಕೆ ಓಬವ್ವ ಜಯಂತ್ಯೋತ್ಸವ

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ಹೈದರಾಲಿಯ ಸೈನ್ಯ ಎದುರಿಸಿದ ಓಬವ್ವ ಕೇವಲ ಒಬ್ಬಳೇ ಕೋಟೆಯ ರಕ್ಷಣೆಗೆ ನಿಂತರು. ಅವರ ಧೈರ್ಯ, ದೃಢಸಂಕಲ್ಪ ಹಾಗೂ ದೇಶಪ್ರೇಮ ಇಂದಿನ ಯುವತಿಯರಿಗೆ ಜೀವನದ ಪಾಠವಾಗಬೇಕು ಎಂದು ಹೇಳಿದರು.

ಚಿತ್ರದುರ್ಗ ಕೋಟೆಯ ಇತಿಹಾಸ ಓದಿದರೆ, ಓಬವ್ವನ ಸಾಹಸ ದೇಶಭಕ್ತಿಯ ಉನ್ನತ ಉದಾಹರಣೆ ಎಂಬುದು ಗೋಚರಿಸುತ್ತದೆ. ಮಹಿಳೆಯರು ಓಬವ್ವನ ಬಲ, ತಾಳ್ಮೆ ಮತ್ತು ನಿಷ್ಠೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಸಲಹೆ ನೀಡಿದರು.

ಸಮಿತಿ ಅಧ್ಯಕ್ಷ ಮರೆಪ್ಪ ಚ-ಟ್ಟೇರಕರ್ ಮಾತನಾಡಿ, "ಸ್ವಾತಂತ್ರ್ಯ ಹೋರಾಟದಲ್ಲಿಯೂ ಅನೇಕ ಮಹಿಳೆಯರು ಶೌರ್ಯ ತೇ-ೂರಿದ್ದಾರೆ.

ಓಬವ್ವ ಕೋಟೆಯೊಳಗೆ ರಂಧ್ರದ ಮೂಲಕ ನುಗ್ಗುತ್ತಿದ್ದ ಹೈದರಾಲಿಯ ಸೈನಿಕರನ್ನು ಒಬ್ಬೊಬ್ಬರಾಗಿ ಹೊಡೆದುರುಳಿಸಿದ ಘಟನೆ ಇತಿಹಾಸದ ಅಮರ ಪಾಠವಾಗಿದೆ, ಎಂದರು.

ಉಪನ್ಯಾಸ ನೀಡಿದ ಉಮಾದೇವಿ ಮಟ್ಟಿ ಮಾತನಾಡಿ,

"ಓಬವ್ವ ಮದಕರಿ ನಾಯಕನ ಕಾಲದ ಮಹಿಳೆಯರಲ್ಲಿ ಧೈರ್ಯ ಮತ್ತು ತ್ಯಾಗದ ಪ್ರತೀಕ. ಇಂದಿನ ಯುವತಿಯರು ಅವರಿಂದ ಪ್ರೇರಣೆ ಪಡೆಯಬೇಕು, ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡುತ್ತಾ, "ಓಬವ್ವ ಜೀವನದಂತೆ ಪ್ರತಿಯೊಬ್ಬರು ಒಂದು ಗುರಿ ಇಟ್ಟು ಓದಬೇಕು. ಧೈರ್ಯ ಮತ್ತು ಶ್ರಮವೇ ಯಶಸ್ಸಿನ ಗುಟ್ಟು, ಎಂದರು.

ಕಾರ್ಯಕ್ರಮದಲ್ಲಿ ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಕನ್ನಡ ಮತ್ತು ಸಂಸ್ಕೃತಿ

ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾ ದೇವಿ, ಡಿಎಸ್ಪಿ ಸುರೇಶ್, ಸೈದಪ್ಪ ಕೂಲೂರು, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡಿ,

ಭೀಮರಾಯ ಹೊಸಮನಿ, ಗೋಪಾಲ ತೆಳಗೇರಿ, ಕಾಶಿನಾಥ ನಾಟೇಕಾರ್ ನಿಂಗಪ್ಪ ಕೊಲ್ಲೂರ್, ಬೌದ್ಧ ಉಪಸಕ ಮಹದೇವಪ್ಪ ಬಿಜೆಸಪುರ್, ಭೀಮರಾಯ ಹೊಸಮನಿ,

ಸೇರಿದಂತೆ ಅನೇಕ ದಲಿತ ಮುಖಂಡರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಮಂಜುನಾಥ ಗುರುಸಣಗಿ ನಿರೂಪಿಸಿದ್ದರು.

# ಪೂರ್ವಭಾವಿ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11, : ರಾಜ್ಯ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮದ ಪ್ರಚಾರ ಸಮಿತಿಯ ಸದಸ್ಯರೊಂದಿಗೆ ಸಭೆಯನ್ನು 2025ರ ನವೆಂಬರ್ 12 ರಂದು ಸಂಜೆ 5 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ರಾಜ್ಯ ಮಟ್ಟದ ಯುವ ಜನೋತ್ಸವ (ಪ್ರಚಾರ ಸಮಿತಿ) ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರ ತಿಳಿಸಿದ್ದಾರೆ.

ಜಿಲ್ಲೆಯ ರಾಜ್ಯ ಮಟ್ಟದ ಯುವ ಜನೋತ್ಸವ ಕಾರ್ಯಕ್ರಮವನ್ನು ಡಿಸೆಂಬರ್ 3 ರಿಂದ 4ರ ವರೆಗೆ ಯಾದಗಿರಿ ಜಿಲ್ಲೆಯಲ್ಲಿ ಆಯೋಜಿಸಲಾಗಿರುವುದರಿಂದ ಕಾರ್ಯಕ್ರಮದ ಯಶಸ್ವಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ 2025ರ ಅಕ್ಟೋಬರ್ 23 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಪೂರ್ವಭಾವಿ ಸಭೆಯ ನಡವಳಿಯಲ್ಲಿ ರಚಿಸಲಾದ ಪ್ರಚಾರ ಸಮಿತಿಯ ಸದಸ್ಯರೆಲ್ಲರೂ ಈ ಸಭೆಗೆ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪದಗ್ರಹಣ ಸಮಾರಂಭ

ಕಲಬುರಗಿ: ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ಪಕ್ಷದ ಕಲಬುರಗಿ ಜಿಲ್ಲಾ ಅಧ್ಯಕ್ಷ ರಮೇಶ್ ಎಸ್. ನಾಟಿಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಮನಪ್ಪ ಎಸ್. ಪ್ರಸಾದ ಅವರ ನೇತೃತ್ವದಲ್ಲಿ ಸಭೆ ನಡೆಸಿ ಈ ಸಭೆಯಲ್ಲಿ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ಪಕ್ಷದ ಜೇವರ್ಗಿ ತಾಲೂಕಿನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜರುಗಿತು.ಜೇವರ್ಗಿ ತಾಲೂಕ ಅಧ್ಯಕ್ಷರಾಗಿ ಬಾಬುರಾವ ನಡಿಗೇರಿ, ಉಪಾಧ್ಯಕ್ಷರಾಗಿ ವಿಠ್ಠಲರಾವ ಕಲ್ಲೂರ, ಕಾರ್ಯದರ್ಶಿಯಾಗಿ ಶರಣು ಕಟ್ಟಿಮನಿ, ಸಹಕಾರ್ಯದರ್ಶಿಯಾಗಿ ರಾಜು ಬೇವಿನಮರದ ಮಾವನೂರ,

ಕಾರ್ಮಿಕ ತಾಲೂಕ ಅಧ್ಯಕ್ಷರಾಗಿ ಸುಭಾಷ ಕೊಂಬಿನ, ಜೇವರ್ಗಿ ತಾಲೂಕು ಮೈನಾರಿಟಿ ಅಧ್ಯಕ್ಷರಾಗಿ ಅಬ್ದುಲ ಸಾಬ್ ಹಿಪ್ಪರಗಿ, ಮೈನಾರಿಟಿ ಕಾರ್ಯದರ್ಶಿ ಮೈನೋದ್ದಿನ ಮೊರಟಗಿ ಇವರನ್ನು ಆಯ್ಕೆ ಮಾಡಲಾಯಿತು. ತತಕ್ಷಣವೇ ತಾಲೂಕಿನ ಸರ್ವಾಂಗಿನ ಅಭಿವೃದ್ಧಿಗಾಗಿ ಕಾರ್ಯಪ್ರವೃತ್ತರಾಗಲು ಆದೇಶಿಸಿ ಆದೇಶ ಪತ್ರವನ್ನು ನೀಡಿ ಸನ್ಮಾನಿಸಿ ಅಭಿನಂದಿಸಲಾಯಿತು.

# ಸೌಲಭ್ಯ ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11, : 2025-26ನೇ ಸಾಲಿನ ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಪ್ರತಿ ಹನಿಗೆ ಅಧಿಕ ಬೆಳೆ ಯೋಜನೆಯಡಿ ಸೂಕ್ಷ್ಮ ನೀರಾವರಿ ಉಪಕರಣಗಳ ಸರಕು ಮತ್ತು ಸೇವಾ ತೆರಿಗೆ ಜಿಎಸ್‌ಟಿಯನ್ನು ಶೇ.12 ರಿಂದ ಶೇ.5ಕ್ಕೆ ಇಳಿಕೆಯಾಗಿರುವ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ತೋಟಗಾರಿಕೆ ಉಪ ನಿರ್ದೇಶಕರು ರಾಘವೇಂದ್ರ ಅವರು ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಪ್ರತಿ ಹನಿಗೆ ಅಧಿಕ ಬೆಳೆ ಯೋಜನೆಯಡಿ ಈ ಮೊದಲು ಶೇ.12 ರಷ್ಟು ಸರಕು ಮತ್ತು ಸೇವಾ ತೆರಿಗೆ ಜಿಎಸ್‌ಟಿಯನ್ನು ಒಳಗೊಂಡಂತೆ ಸಹಾಯಧನವನ್ನು ಪಾವತಿಸಲಾಗುತಿತ್ತು. ಕೇಂದ್ರ ಸರ್ಕಾರದ ಆದೇಶದನ್ವಯ 2025ರ ಸೆಪ್ಟೆಂಬರ್ 22 ರಿಂದ ಸೂಕ್ಷ್ಮ ನೀರಾವರಿ ಉಪಕರಣಗಳ ಸರಕು ಮತ್ತು ಸೇವಾ ತೆರಿಗೆ ಜಿಎಸ್‌ಟಿಯನ್ನು ಶೇ.12 ರಿಂದ ಶೇ.5ಕ್ಕೆ ಇಳಿಕೆಯಾಗಿರುವುದರಿಂದ ರೈತರ ವಂತಿಕೆ ಮತ್ತು ಸೂಕ್ಷ್ಮ ನೀರಾವರಿ ಉಪಕರಣಗಳ ಬೆಲೆಗಳಲ್ಲಿ ಗಮನಾರ್ಹ ಇಳಿಕೆ ಕಂಡು ಬಂದಿರುತ್ತದೆ.

ಆಸಕ್ತಿಯುಳ್ಳ ರೈತರು ಈ ಸೌಲಭ್ಯದ ಸದುಪಯೋಗ ಪಡೆಯಲು ಕೂಡಲೇ ತಮ್ಮ ಹೋಬಳಿಗೆ ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಸೂಕ್ತ ದಾಖಲಾತಿಗಳೊಂದಿಗೆ (ಪಹಣಿ, ಜಾತಿ ಪ್ರಮಾಣ ಪತ್ರ, ಎಸ್‌ಸಿ, ಎಸ್‌ಟಿ, ತೋಟಗಾರಿಕೆ ಬೆಳೆಯ ಮಾಹಿತಿ ಇತ್ಯಾದಿ), ಯಾದಗಿರಿ, ಶಹಾಪೂರ, ಸುರಪುರ, (ಜಿಲ್ಲಾ ಪಂಚಾಯತ) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿಗೆ ಭೇಟಿ ನೀಡಿಬೇಕು.

ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿಲ್ಲಾ ಪಂಚಾಯತ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮೊ.ನಂ.9945896198, ಶಹಾಪೂರ ಜಿಲ್ಲಾ ಪಂಚಾಯತ ಹಿರಿಯ ಸಹಾಯಕ ತೋಟಗಾರಿ-ಕೆ ನಿರ್ದೇಶಕರು ಮೊ.ನಂ.9901919133, ಸುರಪುರ ಜಿಲ್ಲಾ ಪಂಚಾಯತ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮೊ.ನಂ.9008626437, ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ ಸಹಾಯಕ ತೋಟಗಾರಿಕೆ ಅಧಿಕಾರಿಗಳಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೂರ್ವಭಾವಿ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11, : ಜಿಲ್ಲೆಯ ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ಯ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 13 ರಂದು ಸಂಜೆ 4 ಗಂ-ಟೆಗೆ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ತಿಳಿಸಿದ್ದಾರೆ.

ವಿಶ್ವ ವಿಕಲಚೇತನರ ದಿನಾಚರಣೆಗೆ ಜಿಲ್ಲೆಯ ವಿಕಲಚೇತನರು ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಗತಿಯಲ್ಲಿ ಯುವಜನಾಂಗದ ಪಾತ್ರ ಅಪಾರ: ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11 : ಭಾರತದ ಅಭಿವೃದ್ಧಿಯಲ್ಲಿ ಯುವಜನಾಂಗದ ಪಾತ್ರ ಅಪಾರವಾಗಿದೆ ಎಂದು ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಹೇಳಿದರು.

ನಗರದ ಪದವಿ ಮಹಾವಿದ್ಯಾಲಯದಲ್ಲಿ ಇಂದು ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮದಿನಾಚರಣೆ ಅಂಗವಾಗಿ, ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಿ ಮಾತನಾಡಿದ ಅವರು, ಭಾರತ ಸಮೃದ್ಧವಾಗಿ ಅಭಿವೃದ್ಧಿ ಪಥದಲ್ಲಿ ಸಾಗಲು ಯುವಜನಾಂಗದ ಸಾಮರ್ಥ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕಾಗಿದೆ. ಈ ದಿಸೆಯಲ್ಲಿ ಇಂತಹ ಏಕತಾ ಪಾದಯಾತ್ರೆಗಳು ಉತ್ತಮ ವೇದಿಕೆಯಾಗಲಿವೆ ಎಂದು ಹೇಳಿದರು.

ಎರಡನೇ ವಿಶ್ವಯುದ್ಧದಲ್ಲಿ ಹಿರೋಷಿಮಾ-ನಾಗಾಸಾಕಿಗಳ ಮೇಲೆ ಭಯಂಕರ ಬಾಂಬ್ ದಾಳಿಯಾಗಿ, ಇಡೀ ಜಪಾನ್ ದೇಶ ನಲುಗಿ ಹೋಗಿದ್ದ ಸಂದರ್ಭದಲ್ಲಿ ಯುವಜನಾಂಗ ಮೆಟ್ಟಿನಿಂತು, ಆ ದೇಶವನ್ನು ಪುನರ್ ನಿರ್ಮಾಣದಲ್ಲಿ ನೆರವಾದರು. ಕಾರಣ ಭಾರತೀಯ ಯುವಜನಾಂಗ ಕೂಡ ದೇಶ ನಿರ್ಮಾಣದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವಂತೆ ಅವರು ಕರೆ ನೀಡಿದರು. ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲು ಈ ರೀತಿಯ ಏಕತಾ ನಡಿಗೆ ಹಮ್ಮಿಕೊಂಡಿರುವುದು ಸಂತಸ ತಂದಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀ ವೇಣುಗೋಪಾಲ ನಾಯಕ್ ಉಪನ್ಯಾಸ ನೀಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಸಮಾಜ ಸೇವಕ ಬಸವರಾಜ ವಿಭೂತಿಹಳ್ಳಿ, ಪಿಯುಡಿಡಿ ಪಂಡಿತರಾವ್ ಪವಾರ್, ಮೇರಾ ಭಾರತ್ ಯುವ ಕೇಂದ್ರ ದ ಅಧಿಕಾರಿ ಮಯೂರ್ ಕುಮಾರ್, ಪದವಿ ಕಾಲೇಜು ಪ್ರಾಂಶುಪಾಲ ಶ್ರೀ ಸುಭಾಸ್ ಚಂದ್ರ ಕೌಲಗಿ, ಪ್ರೊ.ನಾಗಪ್ಪ, ಅಜಯ್ ಮಡ್ಡಿ, ಬಸವರಾಜ್ ಬಲಿಚಕ್ರ ಇತರರು ಉಪಸ್ಥಿತರಿದ್ದರು.

# ಭಾರತದ ಐಕ್ಯತೆ ಅಭಿವೃದ್ದಿಗಾಗಿ ಶ್ರಮಿಸಿ: ಜಿಲ್ಲಾಧಿಕಾರಿ




ಯಾದಗಿರಿ:ನ:11: : ಭಾರತದ ಐಕ್ಯತೆ ಹಾಗೂ ಅಭಿವೃದ್ಧಿಗಾಗಿ ಯುವಜನಾಂಗ ಕೈಜೋಡಿಸುವಂತೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಕರೆ ನೀಡಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು (ಸ್ವಪ್ನ) ಮೈದಾನದಲ್ಲಿ ಇಂದು ಏಕ ಭಾರತ- ಆತ್ಮನಿರ್ಭರ ಭಾರತ, ಐಕ್ಯತಾ ಪಾದಯಾತೆ-ಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ಭಾರತೀಯರೆಲ್ಲರೂ ಭಾರತದ ಐಕ್ಯತೆಗಾಗಿ ಶ್ರಮಿಸಬೇಕು. ಜಾತಿ ,ಮತ, ಪಂಥ ಭೇದಭಾವ ಮರೆತು ಐಕ್ಯತೆಯಿಂದ ಇರುವ ಜೊತೆಗೆ ಸದೃಢ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

ಭಾರತದ ಉಕ್ಕಿನ ಮನುಷ್ಯ, ಬಿಸ್ಮಾರ್ಕ್ ರೆಂದೇ ಕರೆಯಲ್ಪಡುವ ಮಾಜಿ ಗೃಹ ಮಂತ್ರಿಗಳಾದ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು ಹೈದರಾಬಾದ್ ಸಂಸ್ಥಾನವನ್ನು ಭಾರತದ ಒಕ್ಕೂಟಕ್ಕೆ ವಿಲೀನಗೊಳಿಸುವ ಮೂಲಕ ಸಮಗ್ರ

ಭಾರತ ನಿರ್ಮಾಣಕ್ಕೆ ನೆರವಾದರು. ಅಂತಹ ಮಹನೀಯರ ಸ್ಮರಣಾರ್ಥವಾಗಿ 150 ನೇ ಜಯಂತಿ ಅಂಗವಾಗಿ ಕೇಂದ್ರ ಸರ್ಕಾರದ ಮೇರಾ ಯುವ ಭಾರತ ಕೇಂದ್ರದವತಿಯಿಂದ ಈ ಕಾರ್ಯಕ್ರಮ

ಅತ್ಯುತ್ತಮವಾಗಿ ಆಯೋಜಿಸಿದೆ ಎಂದು ಹೇಳಿದರು.

ರಾಷ್ಟ್ರ ಧ್ವಜ ಹಿಡಿದು ಭಾರತದ ಐಕ್ಯತೆಗಾಗಿ ಸುಮಾರು 500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಂದು ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು,

ಕನಕದಾಸರ ವೃತ್ತ, ಬಾ.ಬಿ.ಆರ್. ಅಂಬೇಡ್ಕರ್ ವೃತ್ತ, ಲಾಲ್ ಬಹದ್ದೂರ್ ಶಾಸ್ತ್ರಿ ಚೌಕ್,

ಸುಭಾಷ್ ಚಂದ್ರ ಬೋಸ್ ವೃತ್ತದ ಮೂಲಕ ಐಕ್ಯತಾ ಪಾದಯಾತ್ರೆ ನಡೆಸಿ ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಮುಕ್ತಾಯಗೊಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಡಿಡಿಪಿಯು ಪಂಡಿತರಾವ್ ಪವಾರ್, ಪದವಿ ಕಾಲೇಜು ಪ್ರಾಂಶುಪಾಲ ಪ್ರೊ ಸುಭಾಷ್ ಚಂದ್ರ ಕೌಲಗಿ, ಯುವಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿ ಹಳ್ಳಿ, ಮೇರಾ ಯುವ ಭಾರತ ಕೇಂದ್ರದ ಅಧಿಕಾರಿಗಳಾದ ಮಯೂರ್ ಕುಮಾರ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಪಟ್ಟಿ ಪ್ರಕಟ: ಆಕ್ಷೇಪಣೆ ಅರ್ಜಿಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 11: ಯಾದಗಿರಿ ಜಿಲ್ಲೆಯ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಗೌರವಸೇವೆ ಹುದ್ದೆಗಳ ನೇಮಕಾತಿಗೆ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ, ಆಕ್ಷೇಪಣೆ ಅರ್ಜಿ ಅವಕಾಶ ಕಲ್ಪಿಸಿದೆ ಎಂದು ಯಾದಗಿರಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಸದಸ್ಯ ಕಾರ್ಯದರ್ಶಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಪ್ಪಣ್ಣ ಶಿರಸಿ ಅವರು ತಿಳಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯ ಮೂಲಕ ಅಂಗನವಾಡಿ ಕಾರ್ಯಕರ್ತೆ-4 ಹುದ್ದೆ, ಹಾಗೂ ಅಂಗನವಾಡಿ ಸಹಾಯಕಿ-6 ಹುದ್ದೆಗಳಿಗೆ ತಾತ್ಕಾಲಿಕವಾಗಿ ಆಯ್ಕೆ ಪಟ್ಟಿ ಪ್ರಕಟ ಈ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಹಳೆ ಕೋರ್ಟ್‌ಕಟ್ಟಡ, ಜೈಲ್ ಹತ್ತಿರ, ಸುರಪುರ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, 1ನೇ ಮಹಡಿ ಸ್ತ್ರೀ ಶಕ್ತಿ ಭವನ, ಜಿಲ್ಲಾ ಆಸ್ಪತ್ರೆ ರಸ್ತೆ, ಯಾದಗಿರಿ. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೋಣೆ ಸಂಖ್ಯೆ ಸಿ-17 ಜಿಲ್ಲಾಡಳಿತ ಭವನ, ಚಿತ್ತಾಪೂರ ರಸ್ತೆ, ಯಾದಗಿರಿ ಇಲ್ಲಿಗೆ ಕಛೇರಿ ಸಮಯದಲ್ಲಿ ಅರ್ಜಿದಾರರು ಸೂಕ್ತ ದಾಖಲಾತಿಗಳೊಂದಿಗೆ 2025ರ ನವೆಂಬರ್ 18ರ ಒಳಗೆ ಆಕ್ಷೇಪಣೆ ಸಲ್ಲಿಸಬೇಕು, ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಿಕೆಗೆ ಒತ್ತು ಕೊಟ್ಟಷ್ಟು ಸಾಧನೆಯ ಹಾದಿಯು ಸುಗಮ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶೀಬಾ ಜಿಲಿಯನ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಇತ್ತೀಚಿಗೆ ಕನಸು ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾ ಟ್ರಸ್ಟ್ ಹುಲಕಲ್(ಜೆ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಸಾಂಸ್ಕೃತಿಕ ಹಾಗೂ ವ್ಯಕ್ತಿತ್ವ ವಿಕಾಸನ ಕಾರ್ಯಕ್ರಮವನ್ನು ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಯಾದಗಿರಿಯಲ್ಲಿ ಏರ್ಪಡಿಸಲಾಗಿತ್ತು. ಕಾಲೇಜು ಆವರಣದಲ್ಲಿ ಗಣ್ಯರಿಂದ ಸಸಿ ನೆಡುವುಡುದರ ಮೂಲಕ ಕನಸು ಟ್ರಸ್ಟ್ ಉದ್ಘಾಟನೆಯನ್ನು ಮಾಡಲಾಯಿತು.

ದಕ್ಷ ಹಾಗೂ ಪ್ರಾಮಾಣಿಕ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಶೀಬಾ ಜಿಲಿಯನ್ ರವರು ಜ್ಯೋತಿ ಬೆಳಗುವುದರ ಮೂಲಕ ಸಾಂಸ್ಕೃತಿಕ ಹಾಗೂ ವ್ಯಕ್ತಿತ್ವ ವಿಕಾಸನ ಕಾರ್ಯಕ್ರಮವನ್ನು ಉದ್ಘಾಟನೆಗೊಳಿಸಿ ಮಾತಾನಾಡಿದ ಅವರು ಕಲಿಕೆಗೆ ಒತ್ತು ಕೊಟ್ಟಷ್ಟು ಸಾಧನೆಯ ಹಾದಿಯು ಸುಗಮವಾಗುತ್ತದೆ, ಹೆಣ್ಮಕ್ಕಳಿಗಾಗಿ ಸರಕಾರದಿಂದ ಹಲವಾರು ಯೋಜನೆಗಳು, ಸಂಘ-ಸಂಸ್ಥೆಗಳು ಸಾಕಷ್ಟು ಪ್ರಮಾಣದಲ್ಲಿ ಶಿಕ್ಷಣಕ್ಕೆ ಸಂಬಂಧಿಸಿದಂತೆ ಕೆಲಸ ಮಾಡ್ತಾ ಇವೆ. ನೀವು ನಿರಂತರವಾದ ಕಲಿಕೆಗೆ ಒತ್ತು ಕೊಟ್ಟು ದೊಡ್ಡ ದೊಡ್ಡ ಅಧಿಕಾರಿಗಳಾಗುವ ಕಡೆಗೆ ಗಮನ ಕೊಡಿ ಎಂದರು, ಕನಸು ಟ್ರಸ್ಟ್ ನ ಧ್ಯೇಯ ಉದ್ದೇಶಗಳು ಶೈಕ್ಷಣಿಕ ಮತ್ತು ಸಾಂಸ್ಕೃತಿಕವಾಗಿ ಹಾಗೂ ಸಾಮಾಜಿಕ ಕಳಕಳಿಯ ಆಲೋಚನೆಗಳು ಸುಂದರವಾಗಿವೆ ಟ್ರಸ್ಟ್ ನ ಮುಂದಿನ ಸಾಮಾಜಿಕ ಕಾರ್ಯಗಳಿಗೆ ಯಶಸ್ಸು ಲಭಿಸಲಿ ಎಂದು ಶುಭಹಾರೈಸಿದರು.

ಕನಸು ಟ್ರಸ್ಟ್ ನ ಅಧ್ಯಕ್ಷರಾದ ದೇವಿಂದ್ರ ಹುಲ್ಕಲ್ (ಜೆ) ರವರು ತಮ್ಮ ಟ್ರಸ್ಟ್ ನ ಧ್ಯೇಯ ಉದ್ದೇಶಗಳಾದ ಗ್ರಾಮೀಣ ಭಾಗದ ಜಾನಪದ ಹಾಗೂ ಹಿರಿಯ ಕಲಾವಿದರಿಗೆ ಕಾರ್ಯಕ್ರಮಗಳಲ್ಲಿ




ಅವಕಾಶ ನೀಡಿ ಅವರಿಗೆ ಮುಖ್ಯವಾಹಿನಿಗೆ ತರುವುದು, ಸರಕಾರಿ ಶಾಲಾ ಕಾಲೇಜುಗಲ್ಲಿನ ಪ್ರಸ್ತುತ ಪದವಿ ಓದುತ್ತಿರುವ ಮಕ್ಕಳಲ್ಲಿ ಒತ್ತಡ ನಿವಾರಣೆ. ಬದುಕಿನ ಕನಸುಗಳನ್ನು ಕಟ್ಟಿಕೊಡುವುದು ಅತ್ಯಂತ ಪ್ರಮುಖವಾಗಿದೆ. ಇಂದಿನ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಜಗತ್ತಿಗೆ ತಮ್ಮನ್ನು ತಾವು ತಯಾರಿ ಮಾಡಿಕೊಳ್ಳಲು ಇದು ಅತ್ಯಂತ ಸೂಕ್ತವಾದ ಕಾಲವಾಗಿದೆ. ವಿದ್ಯಾರ್ಥಿಗಳನ್ನು ಅವರ ಬದುಕಿನ ಕನಸುಗಳನ್ನು ಪ್ರೋತ್ಸಾಹಿಸುವುದು ಅವಶ್ಯಕತೆ ಇದೆ ಅದಕ್ಕಾಗಿ ಕನಸು ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾ ಟ್ರಸ್ಟ್‌ನ್ನು ಪ್ರಾರಂಭಿಸಿದ್ದೇನೆ ಎಂದು ಮಾತನಾಡಿದರು.

ಶಿಕ್ಷಣ ತಜ್ಞ, ಲೇಖಕರಾದ ಕೆ.ಎಂ. ವಿಶ್ವನಾಥ ಮರತೂರ ಮಾತನಾಡಿ, ಸಂವಹನವು ಬಹು ಮುಖ್ಯವಾದದ್ದು, ಯಾವುದೇ ಅನುಮಾನ ಅಥವಾ ಅರ್ಥವಾಗದ ವಿಷಯಗಳಿದ್ದರೆ ಸಂಕೋಚಪಟ್ಟುಕೊಂಡು ಮನದಲ್ಲೇ ಇಟ್ಟುಕೊಂಡರೆ ಮುಂದೆ ಭವಿಷ್ಯದಲ್ಲಿ ಭಾರಿ ನಷ್ಟ ಅನುಭವಿಸಬೇಕಾಗುತ್ತದೆ, ಪ್ರಕೃತಿ ಬಡವ ಶ್ರೀಮಂತ ಎಂದು ತಾರತಮ್ಯ ಮಾಡುವುದಿಲ್ಲ ಹಾಗಾಗಿ ನಾವು ಗ್ರಾಮೀಣ ಭಾಗದವರು ನಗರದ ಪ್ರತಿಷ್ಠಿತ ಕಾಲೇಜಗಳ ವಿದ್ಯಾರ್ಥಿಗಳೊಂದಿಗೆ ನಾವು ಯಾವ ಲೆಕ್ಕ ನಮಗೆಲ್ಲಿ ಯಶಸ್ಸು ದೊರೆಯುತ್ತದೆ ಎಂದು ನಕಾರಾತ್ಮಕ ವಿಚಾರಗಳಿಂದ ಹೇಗೆ ಹೊರಬಂದು ಸಾಧನೆಗಳ ಬೆನ್ನು ಹತ್ತಿ ಸಾಧಕರಾಗುವುದು ಹೇಗೆ ಎಂದು ಉತ್ತರ ಕರ್ನಾಟಕದ ಶೈಲಿಯಲ್ಲಿ ಬೌದ್ಧಿಕ, ಭಾವನಾತ್ಮಕ ಮತ್ತು ಸೃಜನಾತ್ಮಕ ಬೆಳವಣಿಗೆಯ ಪ್ರಮುಖ ಅಂಶಗಳನ್ನು ತಿಳಿಸಿದರು.

ಇನ್ಸೊರ್ವ ಸಂಪನ್ಮೂಲ ವ್ಯಕ್ತಿ ಸಲೀಂ ಭಾಷಾ ಮಾತನಾಡಿ ಅರುಣಿಮಾ ಸಿನ್ಹಾ, ಹುಸೇನ್ ಬೋಲ್ಟ್, ಭಾರತದ ಮಹಿಳಾ ಕ್ರಿಕೆಟ್ ವನಿತೆಯರ ಹಾಗೂ ಹಲವು ಸಾಧಕರ ಕುರಿತು ಸ್ಪೂರ್ತಿದಾಯಕ ವಿಷಯಗಳನ್ನು ಹೇಳುತ್ತಾ, ಮುಕ್ತವಾಗಿ ಮಾತನಾಡುವುದು ಹೇಗೆ ? ವೇದಿಕೆಯ ಭಯ ಹೋಗಲಾಡಿಸುವುದು ಹೇಗೆ ? ತಮ್ಮಲ್ಲಿರುವ ವಿಶೇಷವಾದ ಆಲೋಚನೆ ಹಾಗೂ ಚಿಂತನೆಗಳನ್ನು ಸರಳವಾಗಿ ಜನಸಾಮಾನ್ಯರಿಗೆ ತಲುಪುವಂತೆ ಮಾತನಾಡಿದಾಗ ಮಾತ್ರ ಸಮಗ್ರವಾದ ವ್ಯಕ್ತಿತ್ವ ಬೆಳವಣಿಗೆ ಯಾಗುತ್ತದೆ. ಮಕ್ಕಳಿಗೆ ಪಠ್ಯದ ಜೊತೆಗೆ ಇತರೆ ಬದುಕಿನ ಕೌಶಲ್ಯಗಳನ್ನು ಕಲಿಸುವುದು ಅವಶ್ಯಕತೆಯಿದೆ. ಶಿಕ್ಷಣದ ಮೂಲ ಉದ್ದೇಶ ಉತ್ತಮ ವ್ಯಕ್ತಿತ್ವ ರೂಪಿಸುವುದಾಗಿದೆ ಎಂದು ಹೇಳುತ್ತಾ ವಿದ್ಯಾರ್ಥಿನಿಯರಲ್ಲಿ ಪ್ರೇರಣೆ ತುಂಬಿದರು.

ಹಿರಿಯರ ಜಾನಪದ ಕಲಾವಿದರಾದ ಮೋನಪ್ಪ ನಾಟೇಕಾರ್ ರವರ ಜಾನಪದ ಸಂಗೀತ ಹಾಗೂ ಕು. ಶಾರದಾ ಗೋಗಿರವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತದ ರಸದೌತಣವನ್ನು ನೀಡಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಹರೀಶ್ ರಾಥೋಡ್, ಭೂಮಾಪನ ಇಲಾಖೆಯ ಅಧಿಕಾರಿ ವೆಂಕಟೇಶ್ ಕಣಜಿಕರ್‌ರವರು ಮಾತನಾಡಿದರು. ವೇದಿಕೆ ಮೇಲೆ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಮೀನಾಕ್ಷಿ ಆರ್. ಹೊಸಮನಿ, ಸ.ಪ್ರ.ದ.ಮ.ಕಾ.ಯಾ.ಯ ಸಹಾಯಕ ಪ್ರಾಧ್ಯಾಪಕರಾದ ಉದಯಕುಮಾರ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸುಮಾರು ಐದನೂರಕ್ಕೂ ಹೆಚ್ಚು ವಿದ್ಯಾರ್ಥಿನಿಯರು, ಪ್ರಾಧ್ಯಾಪಕರು, ಶಿಕ್ಷಕರು ಮತ್ತು ಸಾರ್ವಜನಿಕರು ಆಗಮಿಸಿ ಆಲಿಸಿದರು. ಅಚ್ಚುಕಟ್ಟಾಗಿ ಕಾರ್ಯಕ್ರಮದ ನಿರೂಪಣೆಯನ್ನು ಕು. ಸಂಗೀತ ನಾಟೇಕಾರ್ ನಿರ್ವಹಿಸಿದರು, ಸ್ವಾಗತವನ್ನು ಮಲ್ಲಿಕಾರ್ಜುನ ಅರಬೋಳ, ವಂದನಾರ್ಪಣೆಯನ್ನು ಯುವ ಕ್ರೀಡಾಪಟು ಮಲ್ಲು ಅಭಿನವ ನಡೆಸಿಕೊಟ್ಟರು.

# ತುರವಿಹಾಳ ಸರ್ಕಾರಿ ಆಸ್ಪತ್ರೆಯ ಡಯಾಲಿಸೀಸ್ ಘಟಕಕ್ಕೆ ಶಾಸಕ ಆರ್.ಬಸನಗೌಡ ತುರವಿಹಾಳ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 11: ಸಿಂಧನೂರ ತಾಲೂಕಿನ ತುರವಿಹಾಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಈಗಾಗಲೇ ಆರಂಭಿಸಿರುವ ಸುಸಜ್ಜಿತ ಡಯಾಲಿಸೀಸ್ ಘಟಕಕ್ಕೆ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ ಅವರು ನವೆಂಬರ್ 11ರಂದು ಭೇಟಿ ನೀಡಿದರು.

ಈ ವೇಳೆ ಮಾತನಾಡಿದ ಶಾಸಕರು, ಮೂತ್ರಪಿಂಡದ ಗಂಭೀರ ಸಮಸ್ಯೆಯಿಂದ ಬಳಲುವವರಿಗೆ ಅನುಕೂಲವಾಗಲು ತುರವಿಹಾಳ ಸರ್ಕಾರಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಘಟಕ ಆರಂಭಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಆಸ್ಪತ್ರೆಯಲ್ಲಿ ಈಗಾಗಲೆ 4 ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದು, ಈ ಮೊದಲು ಮೂತ್ರಪಿಂಡದ ತೊಂದರೆಯಿಂದ ಡಯಾಲಿಸೀಸ್ ಮಾಡಿಸಲು ಸಿಂಧನೂರುಗೆ ತೆರಳಿ ಚಿಕಿತ್ಸೆ ಪಡೆಯುವುದನ್ನು ಮನಗಂಡು ಜನತೆಗೆ ಉಂಟಾಗುವ ಆರ್ಥಿಕ ತೊಂದರೆ, ಸಮಯವನ್ನು ಉಳಿಸಲು ತುರ್ವಿಹಾಳದಲ್ಲಿಯೇ ಆರಂಭಿಸಿರುವುದರಿಂದ ಇದರ ಪ್ರಯೋಜನವನ್ನು ಸುತ್ತಲಿನ 36 ಗ್ರಾಮಗಳು ಹಾಗೂ 14 ಹಟ್ಟಿಗಳನ್ನೊಳಗೊಂಡಂತೆ ಎಲ್ಲ ಸಾರ್ವಜನಿಕರು ಪಡೆದುಕೊಳ್ಳುವಂತೆ ಕೋರಿದರು.

ಗ್ರಾಮೀಣ ಭಾಗದಲ್ಲಿ ಎಲ್ಲ ವರ್ಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ಸದುದ್ದೇಶದಿಂದ ರಾಜ್ಯ ಸರಕಾರವು ಸಮುದಾಯ ಆರೋಗ್ಯ ಕೇಂದ್ರಗಳಿಗೂ ಸಹ ಸುಸಜ್ಜಿತ ಉಪಕರಣಗಳು, ತಜ್ಞ ವೈದ್ಯರ ಸೇವೆ ನೀಡುತ್ತಿದೆ.

ಆಸ್ಪತ್ರೆಗೆ ಬೇಕಾಗುವ ಪರಿಕರಗಳನ್ನು ಸರಕಾರದಿಂದ ಒದಗಿಸುವುದಾಗಿ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಸೂತಿ ತಜ್ಞರ, ಮಕ್ಕಳ ತಜ್ಞರ ಸೇವೆಯನ್ನು ಪಡೆಯಲು ಹಾಗೂ ಹೆರಿಗೆಗೆ ಬೇರಡೆ ಹೋಗದಂತೆ ಸಮುದಾಯ ಆರೋಗ್ಯ ಕೇಂದ್ರದ ಸದುಪಯೋಗ ಪಡೆಯಲು ಗ್ರಾಮೀಣ ಜನರಿಗೆ ಹೆಚ್ಚಿನ ಮಾಹಿತಿ ನೀಡಲು ಸೂಚಿಸಿದರು.

ಇದೇ ಸಂದರ್ಭದಲ್ಲಿ ಪಟ್ಟಣ ಪಂಚಾಯತ ಅಧ್ಯಕ್ಷ ಬಾಪೂಗೌಡ ದೇವರಮನಿ, ಉಪಾಧ್ಯಕ್ಷರಾದ ಲಕ್ಷ್ಮೀ ಸೋಮನಾಥ, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಯ್ಯನಗೌಡ, ಪ್ರಸೂತಿ ತಜ್ಞೆ ಡಾ.ಜೀವನ ಜ್ಯೋತಿ, ಮಕ್ಕಳ ತಜ್ಞೆ ಡಾ.ದೀಪಿಕಾ, ಆಯುಷ್ ವೈದ್ಯ ಡಾ.ವೀರುಪಾಕ್ಷಪ್ಪ, ಡಯಾಲಿಸಿಸ್ ತಂತ್ರಜ್ಞೆ ಅಂಬಿಕಾ ಸೇರಿದಂತೆ ಪಟ್ಟಣ ಪಂಚಾಯತ ಸದಸ್ಯರು, ಆಸ್ಪತ್ರೆಯ ಸಿಬ್ಬಂದಿ ಜಯಲಕ್ಷ್ಮಿ, ಮಹೇಶ್ವರಿ, ಶಶಿಕಲಾ, ಅನ್ನಪೂರ್ಣ, ಚೈತ್ರಾ, ವೇಂಕಟೇಶ ಸೇರಿದಂತೆ ಇತರರು ಇದ್ದರು.

ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್ ಸ್ಮರಣಾರ್ಥ ರಾಷ್ಟ್ರೀಯ ಶಿಕ್ಷಣ ದಿನಾಚರಣೆ

# ಕಲಿಕೆಯೇ ಶಿಕ್ಷಣದ ಮಹತ್ ಕಾರ್ಯ: ಪ್ರವೀಣ್ ಕುಮಾರ್




ರಾಯಚೂರು ನವೆಂಬರ್ 11 : ಶಿಕ್ಷಣ ಎಂದರೆ ಕೇವಲ ಓದುವುದಲ್ಲ. ಇತರರಿಂದ ಕಲಿಯುವುದು ಮತ್ತು ಇತರರಿಗೆ ಕಲಿಸುವುದು ಸಹ ಶಿಕ್ಷಣದ ಮಹತ್ವದ ಕಾರ್ಯವಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್ ಅವರು ಹೇಳಿದರು.

ನಗರದ ಚಂದ್ರಬಂಡ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನವೆಂಬರ್ 11ರಂದು ನಡೆದ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರ ಅವರಿಗೆ ಮರಣೋತ್ತರವಾಗಿ ಭಾರತ ರತ್ನ ನೀಡಿ ಗೌರವಿಸಿತು. ವಿದ್ಯಾರ್ಥಿಗಳು ಮಾತ್ರವಲ್ಲದೇ ದೇಶದ ಪ್ರತಿಯೊಬ್ಬ ಪ್ರಜೆಯೂ ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರ ಕೊಡುಗೆಯನ್ನು ನೆನೆಯಬೇಕು. ರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸುವ ಮುಖ್ಯ ಉದ್ದೇಶ ಭಾರತದ ಮೊದಲ ಶಿಕ್ಷಣ ಸಚಿವರು ಭಾರತದ ಶಿಕ್ಷಣಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸುವುದಾಗಿದೆ ಎಂದರು. ಡಾ. ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಶಿಕ್ಷಣ ಸಚಿವರಾಗಿದ್ದ ಸಮಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ತಂದರು. ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಎಂದು ಸಲಹೆ ಮಾಡಿದ್ದರು. ಕೇಂದ್ರ ಶಿಕ್ಷಣ ಸಲಹಾ ಮಂಡಳಿಯ ಅಧ್ಯಕ್ಷರಾಗಿದ್ದ ಅಜಾದ್ ಅವರು ವಯಸ್ಕರ ಶಿಕ್ಷಣ-ಕ್ಕು ಸಹ ಪ್ರಾಮುಖ್ಯತೆ ನೀಡಿದರು. ವಿಶ್ವವಿದ್ಯಾಲಯ ಅನುದಾನ ಆಯೋಗದ ರಚನೆ, ಬೆಂಗಳೂರಿನಲ್ಲಿ ಭಾರತೀಯ ವಿಜ್ಞಾನ ಸಂಸ್ಥೆ ಮತ್ತು ದೆಹಲಿ ವಿಶ್ವವಿದ್ಯಾಲಯದಲ್ಲಿ ತಂತ್ರಜ್ಞಾನ ವಿಭಾಗ ತೆರೆಯಲು ಒತ್ತು ನೀಡಿದರು. ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯದ ಸಂಸ್ಥಾಪಕರಲ್ಲಿ ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್ ಅವರು ಸಹ ಒಬ್ಬರಾಗಿದ್ದಾರೆ ಎಂದರು. ಜಾಥಾಕ್ಕೆ ಚಾಲನೆ: ವೇದಿಕೆಯ ಕಾರ್ಯಕ್ರಮಕ್ಕು ಮುನ್ನ ನಗರದ ಜಿಲ್ಲಾ ಕ್ರೀಡಾಂಗಣದ ಹತ್ತಿರದ ಹಾಸ್ಮಿಯ್ ಶಾಲಾ ಆವರಣದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯ ಅರಿವು ಸಪ್ತಾಹ ಜಾಥಾ ನಡೆಯಿತು. ನಗರದ ಬಸವೇಶ್ವರ ವೃತ್ತದಿಂದ ಆರಂಭವಾಗಿ ಚಂದ್ರಮೌಳೇಶ್ವರ ವೃತ್ತದ ಮಾರ್ಗವಾಗಿ ಚಂದ್ರಬಂಡ ಅಲ್ಪಸಂಖ್ಯಾತರ ಮೊರಾರ್ಜಿ ವಸತಿ ಶಾಲೆಯವರೆಗೆ ಜಾಥಾ ಸಾಗಿತು. ಗಮನ ಸೆಳೆದ ವೇಷಧಾರಿಗಳು: ಮಹಾತ್ಮ ಗಾಂಧಿ, ಲಾಲ್ ಬಹಾದ್ದೂರ್ ಶಾಸ್ತ್ರಿ, ಡಾ.ಮೌಲಾನಾ ಅಬ್ದುಲ್ ಕಲಾಂ ಅಜಾದ್, ವೀರವನಿತೆ ಒನಕೆ ಓಬವ್ವ ಸೇರಿದಂತೆ ಅನೇಕ ರಾಷ್ಟ್ರೀಯ ನಾಯಕರ ವೇಷಧಾರಿಗಳಾಗಿ ಪುಟಾಣಿ ಮಕ್ಕಳು ಗಮನ ಸೆಳೆದರು. ಮೆಚ್ಚುಗೆ ಪಡೆದ ವೇಷಧಾರಿಗಳಿಗೆ ಬಹುಮಾನ ನೀಡಲಾಯಿತು. ಇದೇ ಸಂದರ್ಭದಲ್ಲಿ ಅರಕೇರಾ ತಹಶಿಲ್ದಾರ್ ಅಮರೇಶ ಬಿರಾದಾರ್, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ ನಾಯಕ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ವಿಸ್ತರಣಾಧಿಕಾರಿ ಮೈಬೂಬ್ ಸಾಬ್, ವಿವಿಧ ಶಾಲೆಯ ಪ್ರಾಂಶುಪಾಲರಾದ ಚೇತನ, ಲಕ್ಷ್ಮೀಕಾಂತ್, ವಸತಿ ನಿಲಯಪಾಲಕರಾದ ನಾಗೇಂದ್ರ ಪೂಜಾರಿ, ರೇವಣಸಿದ್ದಪ್ಪ, ನಾಗವೇಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ಲೆಕ್ಕ ಅಧಿಕ್ಷಕರಾದ ವೆಂಕಟೇಶ, ಎಫ್.ಡಿ.ಎ ಮಲೇಶ, ಕಟ್ಟೆಪ್ಪ ಸೇರಿದಂತೆ ವಿವಿಧ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ಉದ್ಯೋಗಿಗಳ ನೋಂದಣಿ ಅಭಿಯಾನ ಆರಂಭ

ರಾಯಚೂರು ನವೆಂಬರ್ 11 : ನೌಕರರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್ಒ) ವತಿಯಿಂದ ಉದ್ಯೋಗಿಗಳ ನೋಂದಣಿ ಅಭಿಯಾನ-2025 ಪ್ರಾರಂಭಿಸಲಾಗಿದ್ದು, ನೌಕರರು ಸ್ವಯಂ ಪ್ರೇರಿತವಾಗಿ ನೋಂದಾಯಿಸಲು ಉದ್ಯೋಗದಾತರಿಗೆ ಅವಕಾಶ ನೀಡಲಾಗಿದೆ ಎಂದು ನೌಕರರ ಭವಿಷ್ಯನಿಧಿ ಸಂಸ್ಥೆಯ ರಾಯಚೂರಿನ ಪ್ರಾದೇಶಿಕ ಕಚೇರಿಯ ಆಯುಕ್ತರು ತಿಳಿಸಿದ್ದಾರೆ. ಈ ಅಭಿಯಾನದ ಉದ್ದೇಶವು 1ನೇ ಜುಲೈ 2017 ರಿಂದ 2025ರ ಅಕ್ಟೋಬರ್ 31ರವರೆಗೆ ನೌಕರರ ಭವಿಷ್ಯ ನಿಧಿ ಹಾಗೂ ಇತರ ವಿಧೇಯ ಕಾಯ್ದೆ, 1952 ಅಡಿಯಲ್ಲಿ ನೋಂದಣಿಯಾಗದ ನೌಕರರು ಸ್ವಯಂ ಪ್ರೇರಿತವಾಗಿ ನೋಂದಾಯಿಸಲು ಉದ್ಯೋಗದಾತರಿಗೆ 2026ರ ಏಪ್ರಿಲ್ 30ರವರೆಗೆ ನೋಂದಣಿಗೆ ಅವಕಾಶ ನೀಡಲಾಗಿದೆ

ಈ ಅಭಿಯಾನದ ಉದ್ದೇಶವು ಎಲ್ಲಾ ಅರ್ಹ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಪ್ರಯೋಜನಗಳನ್ನು ವಿಸ್ತರಿಸುವುದು ಮತ್ತು ಸಂಸ್ಥೆಗಳು ಸ್ವಯಂ ಪ್ರೇರಿತವಾಗಿ ಮುಂದೆ ಬಂದು ತಮ್ಮ ನೌಕರರ ಸದಸ್ಯತ್ವವನ್ನು ನಿಯಮಿತಗೊಳಿಸಲು ಪ್ರೋತ್ಸಾಹಿಸುವುದಾಗಿದೆ.

ಈ ಯೋಜನೆಯಡಿ, ಉದ್ಯೋಗದಾತರು ನಿಗದಿತ ಅವಧಿಯೊಳಗೆ ನೋಂದಾಯಿಸದ ನೌಕರರನ್ನು ಬಹಿರಂಗಪಡಿಸಿ ಸಂಬಂಧಿತ ಭವಿಷ್ಯ ನಿಧಿ ಕೊಡುಗೆಗಳನ್ನು ಪಾವತಿಸಬಹುದು ಅಭಿಯಾನದ ಸಮಯದಲ್ಲಿ ಹಾನಿ ಮತ್ತು ದಂಡದ ಮೇಲಿನ ಏಕಕಾಲಿನ ಸಡಿಲಿಕೆ ನೀಡಲಾಗುತ್ತದೆ. ಇದ-ರಿಂದ ಸರಳ ಹಾಗೂ ಪಾರದರ್ಶಕ ನೋಂದಣಿ ಪ್ರಕ್ರಿಯೆ ಖಚಿತವಾಗುತ್ತದೆ.

ಈ ಉಪಕ್ರಮದ ಮೂಲಕ ಇಪಿಎಫ್ಒ ಎಲ್ಲ ಕಾರ್ಮಿಕರಿಗೂ ವಿಶ್ವ ವ್ಯಾಪಕ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ಒದಗಿಸುವುದು ಹಾಗೂ ಅವರ ಆರ್ಥಿಕ ಮತ್ತು ಸಾಮಾಜಿಕ ಕಲ್ಯಾಣವನ್ನು ಖಾತ್ರಿಪಡಿಸುವ ಸರ್ಕಾರದ ದೃಷ್ಟಿಕೋಣವನ್ನು ಬಲಪಡಿಸಲು ಪ್ರಯತ್ನಿಸುತ್ತಿದ್ದು, ಎಲ್ಲಾ ಸಂಸ್ಥೆಗಳಿಗೂ ಈ ಅವಕಾಶವನ್ನು ಉಪಯೋಗಿಸಿಕೊಂಡು ನಿಗದಿತ ಅವಧಿಯೊಳಗೆ ತಮ್ಮ ನೌಕರರನ್ನು ನೋಂದಾಯಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಗಳು ಮತ್ತು ಸದಸ್ಯರು www.epfindia.gov.in ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಅಥವಾ ಹತ್ತಿರದ ಪ್ರಾದೇಶಿಕ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ನೌಕರರ ಭವಿಷ್ಯ ನಿಧಿ ಸಂಸ್ಥೆಯ ರಾಯಚೂರಿನ ಪ್ರಾದೇಶಿಕ ಕಚೇ-ರಿಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಧಾನ್ಯ ವಿತರಣೆ

ರಾಯಚೂರು ನವೆಂಬರ್ 11 : ಇಲಿನ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2025ರ ನವೆಂಬರ್ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಸೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಿಪ್ಪು ಸುಲ್ತಾನರ 274 ನೇ ಜಯಂತಿ ಹಾಗೂ ಟಿಪ್ಪು ಸುಲ್ತಾನರ ವೃತ್ತ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು :- ಪಟ್ಟಣದ ಗಡಿಯಾರ ವೃತ್ತದಲ್ಲಿ ಟಿಪ್ಪು ಸುಲ್ತಾನರ 274 ನೇ ಜಯಂತಿ ಹಾಗೂ ವೃತ್ತಕ್ಕೆ ಟಿಪ್ಪು ಸುಲ್ತಾನರ ನಾಮಫಲಕದ ಉದ್ಘಾಟನೆಯನ್ನು ಮಾಜಿ ಪುರಸಭೆ ಅಧ್ಯಕ್ಷ ಖಾದರ್ ಪಾಷಾ ಉದ್ಘಾಟಿಸಿ ನಂತರ ಮಾತನಾಡಿದ ಅವರು ನಮ್ಮೆಲರ ಮನಸ್ಸಿನಲ್ಲಿಯೂ ಅವರು ಉಳಿದಿರುವುದೇ ಅವರು ಮಾಡಿರುವ ಒಳ್ಳೆಯ ಕಾರ್ಯ ಯಾವುದೇ ಧರ್ಮ ಜಾತಿಗೆ ಅವರು ಸೀಮಿತವಾಗಿರಲಿಲ್ಲ , ಸ್ವಾತಂತ್ರದ ಪೂರ್ವದಲ್ಲೂ ಬ್ರಿಟಿಷರ ಗುಲಾಮಗಿರಿಯಲ್ಲಿದಾಗಲೂ ಮೊದಲು ಅವರ ವಿರುದ್ಧ ಧ್ವನಿ ಎತ್ತಿದ ಮೊದಲನೆಯವರೇ ಟಿಪ್ಪು ಸುಲ್ತಾನರು, ಅವರು ಹಿಂದೂ ವಿರೋಧಿಗಳಲ್ಲ , ಅವರು ಸ್ವತಂತ್ರ ಹೋರಾಟಗಾರರು , ಎಲ್ಲ ಜಾತಿ ಧರ್ಮದವರಿಗಾಗಿ ಹೋರಾಟ ಮಾಡಿದವರು , 1973 ರಲ್ಲಿ ಕರ್ನಾಟಕ ಏಕೀಕರಣ ವಾದ ಸಂದರ್ಭದಲ್ಲಿ ಮೈಸೂರು ರಾಜ್ಯ ಇದ್ದದ್ದು ಹೋಗಿ ಕರ್ನಾಟಕ ರಾಜ್ಯ ವಾಗಿದೆ, ಅವರು ಹೋರಾಟ ಮಾಡದಿದ್ದರೆ ಮೈಸೂರು ಇರುತ್ತಿರಲಿಲ್ಲ ಕರ್ನಾಟಕವು ಇರುತ್ತಿರಲಿಲ್ಲ , ಮೈಸೂರಿನ ಹೋರಾಟದ ಫಲವಾಗಿ ಇವರಿಗೆ ಮೈಸೂರು ಹುಲಿ ಎಂದು ಕರೆಯಲಾಗಿದೆ ಎಂದರು ಈ ಸಂದರ್ಭದಲ್ಲಿ ಸೈಯ್ಯದ್ ಯುನುಸ್ ಮುಫ್ತಿ, ಟಿಪ್ಪು ಸುಲ್ತಾನ್ ಸಂಘದ ತಾಲೂಕ ಅಧ್ಯಕ್ಷ ಅಲ್ಲಭಕ್ಷ ಮನಿಯಾರ್ , ಮಹಮ್ಮದ್ ರಫಿ , ಅಮರೇಶ್ , ಹನುಮಂತ ನಾಯಕ್ , ಮಹಮ್ಮದ್ ಕೆ ಎಫ್ ಸಿ , ಇಬ್ರಾಹಿಂ , ಫಯಾಜ್ ಮನಿಯಾರ್ , ಆರುನ್, ಎಕ್ಬಾಲ್ ಸೇರಿದಂತೆ ಇನ್ನು ಹಲವರು ಇದ್ದರು.

# ವೀರವನಿತೆ ಒನಕೆ ಓಬವ್ವನ ಧೈರ್ಯ, ಸಾಹಸ ಮಹಿಳೆಯರಿಗೆ ಸ್ಫೂರ್ತಿ: ಜಿಲ್ಲಾಧಿಕಾರಿ



ರಾಯಚೂರು ನವೆಂಬರ್ 11 : ವೀರವನಿತೆ ಒನಕೆ ಓಬವ್ವನ ಸಮಯ ಪ್ರಜ್ಞೆ, ಧೈರ್ಯ ಮತ್ತು ಸಾಹಸಗಳು ಹೆಣ್ಣು ಮಕ್ಕಳಿಗೆ ಸ್ಫೂರ್ತಿದಾಯಕವಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನವೆಂಬರ್ 11ರಂದು ನಡೆದ ವೀರರಾಣಿ ಒನಕೆ ಓಬವ್ವನ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಎದುರಾಳಿ ಸೈನಿಕರು ಕೋಟೆಯನ್ನು ಮುತ್ತಿದಾಗ, ಮನೆಯಲ್ಲಿನ ಒನಕೆಯನ್ನೇ ಆಯುಧವಾಗಿ ಬಳಸಿ ನೂರಾರು ಸೈನಿಕರ ರುಂಡಗಳನ್ನು ಚಂಡಾಡಿ, ಕೋಟೆಯನ್ನು ರಕ್ಷಿಸಿ ವೀರನಾರಿ ಎನ್ನುವ ಬಿರುದು ಪಡೆದುಕೊಂಡರು. ಇಂತಹ ವೀರನಾರಿಯ ಚರಿತ್ರೆಯನ್ನು ಎಲ್ಲೆಡೆ ಪಸರಿಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕು. ವಿದ್ಯಾರ್ಥಿಗಳು ವೀರ ನಾರಿ ಒನಕೆ ಓಬವ್ವನ ಧೈರ್ಯ ಸಾಹಸವನ್ನು ಮೈಗೂಡಿಸಿಕೊಳ್ಳಬೇಕು.

ರಾಯಚೂರು ಜಿಲ್ಲೆ ಅಭಿವೃದ್ಧಿ ಪಥದಲ್ಲಿದೆ. ಮೈಸೂರು, ಬೆಳಗಾವಿ ಜಿಲ್ಲೆಗಳಲ್ಲಿ ಆಗಿರುವಂತಹ ಬದಲಾವಣೆಗಳು ನಮ್ಮಲ್ಲೂ ಆಗಬೇಕು. ಅಪೌಷ್ಟಿಕತೆಯನ್ನು ಹೋಗಲಾಡಿಸಬೇಕು. ಪೂರ್ಣ ಪ್ರಮಾಣದ ಶಿಕ್ಷಣದ ಕೊರತೆ ತಪ್ಪಬೇಕು. ತಾಯಿ ಮತ್ತು ಮಕ್ಕಳು ಎದುರಿಸುತ್ತಿರುವ ರಕ್ತಹೀನತೆಯಂತಹ ಸಮಸ್ಯೆಗಳು ತೊಲಗಬೇಕು. ಅನೇಕ ಪ್ರಗತಿದಾಯಕ ಕಾರ್ಯಕ್ರಮ ರೂಪಿಸುತ್ತಿರುವ ಜಿಲ್ಲಾಡಳಿತಕ್ಕೆ ಜನತೆ ಸಹಕಾರ ನೀಡಬೇಕೆಂದು ಹೇಳಿದರು.

ಈ ಭಾಗದ ವಿದ್ಯಾರ್ಥಿಗಳು ಅಧ್ಯಯನಶೀಲರಾಗಬೇಕು. ಐಎಎಸ್, ಐಪಿಎಸ್‌ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಉನ್ನತ ಹುದ್ದೆಗಳಿಗೇರಬೇಕು. ಈ ಭಾಗದಲ್ಲಿ ಮಹಿಳಾ ಅಧಿಕಾರಿಗಳ ಸಂಖ್ಯೆ ಕಡಿಮೆ ಇದ್ದು, ವಿದ್ಯಾರ್ಥಿನಿಯರು ಓದಿನಲ್ಲಿ ಮುಂದೆ ಬರಬೇಕು. ಹಾಸ್ಟೇಲ್ ಸೌಕರ್ಯ ಪಡೆದು-ಕೊಂಡು ವಿದ್ಯಾರ್ಥಿನಿಯರು ಉನ್ನತ ವ್ಯಾಸಾಂಗ ಮಾಡಬೇಕು ಎಂದು ಸಲಹೆ ಮಾಡಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ವೀರ ವನಿತೆ ಒನಕೆ ಓಬವ್ವ ಜಯಂತಿ ಆಚರಣೆ-ಯ ಉದ್ದೇಶ ವಿದ್ಯಾರ್ಥಿನಿಯರಿಗೆ ಸ್ಫೂರ್ತಿ ತುಂಬುವುದಾಗಿದೆ ಎಂದು ತಿಳಿಸಿದರು.

ದೇವದುರ್ಗ ತಾಲೂಕಿನ ಬಸವ ಪದವಿ ಪೂರ್ವ ಹಾಗೂ ಪದವಿ ಮಹಾವಿದ್ಯಾಲಯದ ಇತಿಹಾಸ ಉಪನ್ಯಾಸಕಿ ಮತ್ತು ಲೇಖಕಿ ಕುಮಾರಿ ಕೆ. ಶಿಲ್ಪಕಲಾ ಬೊಮ್ಮನಾಳ ಅವರು ವಿಶೇಷ ಉಪನ್ಯಾಸ ನೀಡಿ, ಒನಕೆ ಓಬವ್ವ ನಿಷ್ಠೆ ಹಾಗೂ ತ್ಯಾಗ ಮತ್ತು ಧೈರ್ಯದ ಸಂಗಮ. ನಮಗೆ ರಾಷ್ಟ್ರೀಯತೆಯ ಪರಿಕಲ್ಪನೆಯೇ ಬಂದಿರದ ಸಮಯದಲ್ಲಿ ಒನಕೆ ಓಬವ್ವ ಅವರು

ಚಿತ್ರದುರ್ಗದ ಕೋಟೆಯ ರಕ್ಷಣೆಗೆ ಹೋರಾಡಿದ್ದಾರೆ. ನಾವೆಲ್ಲರೂ ಓಬವ್ವ ಅವರಿಂದ ಸ್ಫೂರ್ತಿ ಪಡೆಯಬೇಕು. ಒನಕೆ ಓಬವ್ವ ಚರಿತ್ರೆಯು ಸ್ತ್ರೀ ಸಬಲೀಕರಣಕ್ಕೆ ಸ್ಫೂರ್ತಿಯಾಗಿದೆ. ಅವರ ಚರಿತ್ರೆಯು ಯುವ ಜನತೆಗೆ ಪ್ರೇರಣೆ ನೀಡುತ್ತದೆ. ಪ್ರತಿಯೊಬ್ಬ ಪುರುಷನ ಸಾಧನೆಯ ಹಿಂದೆ ಹೆಣ್ಣಿನ ಶಕ್ತಿ ಇರುತ್ತದೆ ಎಂಬುದಕ್ಕೆ ಉದಾಹರಣೆ ಒನಕೆ ಓಬವ್ವ ಎಂದು ತಿಳಿಸಿದರು.

ನಮ್ಮ ನಮ್ಮ ಕೆಲಸವನ್ನು ನಾವು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಣೆ ಮಾಡಬೇಕು. ಪ್ರತಿಯೊಬ್ಬ ಮಹಿಳೆಯು ಸ್ವಾವಲಂಬಿಯಾಗಿ ಬದುಕಬೇಕು. ಆಂತರಿಕವಾಗಿ ಬದಲಾಗಬೇಕು. ಮಹಿಳಾಕುಲದ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸುವ ಅನೇಕ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರಿಗೆ ಸರಿ ಸಮಾನವಾಗಿ ಕೆಲಸ ಮಾಡಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ರಾಯಚೂರಿನ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಚನ್ನಬಸವ, ತಾಲೂಕು

ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ ಕುಮಾರ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಸಮಾಜದ ಮುಖಂಡರಾದ ವಿನೋದ ಸಾಗರ್, ಎಮ್.ವಸಂತ, ಅರ್ಚನ, ಪ್ರಿಯದರ್ಶಿನಿ, ಲಲಿತಾ ಕೊಂಬಿನ್ ಸೇರಿದಂತೆ ಇತರರು ಇದ್ದರು. ಶಿಕ್ಷಕಿ ಯಶೋಧ ನಿರೂಪಿಸಿದರು. ಸತ್ಯವತಿ ದೇಶಪಾಂಡೆ ಸ್ವಾಗತಿಸಿದರು.

# ಮುಖ್ಯ ನ್ಯಾಯಮೂರ್ತಿಗಳ ಕಾರ್ಯಕ್ರಮ: ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಸೂಚನೆ



ರಾಯಚೂರು ನವೆಂಬರ್ 11 : ಕರ್ನಾಟಕದ ಉಚ್ಚನ್ಯಾಯಾಲಯದ ಘನವೆತ್ತ ಮುಖ್ಯನ್ಯಾಯಮೂರ್ತಿಗಳು ನವೆಂಬರ್ 15ರಂದು ರಾಯಚೂರು ಜಿಲ್ಲೆಯಲ್ಲಿ ಹಮ್ಮಿಕೊಂಡ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನವೆಂಬರ್ 10ರಂದು ಸಂಜೆ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಘನವೆತ್ತ ಮುಖ್ಯನ್ಯಾಯಮೂರ್ತಿಗಳು ನವಂಬರ್ 15ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ, ರಾಯಚೂರು ಜಿಲ್ಲೆಯ ದೇವದಾಸಿಯರ ಸ್ಥಿತಿ ಗತಿ ಹಾಗೂ ಪುನರ್ವಸತಿ ಕುರಿತು ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಕ್ರಮವು ಸಕಾಲಕ್ಕೆ, ಶಿಸ್ತಿನಿಂದ ಹಾಗೂ ಯಶಸ್ವಿಯಾಗಿ ನಡೆಯುವಂತೆ ರಾಯಚೂರು ಸಹಾಯಕ ಆಯುಕ್ತರ ಮೇಲುಸ್ತುವಾರಿಯಲ್ಲಿ ಸಂಬಂಧಪಟ್ಟದ ಇಲಾಖಾಧಿಕಾರಿಗಳು, ಇಲಾಖಾ ಸಿಬ್ಬಂದಿಯಿಂದ ರಚಿಸಿದ ಸಮಿತಿಗಳಿಗೆ ವಹಿಸಿದ ಎಲ್ಲ ಕಾರ್ಯಗಳನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಗಣ್ಯರ ಸ್ವಾಗತ, ಶಿಷ್ಟಾಚಾರ, ಆಮಂತ್ರಣ ಪತ್ರಿಕೆ, ಕಲಾ ತಂಡಗಳ ಇತ್ಯಾದಿ ವ್ಯವಸ್ಥೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳು, ಬಿಸಿಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು ತಹಸೀಲ್ದಾರರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಶಿಸ್ತಿನಿಂದ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ರಂಗಮಂದಿರದಲ್ಲಿ ವಿದ್ಯುತ್ ಸಂಪರ್ಕ ಹಾಗೂ ವೇದಿಕೆ ಅಲಂಕಾರದ ಬಗ್ಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳು, ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರು ಮತ್ತು ಜೆಸ್ಕಾಂ ಅಧಿಕಾರಿಗಳು ಅಗತ್ಯ ಏರ್ಪಾಡು ಮಾಡಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮದ ದಿನದಂದು ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತು ಸೂಕ್ತ ಭದ್ರತೆ ಒದಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ತಿಳಿಸಿದರು.

ಸಾರ್ವಜನಿಕರು, ಗಣ್ಯರು, ಅಧಿಕಾರಿಗಳು, ಪತ್ರಕರ್ತರಿಗೆ ಕುಡಿಯುವ ನೀರು ಹಾಗೂ ಊಟೋಪಚಾರದ ವ್ಯವಸ್ಥೆ ಮಾಡಬೇಕು. ಅಗತ್ಯ ಪ್ರಚಾರ ಕಾರ್ಯಕೈಗೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಬಕಾರಿ ಇಲಾಖೆ, ಆಹಾರ ಇಲಾಖೆ, ಮಹಾನಗರ ಪಾಲಿಕೆ, ವಾರ್ತಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ತುರ್ತು ಚಿಕಿತ್ಸೆಗಾಗಿ ವೈದ್ಯಾಧಿಕಾರಿ ಮತ್ತು ನುರಿತ ಸಿಬ್ಬಂದಿಗಳೊಂದಿಗೆ ಸೂಕ್ತ ಅಂಬೂಲೆನ್ಸ್ ವ್ಯವಸ್ಥೆ ಮಾಡಬೇಕು. ಅಗ್ನಿಶಾಮಕ

ಅಧಿಕಾರಿಗಳು, ಕಾರ್ಯಕ್ರಮದ ಸ್ಥಳದಲ್ಲಿ ಅಗ್ನಿಶಾಮಕ ವಾಹನದೊಂದಿಗೆ ನುರಿತ ಸಿಬ್ಬಂದಿಯ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು. ದೇವದಾಸಿ ಮಹಿಳೆಯರಿಗೆ ಸೂಕ್ತ ಸಾರಿಗೆ ವ್ಯವಸ್ಥೆಗೆ ಕ್ರಮ ವಹಿಸಲು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಶಾಲಾ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ,

ವಿವಿಧ ಇಲಾಖೆಯ ಅಧಿಕಾರಿಗಳಾದ ನವೀನ್ ಕುಮಾರ್, ಡಾ.ಸುರೇಂದ್ರ ಬಾಬು, ನಸೀರ್ ಅಹಮದ್, ರಾಜೇಂದ್ರ ಜಲ್ದಾರ್, ಅಗ್ನಿ ಶಾಮಕದಳದ ರವೀಂದ್ರ ಸೇರಿದಂತೆ ವಿವಿಧ ಅಭಿವೃದ್ಧಿ ನಿಗಮಗಳ ಜಿಲ್ಲಾ ವ್ಯವಸ್ಥಾಪಕರು ಮತ್ತು ಮತ್ತೀತರರು ಇದ್ದರು.

# ಮೌಲಾನಾ ಅಬುಲ್ ಕಲಾಂ ಆಜಾದ್ ಜನ್ಮದಿನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯರು, ಕಾರ್ಯಕರ್ತರು ಹಾಗೂ ವಿವಿಧ ಘಟಕಗಳ ನಾಯಕರು ಭಾಗವಹಿಸಿದರು.

ಮೌಲಾನಾ ಅಬುಲ್

ಕಲಾಂ ಆಜಾದ್ ಅವರು ಸ್ವಾತಂತ್ರ್ಯ ಹೋರಾಟದ ಶ್ರೇಷ್ಠ ನಾಯಕರಾಗಿದ್ದು, ಭಾರತದ ಮೊದಲ ಶಿಕ್ಷಣ ಸಚಿವರಾಗಿದ್ದರು. ದೇಶದ ಏಕತೆ, ಬೌದ್ಧಿಕತೆ ಮತ್ತು ಪ್ರಗತಿಗೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ನಾಯಕರು ಶಿಕ್ಷಣದ ಮೌಲ್ಯ, ಸಾಮಾಜಿಕ ಸಾಮರಸ್ಯ ಮತ್ತು ಸಂವಿಧಾನಿಕ ಬದ್ಧತೆಯ ಮಹತ್ವವನ್ನು ನೆನಪಿಸಿದರು. ಅವರ ಆದರ್ಶಗಳನ್ನು ಅನುಸರಿಸಿ ಸಮಾಜದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿರುವುದನ್ನು ನಾಯಕರು ಪುನರುಚ್ಚರಿಸಿದರು. ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ರಾಯಚೂರು

# ಪವರ್ ಮ್ಯಾನ್ ಬೇಲ್ಟ್ ಚೈನ್ ಡ್ರೇಸ್ ಹಾಕಿಕೊಂಡು ತಮ್ಮ ಕೆಲಸ ನಿರ್ವಹಿಸಿ: ಗುರುಶಾಂತ್ ವಾರದ್

ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ್: ರೈತರು ಹಾಗೂ ಸಾರ್ವಜನಿಕರು ಯಾವುದೇ ರೀತಿ ವಿದ್ಯುತ್ ಸಂಬಂಧಿ ಸಮಸ್ಯೆಗಳು ಬಂದರೂ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಬೇಕು.

ಇಂತಹ ಸಂದರ್ಭದಲ್ಲಿ ಅವಸರದ ನಿರ್ಧಾರ ತೆಗೆದು–ಕೊಂಡು ವಿದ್ಯುತ್ ಅವಘಡ ಸಂಭವಿಸಿದರೆ ನಿಮ್ಮನ್ನೇ ನಂಬಿದ್ದ ನಿಮ್ಮ ಕುಟುಂಬ ಸಮಸ್ಯೆ ಎದುರಿಸಬೇಕಾಗಬಹುದು ಎಂದು ಪ್ರಭಾರಿ

ಕಾರ್ಯನಿರ್ವಾಹಕ ಅಭಿಯಂತರಾದ ಗುರುಶಾಂತ್ ವಾರದ್ ರವರು ಪಟ್ಟಣದ ರಾಮ ಮತ್ತು ರಾಜ್ ಪ್ರೌಢಶಾಲೆ ಯಲ್ಲಿ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ವತಿಯಿಂದ ವಿದ್ಯುತ್ ಸುರಕ್ಷತಾ ಜಾಗೃತಿ ಕಾರ್ಯಗಾರ ಹಾಗೂ ಹಾಗೂ

ವಿದ್ಯುತ್ ಪರಿವರ್ತಕ ಕಾರ್ಯಗಾರ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ತಿಳಿಸಿದರು.

ವಿದ್ಯುತ್ ಸಿಬ್ಬಂದಿ ಸಮಸ್ಯೆಗಳ ಪರಿಹಾರಕ್ಕಾಗಿ ಜೆಸ್ಕಾಂ ವತಿಯಿಂದ ದಿನದ 24 ಗಂಟೆ ಕಾರ್ಯನಿರ್ವಹಿಸುವ ಸಹಾಯವಾಣಿ ಸೇರಿದಂತೆ ವಾಟ್ಸಾಪ್ ಮತ್ತಿತರೆ ತುರ್ತು ಸಂಪರ್ಕ ಸಂಖ್ಯೆಗಳನ್ನು ನೀಡಲಾಗಿದೆ.

ಹೀಗಾಗಿ ಯಾವುದೇ ತೊಂದರೆಗಳಿದ್ದರೂ ಅವುಗಳ ಮೂಲಕ ಜೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರೆ ಅವರು ಸಮಸ್ಯೆ ಬಗೆಹರಿಸುತ್ತಾರೆ.

ಇದರ ಅನುಕೂಲ ಪಡೆದು ನೀವು ಸುರಕ್ಷಿತವಾಗಿರುವುದರ ಜತೆಗೆ ನಿಮ್ಮ ಸುತ್ತ ಇರುವವರನ್ನೂ ಸುರಕ್ಷಿತವಾಗಿರಿಸಬೇಕು ಎಂದು ಹೇಳಿದರು.

ಪವರ್ ಮ್ಯಾನ್ ರವರು ಬೇಲ್ಟ್, ಚೈನ್, ಡ್ರೇಸ್ ಹಾಕಿಕೊಂಡು ತಮ್ಮ ಕೆಲಸ ನಿರ್ವಹಿಸಿದರೆ ಯಾವುದೇ ವಿದ್ಯುತ್ ತಗಲುವುದಿಲ್ಲ ಎಂದು ತಿಳಿಸಿದರು. ಈ ಕಾರ್ಯಗಾರದಲ್ಲಿ ಸಾಯಕ ಕಾರ್ಯನಿರ್ವಾಹಕ ಅಭಿಯಂತರಾದ ರಮೇಶ್, ಎಇಇ ವೀರೇಶ್ ಕುಂಬಾರ್, ನಾರಾಯಣರಾವ ಲೆಕ್ಕಾಧಿಕಾರಿ ಜಾಜಿ ಗಣಪತಿ, ಎಂ.ಟಿ.ಎಇಇ ರಾಹುಲ್ ಹಜಾರೆ ಹಾಗೂ ಹುಮನಾಬಾದ, ಬಸವಕಲ್ಯಾಣ, ಮನ್ನಾಎಖ್ಖೇಳಿ,

ಎಲ್ಲಾ ಲೈನ್‌ಮ್ಯಾನ್ ಸಿಬ್ಬಂದಿಗಳು ವಿದ್ಯುತ್ ಸುರಕ್ಷಿತ ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

ಡಾಕ್ಟರ್ ಮುಸ್ತಫ ಕಾರ್ಯಗಾರದಲ್ಲಿ ವಿದ್ಯುತ್ ಸುರಕ್ಷತಾ ಕ್ರಮಗಳ ಬಗ್ಗೆ ಮುಂಜಾಗ್ರತೆ ವಹಿಸುವ ಕುರಿತು ಮಾತನಾಡಿದರು. ಅಗ್ನಿಶಾಮಕ ಠಾಣೆಯ ಸಲಾವುದ್ದೀನ್ ವಿದ್ಯುತ್ ಸುರಕ್ಷತೆ ಕುರಿತು ಪ್ರಾಯೋಗಿಕವಾಗಿ ಮಾತನಾಡಿದರು. ಪ್ರಕಾಶ್ ವರ್ಮ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಜಾಗೃತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.11ಕರ್ನಾಟಕ :ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಉದ್ಯಮಶೀಲತಾ ಚಟುವಟಿಕೆಗಳನ್ನು ಬೆಂಬಲಿಸಲು ಮತ್ತು ಪೋಷಿಸಲು ಹಾಗೂ ಸ್ಥಳೀಯ ಮಟ್ಟದ ಎಂಎಸ್‌ಎಂಇ ಕಾರ್ಯಕ್ಷಮತೆ ಹೆಚ್ಚಿಸಲು ನ.13 ರಂದು ಮಧ್ಯಾಹ್ನ 03 ಗಂಟೆಗೆ ಸಿರುಗುಪ್ಪದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿಡಿಎಸ್‌ಪಿ) ಕುರಿತು ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ಉದ್ಯಮಿದಾರರಿಗೆ ವ್ಯಾಪರ ಅವಕಾಶಗಳ ಕುರಿತು ಮಾರ್ಗದರ್ಶನ, ವ್ಯವಹಾರ ಯೋಜನೆ ಸಿದ್ಧತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ವಿಳಂಬಿತ ಪಾವತಿಗಳ ಸಮಸ್ಯೆಗಳ ಬಗ್ಗೆ ಹಾಗೂ ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಜಾಗೃತಿ ಮೂಡಿಸಲಾಗುತ್ತದೆ.

ಕಾರ್ಯಾಗಾರದಲ್ಲಿ ಆಸಕ್ತಿಯುಳ್ಳ ಉದ್ದಿಮೆದಾರರು ಭಾಗವಹಿಸಿ ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ ಅವರು ತಿಳಿಸಿದ್ದಾರೆ.

# ನ.12 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.11:ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾರ್ಯ ಕೈಗೊಳ್ಳುತ್ತಿರುವುರಿಂದ 11 ಕೆ.ವಿ. ಫೀಡರ್ ನಲ್ಲಿ ನ.12 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ಎಫ್–9 ವ್ಯಾಪ್ತಿಯ ನೆಹರು ಕಾಲೋನಿ, ಎಸ್.ಎನ್.ಪೇಟೆ 1ನೇ, 2ನೇ, 4ನೇ, 5ನೇ ಮತ್ತು 6ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಡಿಎಆರ್ ಗ್ರೌಂಡ್, ಕೂಲ್ ಕಾರ್ನರ್, ಡಬಲ್ ರಸ್ತೆ, ಕೋಲಾಚಲಂ ಕಾಂಪೌಂಡ್, ಗಡಿಗಿ ಚೆನ್ನಪ್ಪ ವೃತ್ತ, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ಹಳೆಯ ತಾಲ್ಲೂಕು ಕಚೇರಿ, ಹಳೆಯ ಜಿಲ್ಲಾಧಿಕಾರಿಗಳ ಕಚೇರಿ, ರೈಲ್ವೇ ಸ್ಟೇಷನ್ ರೋಡ್ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಚಲಿತ್ ಎನ್.ಸಿ ಅವರಿಗೆ ಪಿಎಚ್.ಡಿ ಪ್ರದಾನ

ಬಳ್ಳಾರಿ,ನ.11: ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ಪಿಎಚ್.ಡಿ ವಿದ್ಯಾರ್ಥಿ ಪ್ರಚಲಿತ್ ಎನ್.ಸಿ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಖಡ್ಕೆ ಉದಯಕುಮಾರ್ ಅವರ ಮಾರ್ಗದರ್ಶನದಲ್ಲಿ 'ಸ್ಟಡಿ ಆಫ್ ಫೋಟೋಫಿಸಿಕಲ್ ಸ್ಟ್ರಕ್ಚರಲ್ ಪ್ರಾಪರ್ಟಿಸ್ ಆಫ್ ಸಮ್ ಆರ್ಗ್ಯಾನಿಕ್ ಆಂಡ್ ಕಾಂಪೌಂಡ್ಸ್' ಎಂಬ ಪ್ರೌಢ ಪ್ರಬಂಧ ಮಂಡಿಸಿದ್ದಕ್ಕಾಗಿ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ಲ್ಯಾಪ್‌ಟಾಪ್ ಪಡೆಯಲು ಅರ್ಜಿ ಆಹ್ವಾನ

ಬಳ್ಳಾರಿ,ನ.11:ಕುರೇಕುಪ್ಪ ಪುರಸಭೆ ಕಾರ್ಯಾಲಯದಿಂದ 2024–25 ನೇ ಸಾಲಿನ ಎಸ್.ಎಫ್.ಸಿ ಅನುದಾನದ ಖರ್ಚಾಗದೇ ಉಳಿದ ಮುಕ್ತ ನಿಧಿಯ ಶೇ.24.10 ಎಸ್‌ಸಿಎಸ್‌ಪಿ ಯೋಜನೆಯಡಿ ಬಿಇ ಮತ್ತು ಎಂಬಿಬಿಎಸ್(ಮೆಡಿಕಲ್) ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ನಿಗಧಿತ ನಮೂನೆ ಅರ್ಜಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವ ಚಿತ್ರ, ಪ್ರಸ್ತಕ ಸಾಲಿನ ಅಂಕ ಪಟ್ಟಿ, ವಿದ್ಯಾಭ್ಯಾಸ ಪ್ರಮಾಣ ಪತ್ರ, ಕಾಲೇಜು ಐಡಿ ಕಾರ್ಡ್ ಲಗತ್ತಿಸಿಬೇಕು. ಅರ್ಜಿ ಸಲ್ಲಿಸಲು ನವೆಂಬರ್ 17 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಿಂದ ಥೈಲ್ಯಾಂಡ್ ದೇಶಕ್ಕೆ ವೆಂಕಟೇಶ ಆಯ್ಕೆ

ಯಾದಗಿರಿ : ನವೆಂಬರ್ 11, (ಕ.ವಾ) : ಥೈಲ್ಯಾಂಡ್ ದೇಶದಲ್ಲಿ ನಡೆಯುವ World Ability Sports Games ನಲ್ಲಿ ಭಾಗವಹಿಸಲು ಆಯ್ಕೆಯಾಗಿದ ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ನಗರದ ಅಲ್ಲಿಪೂರ ತಾಂಡದ ನಿವಾಸಿಯಾದ ವೆಂಕಟೇಶ ಆಯ್ಕೆಯಾಗಿದ್ದಾರೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿಗಳು ಅವರು ತಿಳಿಸಿದ್ದಾರೆ.

ಕ್ರೀಡೆಯಲ್ಲಿ ಭಾಗವಹಿಸಲು ಆರ್ಥಿಕ ಸಂಕಷ್ಟವಿರುವ ಮಾಹಿತಿಯನ್ನು 2025ರ ನವೆಂಬರ್ 10 ರಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರ ಗಮನಕ್ಕೆ ತಂದ ಕೂಡಲೇ ಅವರಿಗೆ 2025ರ ನವೆಂಬರ್ 11 ರಂದು ಕೇವಲ ಒಂದೇ ದಿನದಲ್ಲಿ 1,78,500.00 ರೂ. ಗಳ ಇಲಾಖೆಯ ಸಹಾಯಧನ ಮಂಜೂರು ಮಾಡಿರುತ್ತಾರೆ. ಮೂಲಕ ಥೈಲ್ಯಾಂಡ್ ದೇಶದಲ್ಲಿ ನಡೆಯುವ ಫಾಡಿಟಜ ಂಭುಟುಣಥಿ ಖಿಠಿಡಿಣ ಉಚಿಟಜನಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಟ್ಟಿರುತ್ತಾರೆ.

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಯಿಂದ ಥೈಲ್ಯಾಂಡ್ ದೇಶದಲ್ಲಿ ನಡೆಯುವ World Ability Sports Games ನಲ್ಲಿ ಭಾಗವಹಿಸಲು ಅವಕಾಶ ಪಡೆದಿರುವುದು ತುಂಬಾ ಸಂತಸದ ವಿಷಯವಾಗಿದ್ದು, ಕುಮಾರ ರಾಠೋಡ ರವರು ಈ ಕ್ರೀಡೆಯಲ್ಲಿ ದೇಶದ ಪರವಾಗಿ ಭಾಗವಹಿಸಿ ಗೆಲುವು ಸಾಧಿಸುವುದರ ಮೂಲಕ ದೇಶಕ್ಕೆ, ರಾಜ್ಯಕ್ಕೆ ಹಾಗೂ ಜಿಲ್ಲೆಗೆ ಹೆಸರು ತರುವಂತಾಗಲಿ ಎಂದು ಶುಭ ಹಾರೈಸಿರುತ್ತಾರೆ.

# ವೀರ ವನಿತೆ ಒನಕೆ ಓಬವ್ವ ಅವರ ಧೈರ್ಯ ಸಾಹಸ ಮಹಿಳೆಯರಿಗೆ ಆದರ್ಶ: ಕೆ.ಇ.ಚಿದಾನಂದಪ್ಪ



ಬಳ್ಳಾರಿ,ನ.11: ವೀರವನಿತೆ ಒನಕೆ ಓಬವ್ವ ಅವರ ಕಾಯಕ ನಿಷ್ಠೆ, ಧೈರ್ಯ, ಸಾಹಸ ನಾಡಿನ ಮಹಿಳೆಯರಿಗೆ ಆದರ್ಶವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಮಂಗಳವಾರ

ಆಯೋಜಿಸಿದ್ದ ವೀರ ವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಹೈದರಾಲಿ ಸೈನಿಕರು ಚಿತ್ರದುರ್ಗದ ಕೋಟೆಯನ್ನು ಮುತ್ತಿಗೆ ಹಾಕಿದಾಗ ಮನೆಯಲ್ಲಿದ್ದ ಒನಕೆಯನ್ನೇ ಆಯುಧವನ್ನಾಗಿಸಿ ಎದುರಾಳಿಯ ನೂರಾರು ಸೈನಿಕರನ್ನು ಹೊಡೆದುರುಳಿಸಿ ಕೋಟೆಯನ್ನು ರಕ್ಷಿಸಿದರು. ಅಂದಿನಿಂದ ಅವರಿಗೆ ಒನಕೆ ಓಬವ್ವ ಎಂದು ಬಿರುದು ಸಿಕ್ಕಿತು. ಅಂತಹ ವೀರ ವನಿತೆ ಒನಕೆ ಓಬವ್ವ ಅವರ ಧೈರ್ಯ ಮಹಿಳೆಯರಿಗೆ ಒಂದು ಸ್ಫೂರ್ತಿಯಾಗಿದ್ದು, ಅವರ ಸಾಹಸವನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಕಾಯಕ ನಿಷ್ಠೆಯಿಂದ ಧೈರ್ಯವಾಗಿ ಬದುಕಬಹುದು ಎಂದು ಹೇಳಿದರು.

ಬಳ್ಳಾರಿಯ ಸಾಹಿತಿ ಎನ್.ಡಿ.ವೆಂಕಮ್ಮ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಗುಡೇಕೋಟೆ ಪಾಳೆಗಾರರಲ್ಲಿ ಕಹಳೆಯವರಾಗಿ ಸೇವೆ ಸಲ್ಲಿಸುತ್ತಿದ್ದ ತಂದೆ ಚಿನ್ನಪ್ಪ ತಾಯಿ ಚಿನ್ನಮ್ಮ ದಂಪತಿಯ ಸುಪುತ್ರಿಯಾಗಿ ಕ್ರಿ.ಶ.1721 ರ ನ.11 ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಗುಡೆಕೋಟೆಯಲ್ಲಿ ಜನಿಸಿದಳು. ಓಬವ್ವಗೆ ಕದುರಪ್ಪ ಮತ್ತು ತಿಮ್ಮಣ್ಣ ಎಂಬ ಅಣ್ಣಂದಿರಿದ್ದರು. 18ನೇಯ ಶತಮಾನದ ಚಿತ್ರದುರ್ಗದ ಕೋ–ಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪ ಓಬವ್ವಳ ಪತಿ ನಂಬಿದ ದೊರೆಗೆ ಯಾವುದೇ ಲೋಪ ಮಾಡಿದವನಲ್ಲ. ಅವನ ವ್ಯಕ್ತಿತ್ವಕ್ಕೆ ಸರಿಸಮವಾದ ಸಂಗಾತಿ ಓಬವ್ವ ಎಂದು ಜೀವನದ ಯಶೋಗಾಥೆ ಬಗ್ಗೆ ತಿಳಿಸಿದರು.

ಓಬವ್ವ ಮಾತೆಯ ಸಾಹಸ ಕಾರ್ಯಕ್ಕೆ ರಾಜವೀರ ಮದಕರಿನಾಯಕರು ಅಭಿನಂದಿಸಿ, ಆ ಸಾಹಸ ಕಾರ್ಯದ ನೆನಪಿಗೆ ಇನ್ನೊಂದು ಸುತ್ತು ಕೋಟೆ ಕಟ್ಟಿಸಿ, ಅದರ ಬಾಗಿಲಿಗೆ "ಒನಕೆ ಕಿಂಡಿ ಬಾಗಿಲು" ಎಂದು ಹೆಸರಿಟ್ಟಿದ್ದರು. ಒನಕೆ ಓಬವ್ವನನ್ನು ಕನ್ನಡ ನಾಡಿನ ವೀರವನಿತೆಯರಾದ ಕಿತ್ತೂರು ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಪರಿಗಣಿಸಲಾಗುತ್ತದೆ. ಓಬವ್ವ ಕೇವಲ ವ್ಯಕ್ತಿಯಲ್ಲ, ಒಂದು ಶಕ್ತಿಪುಂಜ. ಮಹಿಳೆಯರು ಅವರ ಆದರ್ಶಗಳನ್ನು ಪಾಲಿಸುವ ಮೂಲಕ ನಾಡಿನ ರಕ್ಷಣೆಗೆ ಪಣತೊಡಬೇಕು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರಿಗೆ ಸನ್ಮಾನಿಸಲಾಯಿತು ಹಾಗೂ ಬಳ್ಳಾರಿಯ ಎಸ್.ಲಕ್ಷ್ಮಿ ಪವನ್ ಕುಮಾರ್ ಸಂಗಡಿಗರು ಸುಗಮ ಸಂಗೀತ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಸಿ.ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ಉಪನಿರ್ದೇಶಕ ಚೋರನೂರು ಕೊಟ್ರಪ್ಪ, ಭಾರತೀಯ ಬೌದ್ಧ ಮಹಾಸಭಾ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಕಮಲರತ್ನ ಬಂತೇಜಿ, ಸರಳಾದೇವಿ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಸಿ.ಸೋಮನಾಥ, ದಲಿತ ರಕ್ಷಣಾ ವೇದಿಕೆ ಕಾರ್ಯದರ್ಶಿ ಶಂಕರ್ ನಂದಿಹಾಳ್, ಹಿರಿಯ ಪತ್ರಕರ್ತ ಸಿ.ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

# ಹಿಂಗಾರು, ಬೇಸಿಗೆ ಹಂಗಾಮಿನ ವಿವಿಧ ಬೆಳೆಗಳ ವಿಮೆ ನೋಂದಣಿಗೆ ಆಹ್ವಾನ

ಬಳ್ಳಾರಿ,ನ.11:ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆಯ ಹಿಂಗಾರು ಹಾಗೂ ಬೇಸಿಗೆ ಹಂಗಾಮಿನ ಬೆಳೆಗಳ ಬೆಳೆ ವಿಮೆಗೆ ನೋಂದಾಯಿಸಲು ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ತಮ್ಮ ಬೆಳೆಗಳಿಗೆ ಬ್ಯಾಂಕುಗಳಲ್ಲಿ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.ಹಿಂಗಾರು ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ನೀರಾವರಿ ಬೆಳೆಗಳಾದ ಜೋಳ, ಕಡಲೆ ಹಾಗೂ ಬೇಸಿಗೆ ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ನೀರಾವರಿ ಬೆಳೆಗಳಾದ ಶೇಂಗಾ, ಭತ್ತ ಹಾಗೂ ಹೋಬಳಿ ಮಟ್ಟದ ಹಿಂಗಾರು ಹಂಗಾಮಿನ ಬೆಳೆಗಳಾದ ಮುಸುಕಿನ ಜೋಳ, ಸೂರ್ಯಕಾಂತಿ, ಮಳೆಯಾಶ್ರಿತ ಬೆಳೆ ಕುಸುಬೆ, ಈರುಳ್ಳಿ ಮತ್ತು ಬೇಸಿಗೆ ಹಂಗಾಮಿನ ಸೂರ್ಯಕಾಂತಿ, ಈರುಳ್ಳಿ ಬೆಳೆಗಳು ಜಿಲ್ಲೆಯ ಬೆಳೆಗಳಾಗಿವೆ.

ವಿಮೆಗೆ ಕೊನೆಯ ದಿನ: ಹಿಂಗಾರು ಹಂಗಾಮಿನ ಬೆಳೆಗಳಾದ ಜೋಳ, ಮುಸುಕಿನ ಜೋಳ ಬೆಳೆಗಳಿಗೆ ಡಿ.15. ಸೂರ್ಯಕಾಂತಿ, ಕುಸುಮೆ ಬೆಳೆಗಳಿಗೆ ಡಿ.15 ಮತ್ತು ಕಡಲೆ ಬೆಳೆಗೆ ಡಿ.31.ಬೇಸಿಗೆ ಬೆಳೆಗಳಾದ ಭತ್ತ, ನೆಲಗಡಲೆ, ಸೂರ್ಯಕಾಂತಿ ಬೆಳೆಗಳಿಗೆ ಡಿ.27 ಮತ್ತು ಈರುಳ್ಳಿ ಬೆಳೆಗೆ 2026 ರ ಫೆ.27 ರ ವರೆಗೆ ಅವಕಾಶ ಕಲ್ಪಿಸಲಾಗಿದೆ.

ಈ ಯೋಜನೆಯ ಲಾಭ ಪಡೆಯಲು ಯಾವುದೇ ಸ್ಥಳೀಯ ಬ್ಯಾಂಕ್‌ಗಳು ಅಥವಾ ಸಾರ್ವಜನಿಕ ಸೇವಾ ಕೇಂದ್ರಗಳನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಗ್ನಿವೀರ್ ಸೇನಾ ನೇಮಕಾತಿ ಅಧಿಕಾರಿಗಳು ಕ್ರೀಯಾಶೀಲರಾಗಿ: ಜಿಲ್ಲಾಧಿಕಾರಿ

ಬಳ್ಳಾರಿ,ನ.11:ಇದೇ ನ.13 ರಿಂದ 18 ರ ವರೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಯಶಸ್ವಿಗೊಳಿಸಲು, ಎಲ್ಲಾ ಇಲಾಖೆಗಳ ಅಧಿಕಾರಿಗಳು ನಿರಂತರ ಸಂಪರ್ಕದಲ್ಲಿದ್ದುಕೊಂಡು ಕ್ರೀಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್. ಕೆ ಅವರು ಹೇಳಿದರು.

ಮಂಗಳವಾರ ನಗರದ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯ ಅಂತಿಮ ಸಿದ್ಧತೆ ಕುರಿತು ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಮ್ಮ ದೇಶದ ಸೈನ್ಯದಲ್ಲಿ ಸೇರಬಯಸುವ ಅಗ್ನಿವೀರರ ಆಯ್ಕೆ ಪ್ರಕ್ರಿಯೆಯು ನಮ್ಮ ಜಿಲ್ಲೆಯಲ್ಲಿ ನಡೆಯುತ್ತಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿ ಮತ್ತು ನಮಗೆ ದೊರೆತ ಅವಕಾಶವಾಗಿದೆ. ಹಾಗಾಗಿ ಅಧಿಕಾರಿಗಳು ಆಸಕ್ತಿಯಿಂದ ಕೆಲಸ ನಿರ್ವಹಿಸುವ ಮೂಲಕ ಯಾವುದೇ ರೀತಿಯಲ್ಲಿ ಅಡಚಣೆ–ಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

*ಸಹಾಯವಾಣಿ ಕೇಂದ್ರ:*

ನ.13 ರಿಂದ 18 ರ ವರೆಗೆ ನಡೆಯುವ ರ್‍ಯಾಲಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಗ್ನಿವೀರರು ರಾಜ್ಯದ ವಿವಿಧೆಡೆಯಿಂದ ಆಗಮಿಸಲಿದ್ದು, ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು. ನಗರದ ಬಸ್ ನಿಲ್ದಾಣ, ರೈಲು ನಿಲ್ದಾಣದಲ್ಲಿ ನಿರ್ಮಿಸಲಾಗುವ ಸಹಾಯವಾಣಿ ಕೇಂದ್ರಗಳ ಮೂಲಕ ರ್‍ಯಾಲಿ ನಡೆಯುವ ಸ್ಥಳಕ್ಕೆ ತಲುಪಲು ಸ್ಥಳದ ಮಾಹಿತಿ ನೀಡಬೇಕು. ಅಗತ್ಯವಾದಲ್ಲಿ ನಿಯೋಜಿಸಿರುವ ಬಸ್ ಗಳ ಮೂಲಕ ಕರೆತರಬೇಕು. ಯಾವುದೇ ರೀತಿಯಲ್ಲಿ ತೊಂದ–ರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

**ತಂಗಲು ವಸತಿ, ಊಟದ ವ್ಯವಸ್ಥೆ:**

ರ್‍ಯಾಲಿಯಲ್ಲಿ ಭಾಗವಹಿಸಲು ದೂರದ ಪ್ರದೇಶಗಳಿಂದ ಆಗಮಿಸುವ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ನಗರದ ವಾಲ್ಮೀಕಿ ಭವನ, ಡಾ.ಬಾಬು ಜಗನ್ ಜೀವನ್ ರಾಂ ಭವನ, ಜಿಲ್ಲಾ ಕ್ರೀಡಾಂಗಣ, ಸರ್ಕಾರಿ ಅತಿಥಿ ಗೃಹ ಮತ್ತು ಮಹಾನಗರ ಪಾಲಿಕೆ ವ್ಯಾಪ್ತಿಯ ರಾತ್ರಿ ತಂಗುದಾಣಗಳಲ್ಲಿ ತಂಗಲು ವಸತಿ ಜೊತೆಗೆ ಊಟದ ವ್ಯವಸ್ಥೆ ಮಾಡಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಬರುವ ಅಭ್ಯರ್ಥಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಅವರ ಪ್ರವೇಶ ಪತ್ರ ಪರಿಶೀಲಿಸಿ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಯವರು, ಅಭ್ಯರ್ಥಿಗಳು ಬೇರೆಡೆ ಎಲ್ಲಿಯೂ ಹೊರವಲಯದಲ್ಲಿ ವಾಸ್ತವ್ಯ ಮಾಡಬಾರದು. ಅವರ ಜೊತೆಯಾಗಿ ಬರುವ ಪೋಷಕರು, ಸ್ನೇಹಿತರಿಗೆ ಅವಕಾಶ ಇರದಿರುವ ಬಗ್ಗೆ ಮಾಹಿತಿ ನೀಡಬೇಕು. ಯಾವುದೇ ರೀತಿಯಲ್ಲಿ ಲೋಪವಾಗದಂತೆ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

**ಮೇಲ್ವಿಚಾರಣೆಗೆ ಅಧಿಕಾರಿಗಳ**



**ನೇಮಕ:** ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ 5 ದಿನಗಳ ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಬೆಳಗಿನ ಉಪಾಹಾರ, ಮಧ್ಯಾಹ್ನದ ಭೋಜನ ಅಲ್ಲಿಯೇ ವ್ಯವಸ್ಥೆ ಮಾಡಬೇಕು. ರಾತ್ರಿಯ ಊಟ ಆಯಾ ವಸತಿ ನಿಲಯಗಳಲ್ಲಿಯೇ ವಿತರಣೆ ಮಾಡಬೇಕು. ಅಭ್ಯರ್ಥಿಯು ಭಾಗವಹಿಸುವ ಶಾರೀರಿಕ ಪರೀ–ಕ್ಷೆ ದಿನದಂದು ಮತ್ತು ಮುಂದಿನ ಹಂತಕ್ಕೆ ಅರ್ಹತೆ ಪಡೆದಾಗ ದೈಹಿಕ, ವೈದ್ಯಕೀಯ ಪರೀಕ್ಷೆ ದಿನದಂದು ಉಟೋಪಚಾರ ಕಲ್ಪಿಸಲಾಗುವುದು. ಮೊದಲನೇ ದಿನವೇ ಅನರ್ಹತೆಯಾದಲ್ಲಿ ಹೊರಹೋಗಲಿದ್ದಾರೆ. ಈ ಎಲ್ಲಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ನಡೆಸಲು ಪಾಳಿ ವೇಳೆಯಲ್ಲಿ ನುರಿತ ಅಧಿಕಾರಿಗಳನ್ನು ನೇಮಿಸಬೇಕು ಎಂದು ಹೇಳಿದರು.

**ಸೂಕ್ತ ಬಂದೋಬಸ್ತ್‌ಗೆ ನಿರ್ದೇಶನ:**

ರ್‍ಯಾಲಿಯಲ್ಲಿ ಭಾಗವಹಿಸುವ ಅಭ್ಯರ್ಥಿಗಳ ಈಗಾಗಲೇ ಅವರು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಪ್ರವೇಶ ಪತ್ರವನ್ನು ಹಾಜರುಪಡಿಸಿದಲ್ಲಿ ಮಾತ್ರ ಅವರಿಗೆ ಜಿಲ್ಲಾ ಕ್ರೀಡಾಂಗಣಕ್ಕೆ ಒಳಪ್ರವೇಶ ನೀಡಬೇಕು. ಅನಧೀಕೃತ ವ್ಯಕ್ತಿಗಳಿಗೆ ಅವಕಾಶವಿರುವುದಿಲ್ಲ. ಸುತ್ತ–ಮುತ್ತಲಿನ ಜಿಲ್ಲೆಗಳಿಂದ ದ್ವಿ–ಚಕ್ರ ವಾಹನಗಳಲ್ಲಿ ಬರುವ ಅಭ್ಯರ್ಥಿಗಳಿಗೆ ನಿಗದಿಪಡಿಸಿದ ಸ್ಥಳದಲ್ಲಿ ವಾಹನ ಪಾರ್ಕ್ ಮಾಡಲು ಸೂಚಿಸಬೇಕು. ಬ್ಯಾರೀಕೇಡ್ ವ್ಯವಸ್ಥೆ ಮಾಡಬೇಕು. ಜಿಲ್ಲಾ ಕ್ರೀಡಾಂಗಣದ ಸುತ್ತಲೂ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು.

ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯನ್ನು ಯಶಸ್ವಿಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ವಹಿಸಿದ ಕಾರ್ಯಭಾರವನ್ನು ಆಸಕ್ತಿಯಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾರಮೇಶ್ ಬಾಬು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ನುರಿತ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು. ನಿರಂತರ ವಿದ್ಯುತ್ ವ್ಯವಸ್ಥೆ, ವಿದ್ಯುತ್ ದೀಪ ಮತ್ತು ಜನರೇಟರ್ ವ್ಯವಸ್ಥೆ, ಬಿಎಸ್‌ಎನ್‌ಎಲ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಜೊತೆಗೆ ವೈಫೈ ಮತ್ತು ಎಲ್‌ಎಎನ್ ಸಂಪರ್ಕ, ಟೆಕ್ನಿಕಲ್ ಸಿಬ್ಬಂದಿ ನಿಯೋಜಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಪ್ರಧಾನ ಕಚೇರಿಯ ಆರ್‌ಓ ಮತ್ತು ಸೇನಾ ನೇಮಕಾತಿ ಅಧಿಕಾರಿಯಾದ ಮೇಜರ್ ಕಪಿಲ್. ಕೆ ಅವರು ಮಾತನಾಡಿ, ನ.13 ರಿಂದ 18 ರ ವರೆಗೆ ನಡೆಯಲಿರುವ ರ್‍ಯಾಲಿಯು ಅಂದಿನ ದಿನಗಳಂದು ಬೆಳಿಗ್ಗೆ 05 ಗಂಟೆಯಿಂದಲೇ ಆರಂಭವಾಗಲಿದ್ದು, ಓಟ ಸೇರಿದಂತೆ ದೈಹಿಕ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ಒಳಗೊಂಡು ಸಂಜೆ 06 ಗಂಟೆಯವರೆಗೆ ಆಯ್ಕೆ ಪ್ರಕ್ರಿಯೆ ನಡೆಯಲಿದೆ. 100 ಅಭ್ಯರ್ಥಿಗಳಲ್ಲಿ 10 ರಿಂದ 20 ಅಭ್ಯರ್ಥಿಗಳು ಅನರ್ಹತೆ ಹೊಂದುವ ಅವಕಾಶ ಇರಲಿದೆ ಎಂದು ಸಭೆಗೆ ತಿಳಿಸಿದರು.



CíÜá©®ÝíPÜ:10&11&2025ÃÜí¨Üá275®æàq±Üá³ÓÜáÇÝ¤®Üg®Ü$¾©®ÜaÜÃÜOæ¿á®Üá° ±ÜÅ£ÊÜÐÜì¨ÜíñæDÊÜÐÜìÊÜäÓÜÖÜÖæç¨ÝÅ¸Ý¨…(PÜÇÝÂ|)PÜ®ÝìoÓÜíZÊÜ£Àáí¨Ü ÊæáçÓÜãÃÜáÎÅàÃÜíWÜ±Üor|¡¨Üí¨Ü¸æÚÛWæ8:00WÜípæWæÊÜÞ®ÜÂÊÜÞiÓÜbÊÜÃÜÃÝ¨ÜñÜ®ÜËàÃ… Íæào…,ÍÝÓÜPÜÃÜáÖÝWÜãiÇÉÝ«ÜÂûÜÃÝ¨ÜÓÜÈàÊÜáá©ªà®…ÊÜáñÜá¤iÇÉÝE±Ý«ÜÂûÜÃÝ¨Ü ÊæãÖÜ$¾¨…A®ÜÌÃÜ¸±ÜÅ«Ý®ÜPÝ¿áì¨ÜÎ¸Ý¨ÜÃ…±ÝÐÜ…®ÜWÜÃÜ«ÜÂûÜÃÝ¨ÜÊæã¸æçÇ…TÝhÝ, ®ÜWÜÃÜE±Ý«ÜÂûÜÃÝ¨ÜÊæãÖÜ$¾¨ÜhÝ¶ÜÃÜ¸®ÜWÜÃÜ±ÜÅ«Ý®ÜPÝ¿áì¨ÜÎìWÜÙÜáÖÜ®ÜáÊÜáíñÜá (WÜáÆ©¯°)ÖÝWÜãÓÜíZ¨ÜC¯°ñÜÃÜÓÜ¨ÜÓÜÂÃÜáWÜÙÜáÎÅàÃÜíWÜ±Üor|¨ÜÈÉq±Üá³ÓÜáÇÝ¤®ÜÃÜÊÜÃÜ ÓÜÊÜÞ¨¿áÈÉ±ÜâÐÜ³ÊÜÞÆWÜÙÜ®Üá°B²íÔq±Üá³ÓÜáÇÝ¤®ÜÊÜÃÜg¿áí£¿áPÝ¿áìPÜÅÊÜáÊÜ®Üá° BaÜÃÜÓÜÇÝÀáñÜá¤.



ಬಸವಕಲ್ಯಾಣ:- ತಾಲೂಕಿನ ಹಾರಕೂಡ ಗ್ರಾಮ ಪಂಚಾಯತಿನಲ್ಲಿ ದಾಸ ಶ್ರೇಷ್ಠ ಶ್ರೀ ಭಕ್ತ ಕನಕದಾಸ ಅವರ ಜಯಂತೋತ್ಸವ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರಾದ ಚನ್ನಪ್ಪ ಹೋಳ್ಕರ್. ಸಿದ್ಧರಾಮ ಹೆಗಡೆ. ಅಪ್ಪಣ್ಣ ಡವ್ರೆ. ರವೀಂದ್ರ ರಾಯಜಿ. ರಾಜಮ್ಮ ಸುಂತಾಣೆ. ಮಾಜಿ ಅಧ್ಯಕ್ಷರಾದ ಮಹಾದೇವ ಪೂಜಾರಿ. ಗ್ರಾ. ಪಂ ಅಭಿವೃದ್ಧಿ ಅಧಿಕಾರಿಯಾದ ಯೋಗೇಶ್ ಹಿರೇಮಠ . ಸಿಬ್ಬಂದಿಗಳಾದ ಮಲ್ಲಿಕಾರ್ಜುನ್ ಕೂಡಮಲೆ. ಗಣಪತಿ ಬಂಡಾರಿ. ಮಿಥುನ ರಾಠೋಡ ಮುಂತಾದರು ಭಾಗವಹಿಸಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಕನ್ನಡ ನಮ್ಮ ಬದುಕಿನ ಬಾಷೆ, ಅನ್ನದ ಭಾಷೆ, ಹೃದಯದ ಭಾಷೆಯಾಗಿದೆ: ಸ್ವಾಮೀಜಿ

ಮಲ್ಲಮ್ಮ ನುಡಿ ವಾರ್ತೆ ಅಥಣಿ : ರಾಜ್ಯದಲ್ಲಿ ಕನ್ನಡ ಭಾಷೆ, ಕಲೆ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದರ ಜೊತೆಗೆ ಕನ್ನಡಿಗರಿಗೆ ಅನ್ಯಾಯವಾದಾಗ ಗಡಿ ವಿಚಾರದಲ್ಲಿ ಬೀದಿಗಿಳಿದು ಹೋರಾಟ ಮಾಡುವ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರ ಕಾಯಕ ದೊಡ್ಡದು. ದೇಶದ ಗಡಿ ಕಾಯುವ ಸೈನಿಕರು ನಮ್ಮನ್ನು ಸಂರಕ್ಷಣೆ ಮಾಡಿದರೆ ನಾಡಿನಲ್ಲಿ ಕರವೇ ಸೇನಾನಿಗಳು ನಾಡಿನ ಭಾಷೆ ಮತ್ತು ಕನ್ನಡಿಗರ ಧ್ವನಿಯಾಗಿ ಕನ್ನಡಿಗರಿಗೆ ಅನ್ಯಾಯವಾದಾಗ ಮುಂಚೂಣಿಯಲ್ಲಿ ನಿಂತು ನ್ಯಾಯ ಒದಗಿಸುತ್ತಿದ್ದಾರೆ ಎಂದು ಮೋಟಗಿಮಠದ ಪ್ರಭು ಚನ್ನಬಸವ ಸ್ವಾಮೀಜಿ ಹೇಳಿದರು. ಅವರು ಇಲ್ಲಿನ ಎಚ್ ಶಿವರಾಮೇಗೌಡ ಸಾರಥ್ಯದ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಗಡಿನಾಡು ಕನ್ನಡ ಉತ್ಸವ ಹಾಗೂ ಗಡಿನಾಡು ಕನ್ನಡ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು ಕನ್ನಡ ಕೇವಲ ಒಂದು ಭಾಷೆಯಲ್ಲ, ಅದೊಂದು ಸಂಸ್ಕೃತಿ ಮತ್ತು ಪರಂಪರೆಯಾಗಿದೆ. ಸಾವಿರಾರು ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಸುದೀರ್ಘ ಇತಿಹಾಸ. ಪರಂಪರೆಯನ್ನ ಹೊಂದಿದೆ. ಇದು ಶ್ರೀಗಂಧದ ಬೀಡು, ಸಾಧು ಸಂತರು ದಾಸರು, ಶಿವಶರಣರು ಹಾಗೂ ಕವಿಗಳ, ಸಾಹಿತಿಗಳಿಂದ ಕಂಗೊಳಿಸುತ್ತಿರುವ ಸಮೃದ್ಧ ಕನ್ನಡ ನಾಡು. ಕನ್ನಡ ನಮ್ಮ ಬದುಕಿನ ಬಾಷೆ, ಅನ್ನದ ಭಾಷೆ, ಪವಿತ್ರ ಭಾಷೆ ಮತ್ತು ಹೃದಯದ ಭಾಷೆಯಾಗಿದೆ. ಈ ಭಾಷೆಯನ್ನ ಉಳಿಸಿ ಬೆಳೆಸಿ ಎನ್ನುವ ಪರಿಸ್ಥಿತಿ ಬರಬಾರದು.

# ಬೇವೂರಿನಲ್ಲಿ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ

## ಮಕ್ಕಳ ಸಾಹಿತ್ಯ ಬೆಳವಣಿಗೆಯಲ್ಲಿ ಪತ್ರಿಕೆಗಳ ಪಾತ್ರ ಹಿರಿದು–ಜಯಶ್ರೀ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.11–ಮಕ್ಕಳ ಸಾಹಿತ್ಯಕ್ಕೆ ಪ್ರತೆ–ೄಕ ಅಂಕಣ ಮೀಸಲಿಟ್ಟು ಅದರ ಬೆಳವಣಿಗೆಗೆ ಸಹಕರಿಸುತ್ತಿರುವ ಪತ್ರಿಕೆಗಳ ಕಾರ್ಯ ಅತ್ಯಂತ ಶ್ಲಾಘನೀಯವಾದುದು ಎಂದು ಬೇವೂರಿನಲ್ಲಿ ನಡೆದ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ ಸಾಹಿತಿ ಜಯಶ್ರೀ ಭಂಡಾರಿ ಹೇಳಿದರು.

ಸಮೀಪದ ಬೇವೂರಿನಲ್ಲಿ ಸ್ಥಳೀಯ ಆದರ್ಶ ವಿದ್ಯಾವರ್ಧಕ ಸಂಘ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಸಮಾಗಮದ ಸಹಯೋಗದಲ್ಲಿ ಮಂಗಳವಾರ ಜರುಗಿದ ಬಾಗಲಕೋಟೆ ಜಿಲ್ಲಾ 16ನೆಯ ಮಕ್ಕಳ ಸಾಹಿತ್ಯ ಸಮ್ಮೇಳನದಲ್ಲಿ ಸರ್ವಾಧ್ಯಕ್ಷ ಭಾಷಣ ಮಾಡಿದ ಅವರು, ನಾಡಿನ ಅನೇಕ ಪತ್ರಿಕೆಗಳು ಮಕ್ಕಳ ಸಾಹಿತ್ಯಕ್ಕೆ ಕುರಿತಾದ ಲೇಖನ, ಮಕ್ಕಳ ಚಿತ್ರ, ಕಥೆ, ಕವನ, ವಿಡಂಬಣೆ ಮುಂತಾದ ಚಟುವಟಿಕೆಗಳನ್ನು ಪ್ರತ್ಯೇಕ ಅಂಕಣಗಳಲ್ಲಿ ಪ್ರಕಟಿಸಿ ಪ್ರೋತ್ಸಾಹ ನೀಡುತ್ತಿವೆ ಎಂದರು.

ಮಕ್ಕಳ ಸಾಹಿತ್ಯದ ಮೇಲೆ ಮತ್ತಷ್ಟು ಬೆಳಕು ಚೆಲ್ಲುವ ಅವಕಾಶ ಪತ್ರಿಕೆಗಳಿಂದ ಸಿಗಬೇಕು. ಈ ದಿಸೆಯಲ್ಲಿ ಮಕ್ಕಳೂ ಸಹ ಪತ್ರಿಕೆಗಳನ್ನು ಕೊಂಡು ಓದುವುದನ್ನು ರೂಢಿಸಿಕೊಳ್ಳಬೇಕು. ಇದಕ್ಕೆ ಪಾಲಕರ ಸಹಕಾರವೂ ಇರಬೇಕು ಎಂದ ಭಂಡಾರಿ, ಮಕ್ಕಳ ಸಾಹಿತ್ಯದಲ್ಲಿ ಸಂಸ್ಕೃತಿ, ಶಿಕ್ಷಣ, ಕುಟುಂಬ ಹಾಗೂ ಪರಿಸರದ ಪ್ರಭಾವ ತಿಳಿಸುವ ವಿಷಯ ಅಡಕವಾಗಿರಬೇಕು ಎಂದು ಹೇಳಿದರು.

ಇಂದಿನ ಮೊಬೈಲ್ ಸಂಸ್ಕೃತಿಯಲ್ಲಿ ಯಾರ ಮಾತನ್ನು ಕೇಳದ ಸ್ಥಿತಿಯಲ್ಲಿರುವ ಮಕ್ಕಳ ಮನಸ್ಸನ್ನು ಪರಿವರ್ತಿಸುವ ನಿಟ್ಟಿನಲ್ಲಿ ಅವರಿಗೆ ಸೂಕ್ತ ಮಾರ್ಗದರ್ಶನ ಮಾಡುವ ಸಾಹಿತ್ಯ ರಚನೆಯಾಗಬೇಕಿದೆ. ಆ ಮೂಲಕ ಮಕ್ಕಳನ್ನು ತಿದ್ದಿ, ತಿಳುವಳಿಕೆ ನೀಡಿ ಸಮಾಜಕ್ಕೆ ಉತ್ತಮ ಕೊಡುಗೆಗಳನ್ನಾಗಿ ನೀಡುವಂತಾಗಬೇಕಾದ ಅವಶ್ಯಕತೆ ಇದೆ ಎಂದು ಜಯಶ್ರೀ ಭಂಡಾರಿ ಹೇಳಿದರು.

ಸಮ್ಮೇಳನ ಉದ್ಘಾಟಿಸಿದ ಬೇವೂರ ಆದರ್ಶ ವಿದ್ಯಾವರ್ಧಕ ಸಂಘದ ಅಧ್ಯಕ್ಷ ನ್ಯಾಯವಾದಿ ಜಿ.ಜಿ.ಮಾಗನೂರ, ಪ್ರಾಥಮಿಕ ಹಂತದಿಂದ ಪ್ರೌಢಶಾಲೆಯವರೆಗೂ ಮಾತೃಭಾಷೆಯ ಶಿಕ್ಷಣವೇ ಇರಬೇಕು. ಸರ್ಕಾರ ಪ್ರತಿವರ್ಷ ಇಂಗ್ಲೀಷ ಶಾಲೆಗಳನ್ನು ತೆರೆಯಲು ಅನುಮತಿ ನೀಡುತ್ತಿರುವುದು ಸರಿಯಾದ ಕ್ರಮವಲ್ಲ. ಇದಕ್ಕೆ ಸಾಹಿತ್ಯ ಸಮ್ಮೇಳನಗಳು ಸರಕಾರದ ಮೇಲೆ ಒತ್ತಡ ತಂದು ಕಡಿವಾಣ ಹಾಕಬೇಕು. ಅಂ–ದಾಗ ಕನ್ನಡ ಭಾಷೆ ಉಳಿದು ಬೆಳೆಯಲು ಸಾಧ್ಯ ಎಂದರು.

ಮುಖ್ಯ ಅತಿಥಿಗಳಾಗಿದ್ದ ಡಾ.ಎಚ್.ಎಫ್.ಯೋಗಪ್ಪನವರ ಮಾತನಾಡಿ, ಮಕ್ಕಳ ಸಾಹಿತ್ಯ ಅವಶ್ಯವಾಗಿ ಬೇಕು. ಅದು ಅವರ ಬುದ್ಧಿಮಟ್ಟ ಮತ್ತು ಅವಶ್ಯಕತೆಗನುಗುಣವಾಗಿ ರಚಿತವಾಗಿರಬೇಕು. ಮೊಬೈಲ್ ಸಂಸ್ಕೃತಿಯಿಂದಾಗಿ ಮಕ್ಕಳಲ್ಲಿ ಹೆಚ್ಚುತ್ತಿರುವ ಕ್ರೌರತೆಯನ್ನು ತೊಡೆದು ಹಾಕಿ ಅವರಲ್ಲಿ ವಿವೇಕ, ವಿನಯತೆ ಕಲಿಸುವ ಸಾಹಿತ್ಯ ಹೊರಬರಬೇಕು ಎಂದರು.

ಇನ್ನೋರ್ವ ಅತಿಥಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ನಾಮನಿರ್ದೇಶನ ಸದಸ್ಯ ಜಿ.ಕೆ.ತಳವಾರ, ಕರ್ನಾಟಕದಲ್ಲಿ ಮಕ್ಕಳ ಸಾಹಿತ್ಯವೇ ಇಲ್ಲ ಎನ್ನುವ ಮನೋಭಾವ ದೂರಾಗಬೇಕು. ಮಕ್ಕಳ ಕುರಿತು ಬರೆಯುವ ಲೇಖಕರನ್ನು ಸಾಹಿತಿಗಳು ಎಂದು ಪರಿಗಣಿಸುವಂತಾಗಬೇಕು ಎಂದು ಹೇಳಿದರು.

# ಟಿ.ಎಮ್.ಬಿ ಬ್ಯಾಂಕಿನ ಸಂಸ್ಥಾಪನಾ ದಿನ

## ನೀರಲಕೇರಿಯಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.11–ತಾಲೂಕಿನ ನೀರಲಕೇರಿ ಗ್ರಾಮದಲ್ಲಿ ನಗರದ ಬಿ.ವಿ.ವಿ.ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ವೈದ್ಯ ಪ್ರಮುಖರಿಂದ ಮಂಗಳವಾರ ಉಚಿತ ರಕ್ತದಾನ ಶಿಬಿರ ಮತ್ತು ನೇತ್ರ ತಪಾಸಣಾ ಶಿಬಿರ ನಡೆಸಲಾಯಿತು.

ತಮಿಳುನಾಡು ಮರ್ಕಂಟೈಲ್ ಬ್ಯಾಂಕಿನ(ಟಿ.ಎಮ್.ಬಿ)104 ನೇ ಸಂಸ್ಥಾಪನಾ ದಿನದ ಪ್ರಯುಕ್ತ ನೀರಲಕೇರಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ನಡೆದ ಈ ಶಿಬಿರದಲ್ಲಿ ಡಾ.ಕೇಶವ ಕುಲಕರ್ಣಿ ಅವರ ನೇತ್ರತ್ವದಲ್ಲಿ 25 ರಕ್ತದಾನಿಗಳು ರಕ್ತದಾನ ಮಾಡಿದರು. ಡಾ.ಲೇಖಾ ರವಿಕುಮಾರ ನೇತ್ರತ್ವದಲ್ಲಿ ನಡೆದ ನೇತ್ರ ತಪಾಸಣೆಯಲ್ಲಿ 60 ಜನರಿಗೆ ಉಚಿತ ನೇತ್ರ ತಪಾಸಣೆ ನಡೆಸಲಾಯಿತು.

ಸಂಜೆ ಕುಮಾರೇಶ್ವರ ಆಸ್ಪತ್ರೆಯ ಸ್ತ್ರೀರೋಗ ವಿಭಾಗದಲ್ಲಿ ಟಿ.ಎಮ್.ಬಿ ಬ್ಯಾಂಕಿನ ಸಂಸ್ಥಾಪನಾ ದಿನದ ಪ್ರಯುಕ್ತ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ ಹಣ್ಣು ಹಂಪಲ ವಿತರಿಸಿದರು.

ಈ ಸಂದರ್ಭದಲ್ಲಿ ಎ.ಚ್.ಎಸ್.ಕೆ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಸಹಾಯಕ ವೈದ್ಯಕೀಯ ಅಧೀಕ್ಷಕ ಡಾ.ನಾರಾಯಣ ಮುತಾಲಿಕ, ಆಸ್ಪತ್ರೆಯ ಶುಶ್ರೂಷಕ ಸಿಬ್ಬಂದಿ ಉಪಸ್ಥಿತರಿದ್ದರು.

# ಮಾನವನ ವಿಕಾಸವೇ ಶಿಕ್ಷಣದ ಉದ್ದೇಶ–ನರಗುಂದ




ಮಲ್ಲಮ್ಮ ನುಡಿ ವಾರ್ತೆ ವ

ಬಾಗಲಕೋಟೆ,ನ.11–ಮಾನವನ ವಿಕಾಸದ ಸಲುವಾಗಿಯೇ ನಡೆಯುವ ಒಂದು ಪ್ರಯತ್ನವಾಗಿರುವ ಶಿಕ್ಷಣದ ಮಹತ್ವವನ್ನು ವಿದ್ಯಾರ್ಥಿಗಳು ಅರಿಯಬೇಕು ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕ–1 ಹಾಗೂ 2 ರ ಆಶ್ರಯದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಹಾಗೂ ಸ್ವತಂತ್ರ ಭಾರತದ ಪ್ರಥಮ ಶಿಕ್ಷಣ ಸಚಿವ ಮೌಲಾನಾ ಅಬುಲ್ ಕಲಾಂ ಆಜಾದರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡ ರಾಷ್ಟೀಯ ಶಿಕ್ಷಣ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಣ ಕ್ಷೇತ್ರಕ್ಕೆ ಮೌಲಾನಾ ಅಬ್ದುಲ್ ಕಲಾಂ ಆಜಾದರ ಕೊಡುಗೆಯನ್ನು ವಿದ್ಯಾರ್ಥಿಗಳು ಕೃತಜ್ಞತೆಯಿಂದ ಸ್ಮರಿಸುವುದರ ಜೊತೆಗೆ ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುವ ಶಿಕ್ಷಣದ ಪ್ರಾಮುಖ್ಯತೆಯನ್ನು ತಿಳಿದುಕೊಳ್ಳಬೇಕು. ಜ್ಞಾನಾರ್ಜನೆಯೇ ಶಿಕ್ಷಣದ ಗುರಿಯಾಗಿರುವುದರಿಂದ ವಿದ್ಯಾರ್ಥಿಗಳು ಎಲ್ಲಾ ಮೂಲಗಳಿಂದ ಜ್ಞಾನ ಸಂಪತ್ತನ್ನು ಪಡೆಯಬೇಕು. ಉತ್ತಮ ಶಿಕ್ಷಣವನ್ನು ಪಡೆಯುವುದರ ಜೊತೆಗೆ ಶಿಕ್ಷಣದ ಮಹತ್ವವನ್ನು ಸಾರಿ ಹೇಳಬೇಕು ಎಂದು ಹೇಳಿದರು.

ಉಪನ್ಯಾಸಕಿ ಕೀರ್ತಿ ದಾಸರ ಪ್ರಾರ್ಥನಾ ಗೀತೆ ಹಾಡಿದರು. ಎನ್.ಎಸ್.ಎಸ್ ಅಧಿಕಾರಿ ಎಸ್.ವಾಯ್.ಬೊಮ್ಮಣ್ಣವರ ಸ್ವಾಗತಿಸಿದರು. ಪ್ರಾಧಾನ ಕಾರ್ಯದರ್ಶಿ ದಿಲ್‌ಶಾದ ನದಾಫ ವಂದಿಸಿದರು. ಎನ್.ಎಸ್.ಎಸ್ ಅಧಿಕಾರಿ ಎಸ್.ಎಂ.ಹಡಪದ ನಿರೂಪಿಸಿದರು.

# ಬೇವೂರಿನಲ್ಲಿ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ

## ಮಕ್ಕಳ ಸಾಹಿತ್ಯ ಬೆಳವಣಿಗೆಯಲ್ಲಿ ಪತ್ರಿಕೆಗಳ ಪಾತ್ರ ಹಿರಿದು–ಜಯಶ್ರೀ




ಫೋಟೋ:ಎಚ್11ಬಿಇಎನ್‌ಕೆಟಿ01–ಬೇವೂರಿನಲ್ಲಿ ಮಂಗಳವಾರ ನಡೆದ ಬಾಗಲಕೋಟೆ ಜಿಲ್ಲಾ 16 ನೇ ಮಕ್ಕಳ ಸಾಹಿತ್ಯ ಸಮ್ಮೇಳನವನ್ನು ನ್ಯಾಯವಾದಿ ಜಿ.ಜಿ.ಮಾಗನೂರ ಉದ್ಘಾಟಿಸಿದರು.

ಬೆನಕಟ್ಟಿ,11–ಮಕ್ಕಳ ಸಾಹಿತ್ಯಕ್ಕೆ ಪ್ರತ್ಯೇಕ ಅಂಕಣ ಮೀಸಲಿಟ್ಟು ಅದರ ಬೆಳವಣಿಗೆಗೆ ಸಹಕರಿಸುತ್ತಿರುವ ಪತ್ರಿಕೆಗಳ ಕಾರ್ಯ ಅತ್ಯಂತ ಶ್ಲಾಘನೀಯವಾದುದು ಎಂದು ಬೇವೂರಿನಲ್ಲಿ ನಡೆದ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ ಸಾಹಿತಿ ಜಯಶ್ರೀ ಭಂಡಾರಿ ಹೇಳಿದರು.

ಸಮೀಪದ ಬೇವೂರಿನಲ್ಲಿ ಸ್ಥಳೀಯ ಆದರ್ಶ ವಿದ್ಯಾವರ್ಧಕ ಸಂಘ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಸಮಾಗಮದ ಸಹಯೋಗದಲ್ಲಿ ಮಂಗಳವಾರ ಜರುಗಿದ ಬಾಗಲಕೋಟೆ ಜಿಲ್ಲಾ 16ನೆಯ ಮಕ್ಕಳ ಸಾಹಿತ್ಯ ಸಮ್ಮೇಳನದಲ್ಲಿ ಸರ್ವಾಧ್ಯಕ್ಷ ಭಾಷಣ ಮಾಡಿದ ಅವರು, ನಾಡಿನ ಅನೇಕ ಪತ್ರಿಕೆಗಳು ಮಕ್ಕಳ ಸಾಹಿತ್ಯಕ್ಕೆ ಕುರಿತಾದ ಲೇಖನ, ಮಕ್ಕಳ ಚಿತ್ರ, ಕಥೆ, ಕವನ, ವಿಡಂಬಣೆ ಮುಂತಾದ ಚಟುವಟಿಕೆಗಳನ್ನು ಪ್ರತ್ಯೇಕ ಅಂಕಣಗಳಲ್ಲಿ ಪ್ರಕಟಿಸಿ ಪ್ರೋತ್ಸಾಹ ನೀಡುತ್ತಿವೆ ಎಂದರು.

ಮಕ್ಕಳ ಸಾಹಿತ್ಯದ ಮೇಲೆ ಇನ್ನಷ್ಟು ಬೆಳಕು ಚೆಲ್ಲುವ ಅವಕಾಶ ಪತ್ರಿಕೆಗಳಿಂದ ದೊರೆಯಬೇಕು. ಈ ನಿಟ್ಟಿನಲ್ಲಿ ಮಕ್ಕಳೂ ಸಹ ಪತ್ರಿಕೆಗಳನ್ನು ಕೊಂಡು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದ ಭಂಡಾರಿ, ಮಕ್ಕಳ ಸಾಹಿತ್ಯದಲ್ಲಿ ಸಂಸ್ಕೃತಿ, ಶಿಕ್ಷಣ, ಕುಟುಂಬ ಹಾಗೂ ಪರಿಸರದ ಪ್ರಭಾವ ತಿಳಿಸುವ ವಿಷಯ ಅಡಗಿರಬೇಕು ಎಂದು ಹೇಳಿದರು.

ಇಂದಿನ ಮೊಬೈಲ್ ಸಂಸ್ಕೃತಿಯಲ್ಲಿ ಹೆತ್ತವರ ಮಾತನ್ನು ಸಹ ಕೇಳದ ಸ್ಥಿತಿಯಲ್ಲಿರುವ ಮಕ್ಕಳ ಮನಸ್ಸನ್ನು ಪರಿವರ್ತಿಸುವ ನಿಟ್ಟಿನಲ್ಲಿ ಅವರಿಗೆ ಸೂಕ್ತ ಮಾರ್ಗದರ್ಶನ ಮಾಡುವ ಸಾಹಿತ್ಯ ರಚನೆಯಾಗಬೇಕಿದೆ. ಆ ಮೂಲಕ ಮಕ್ಕಳನ್ನು ತಿದ್ದಿ, ತಿಳುವಳಿಕೆ ನೀಡಿ ಸಮಾಜಕ್ಕೆ ಉತ್ತಮ ಕೊಡುಗೆಗಳನ್ನಾಗಿ ನೀಡುವಂತಾಗಬೇಕಾದ ಅಗತ್ಯತೆಯಿದೆ ಎಂದು ಜಯಶ್ರೀ ಭಂಡಾರಿ ಹೇಳಿದರು.

ಸಮ್ಮೇಳನ ಉದ್ಘಾಟಿಸಿದ ಬೇವೂರ ಆದರ್ಶ ವಿದ್ಯಾವರ್ಧಕ ಸಂಘದ ಅಧ್ಯಕ್ಷ ವಕೀಲ ಜಿ.ಜಿ.ಮಾಗನೂರ, ಪ್ರಾಥಮಿಕ ಹಂತದಲ್ಲಿ ಮಾತೃಭಾಷೆಯ ಶಿಕ್ಷಣವೇ ಇರಬೇಕು. ಸರ್ಕಾರ ಇಂಗ್ಲೀಷ ಶಾಲೆಗಳನ್ನು ತೆರೆಯಲು ಅನುಮತಿ ನೀಡುತ್ತಿರುವುದಕ್ಕೆ ಕಡಿವಾಣ ಹಾಕುವುದಕ್ಕೆ ಇಂತಹ ಸಮ್ಮೇಳನಗಳು ಬೆಳಕು ಚೆಲ್ಲಬೇಕು. ಅಂದಾಗ ಕನ್ನಡ ಭಾಷೆ ಉಳಿದು ಬೆಳೆಯಲು ಸಾಧ್ಯ ಎಂದರು.

ಮುಖ್ಯ ಅತಿಥಿಗಳಾಗಿದ್ದ ವೈದ್ಯ ಡಾ.ಎಚ್.ಎಫ್.ಯೋಗಪ್ಪನವರ ಮಾತನಾಡಿ, ಮಕ್ಕಳ ಸಾಹಿತ್ಯ ಅವಶ್ಯವಾಗಿ ಬೇಕು. ಅದು ಅವರ ಬುದ್ಧಿಮಟ್ಟ ಮತ್ತು ಅವಶ್ಯಕತೆಗನುಗುಣವಾಗಿ ರಚಿತವಾಗಿರಬೇಕು. ಮೊಬೈಲ್ ಸಂಸ್ಕೃತಿಯಿಂದಾಗಿ ಮಕ್ಕಳಲ್ಲಿ ಹೆಚ್ಚುತ್ತಿರುವ ಕ್ರೂರತೆಯನ್ನು ತೊಡೆದು ಹಾಕಿ ಅವರಲ್ಲಿ ವಿವೇಕ, ವಿನಯತೆ ಕಲಿಸುವ ಸಾಹಿತ್ಯ ಹೊರಬರಬೇಕು ಎಂದರು.

ಇನ್ನೋರ್ವ ಅತಿಥಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ನಾಮನಿರ್ದೇಶನ ಸದಸ್ಯ ಜಿ.ಕೆ.ತಳವಾರ, ಕರ್ನಾಟಕದಲ್ಲಿ ಮಕ್ಕಳ ಸಾಹಿತ್ಯವೇ ಇಲ್ಲ ಎನ್ನುವ ಮನೋಭಾವ ದುರಾಗಬೇಕು. ಮಕ್ಕಳ ಕುರಿತು ಬರೆಯುವ ಲೇಖಕರನ್ನು ಸಾಹಿತಿಗಳು ಎಂದು ಪರಿಗಣಿಸುವಂತಾಗಬೇಕು ಎಂದು ಹೇಳಿದರು.

ಸಮ್ಮೇಳನದ ನಿಕಟಪೂರ್ವ ಅಧ್ಯಕ್ಷ ಮೃತ್ಯುಂಜಯ ರಾಮದುರ್ಗ ಮಾತನಾಡಿದರು. ಶ್ರೀಗ್ಯಾನಪ್ಪಜ್ಜನವರು ಸಾನಿಧ್ಯ ವಹಿಸಿದ್ದರು. ಮಕ್ಕಳ ಸಾಹಿತ್ಯ ಸಮಾಗಮದ ಜಿಲ್ಲಾ ಅಧ್ಯಕ್ಷ ಗುರುಸ್ವಾಮಿ ಗಣಾಚಾರಿ ಅಧ್ಯಕ್ಷತೆ ವಹಿಸಿದ್ದರು. ಗ್ರಾಮ ಪಂಚಾಯತಿ ಅಧ್ಯಕ್ಷೆ ಫರೀದಾ ಗುರಗುನ್ನಿ, ಪ್ರಾಚಾರ್ಯ ವ್ಹಿ.ಬಿ.ಅರಹುಣಸಿ, ಮುಖ್ಯಾಧ್ಯಾಪಕ ಯೋಗೇಶ ಲಮಾಣಿ ವೇದಿಕೆಯಲ್ಲಿದ್ದರು.

ವಿದ್ಯಾರ್ಥಿನಿಯರು ನಾಡಗೀತೆ ಹಾಡಿದರು. ತಾಲ್ಲೂಕು ಮಕ್ಕಳ ಸಾಹಿತ್ಯ ಸಮಾಗಮದ ಅಧ್ಯಕ್ಷ ಎಸ್.ಆರ್.ಪಟ್ಟಣಶೆಟ್ಟಿ ಸ್ವಾಗತಿಸಿದರು.

ಸಮಾಗಮದ ಜಿಲ್ಲಾ ಉಪಾಧ್ಯಕ್ಷ ಎಸ್.ಎಸ್.ಹಳ್ಳೂರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಚ್.ಎಸ್.ಕಾಳಿ, ನಾಗರಾಜ ಹೊನ್ನುಟಗಿ ನಿರೂಪಿಸಿದರು. ವಿರೇಶ ಪೂಜಾರಿ ವಂದಿಸಿದರು.

# ಒನಕೆ ಓಬವ್ವ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.11–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಒನಕೆ ಓಬವ್ವ ಜಯಂತಿಯನ್ನು ಮಂಗಳವಾರ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ಇತರರು ಒನಕೆ ಓಬವ್ವ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ಅರ್ಪಿಸಿದರು.


ಕಾರ್ಯಕ್ರಮದಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಸಮುದಾಯ ಮುಖಂಡರಾದ ವಿವೇಕಾನಂದ ಗರಸಂಗಿ, ಅಶೋಕ ನಾರಾಯಣಿ, ರಾಮಚಂದ್ರ ನಾಟೀಕಾರ, ಬಸವರಾಜ ಚಲವಾದಿ, ಎಚ್.ಡಿ.ಹೊಸಮನಿ, ಸುನೀಲ ನಾರಾಯಣಿ, ಯಲ್ಲಪ್ಪ ಸನಕ್ಯಾನವರ, ವಾಯ್.ಎನ್.ಚಲವಾದಿ, ಗುರುಶಾಂತಪ್ಪ ಮದಿನಕರ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಕನ್ನಡ ಸಾರಥಿ, ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ

ಬೀದರ್: ಶ್ರೀ ಕೇತಕಿ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಹಾಗೂ ಹಣ್ಮುಪಾಜಿ ಗೆಳೆಯರ ಬಳಗದ ವತಿಯಿಂದ ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಕರ್ನಾಟಕ ರಾಜ್ಯೋತ್ಸವ ನಿಮಿತ್ತ ಸೋಮವಾರ ಆಯೋಜಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರಿಗೆ 2025ನೇ ಸಾಲಿನ ಕನ್ನಡ ಸಾರಥಿ ಹಾಗೂ ವಿವಿಧ ಕ್ಷೇತ್ರಗಳ 70 ಸಾಧಕರಿಗೆ ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಡಾ.ನಾಗಲಕ್ಷ್ಮಿ ಚೌಧರಿ ಅವರು, ಎಲ್ಲರೂ ಕನ್ನಡಾಭಿಮಾನ ಬೆಳೆಸಿಕೊಳ್ಳಬೇಕು ಎಂದರು.

# ಪಾಲಕರ ಪತ್ತೆಗಾಗಿ ನೆರವು

ಮಲ್ಲಮ್ಮ ನುಡಿ ವಾರ್ತೆ



ಬಾಗಲಕೋಟೆ,ನ.11–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಆಶ್ರಯದಲ್ಲಿ ಪತ್ತೆಯಾದ ಅಪ್ರಾಪ್ತ ಶಿಶುವಿನ ಪಾಲಕರ ಪತ್ತೆಗೆ ಕಾರ್ಯಾಚರಣೆ ನಡೆಯುತ್ತಿದೆ. ಸೆಪ್ಟಂಬರ 15 ರಂದು ನವನಗರ ಪೋಲಿಸ್ ಠಾಣಾ ವ್ಯಾಪ್ತಿಯ ಸೆಕ್ಟರ್ ನಂ.48ರ ರುದ್ರಭೂಮಿ ಹತ್ತಿರ ಸುಮಾರು 3ಕೆಜಿ ತೂಕದ ಹೆಣ್ಣು ಶಿಶು ಪತ್ತೆಯಾಗಿದೆ.

ಶಿಶುವನ್ನು ಪ್ರಸುತ್ತ ನವನಗರ ಅಮೂಲ್ಯ ಸರ್ಚ ಸ್ವದೇಶಿ ದತ್ತು ಸ್ವೀಕಾರ ಕೇಂದ್ರ, ನವನಗರ, ಬಾಗಲಕೋಟೆಯಲ್ಲಿ ಆರೈಕೆಗೆ ಒಪ್ಪಿಸಲಾಗಿದೆ. ಪಾಲಕರು ಅಥವಾ ಸಂಬಂಧಿಕರು 60 ದಿನಗಳ ಒಳಗೆ ಶಿಸುವಿನ ಬಗ್ಗೆ ಹಕ್ಕು ದೃಢಪಡಿಸಲು ಜಿಲ್ಲಾ ಮಕ್ಕಳ ರಕ್ಷಣಾ ಘಟಕವನ್ನು ಸಂಪರ್ಕಿಸಬೇಕು.

ಇಲ್ಲದಿದ್ದರೆ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ.ಎಂ (ದೂರವಾಣಿ 08354295345) ಅವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ

# ಎಲ್.ಎಲ್.ಬಿ.ಪರೀಕ್ಷೆ ಮಂಜುಳಾ 8 ನೇ ರ್‍ಯಾಂಕ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.11–ನಗರದ ಎಸ್.ಸಿ.ನಂದಿಮಠ ಕಾನೂನು ವಿದ್ಯಾಲಯದ ವಿದ್ಯಾರ್ಥಿನಿ ಮಂಜುಳಾ ಕೈರೋಡಗಿ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಕನ್ನಡ ವಿಭಾಗದಲ್ಲಿ 8ನೇ ರ್‍ಯಾಂಕ ಗಳಿಸಿದ್ದಾರೆ.

ಅಗಸ್ಟ್–ಸಪ್ಟಂಬರ್ ತಿಂಗಳಿನಲ್ಲಿ ಜರುಗಿದ 3 ವರ್ಷದ ಎಲ್‌ಎಲ್.ಬಿ. ಅಂತಿಮ ವರ್ಷದ ಪರೀಕ್ಷೆಯಲ್ಲಿ ಮಂಜುಳಾ ಕೈ–ರೋಡಗಿ 8ನೇ ರ್‍ಯಾಂಕ ಪಡೆದು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ಸಾಧನೆಮಾಡಿರುವ ಮಂಜುಳಾ ಅವರನ್ನು ಬಿ.ವ್ಹಿ.ವ್ಹಿ.ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಎಸ್.ಸೂಳಿಭಾವಿ, ಪ್ರಾಚಾರ್ಯೆ ಎಂ.ಪಿ.ಚಂದ್ರಿಕಾ ಮತ್ತು ಮಹಾವಿದ್ಯಾಲಯದ ಎಲ್ಲ ಸಿಬ್ಬಂದಿಯವರು ಅಭಿನಂದಿಸಿದ್ದಾರೆ.

# ಜಾವೆಲಿನ–ದೀಪಾಗೆ ರಜತ ಪದಕ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.11–ನಗರದ ಬಿ.ವಿ.ವಿ ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಬಿಎಸ್‌ಸಿ ವಿದ್ಯಾರ್ಥಿನಿ ದೀಪಾ ಲಮಾಣಿ ಕಲಬುರ್ಗಿಯ ಶರಣೇಶ್ವರಿ ರೇಷ್ಮೆ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆದ 19ನೇ ಅಥ್ಲೆಟಿಕ್ ಕ್ರೀಡಾಕೂಟದ ಜಾವೆಲಿನ್ ಎಸೆತದಲ್ಲಿ ರಜತ ಪದಕ ಮತ್ತು ಚಕ್ರ ಎಸೆತದಲ್ಲಿ ನಾಲ್ಕನೇ ಬಹುಮಾನ ಪಡೆದಿದ್ದಾರೆ.

ದೀಪಾ ಲಮಾಣಿ ಅವರನ್ನು ಬಿ.ವ್ಹಿ.ವ್ಹಿ ಸಂಘದ ಕಾರ್ಯಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಆಡಳಿತಾಧಿಕಾರಿಗಳಾದ ವ್ಹಿ.ಆರ್.ಶಿರೋಳ ಮತ್ತು ಡಾ.ವಿಜಯಕುಮಾರ ಕಟಗಿಹಳ್ಳಿಮಠ, ಪ್ರಾಚಾರ್ಯೆ ಎಸ್.ಜೆ.ಒಡೆಯರ, ದೈಹಿಕ ಶಿಕ್ಷಣ ನಿರ್ದೇಶಕ ಎಂ.ವಿ.ಬಾಜಪ್ಪನವರ ಅಭಿನಂದಿಸಿದ್ದಾರೆ.

# ಮುಸ್ಲಿಮ್ ಬ್ಯಾಂಕ್ ಅಧ್ಯಕ್ಷರಾಗಿ ಕೆಂಭಾವಿ ಅವಿರೋಧ ಆಯ್ಕೆ



ತಾಳಿಕೋಟಿ: ಪಟ್ಟಣದ ಮುಸ್ಲಿಂ ಸಮಾಜದ ಪ್ರತಿಷ್ಠಿತ ದಿ.ಮುಸ್ಲಿಮ್ ಕೋ– ಆಪರೇಟಿವ್ ಬ್ಯಾಂಕ್ ಲಿಮಿಟೆಡ್ ಇದರ ನೂತನ ಅಧ್ಯಕ್ಷರಾಗಿ ಮಹಬೂಬ ಹಜರೇಸಾಬ ಕೆಂಭಾವಿ ಮಂಗಳವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹಿಂದಿನ ಅಧ್ಯಕ್ಷ ಚಂದಾಹುಸೇನ ಖಾಂಜಾದೆ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಮಹಬೂಬ ಹಜರೇಸಾಬ ಕೆಂಭಾವಿ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವರ ಅವಿರೋಧ ಆಯ್ಕೆ ನಡೆಯಿತು. 12 ನಿರ್ದೇಶಕರ ಬಲ ಹೊಂದಿರುವ ಮುಸ್ಲಿಂ ಬ್ಯಾಂಕ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ 7 ನಿರ್ದೇಶಕರು ಪಾಲ್ಗೊಂಡಿದ್ದರು. ಚುನಾವಣಾಧಿಕಾರಿಯಾಗಿ ಸಹಕಾರ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ ಉತ್ನಾಳ, ಸಹಾಯಕರಾಗಿ ಬ್ಯಾಂಕನ ವ್ಯವಸ್ಥಾಪಕ ಎಲ್.ಆರ್.ನಾಗೂರ ಕಾರ್ಯನಿರ್ವಹಿಸಿದರು. ಉಪಾಧ್ಯಕ್ಷ ರಫೀಕ ಬೇಪಾರಿ, ನಿರ್ದೇಶಕರಾದ ಚಂದಾಹುಸೇನ ಖಾಂಜಾದೆ, ಮಹ್ಮದ ಇಸ್ಮಾಯಿಲ(ತನವೀರ)ಮನಗೂಳಿ, ದಾದೇಪೀರ ಚೌದ್ರಿ, ಮುರ್ತುಜಾ(ಮುನ್ನಾ )ಅರ್ಜುಣಗಿ, ಸಕೀನಾಬಿ ಚಂದಾಸಾಬ ಲಾಹೋರಿ ಇದ್ದರು. ವಿಜಯೋತ್ಸವ: ಮುಸ್ಲಿಂ ಬ್ಯಾಂಕ್ ಅಧ್ಯಕ್ಷರಾಗಿ ಮಹಬೂಬ ಕೆಂಭಾವಿ ಅವಿರೋಧ ಆಯ್ಕೆಯಾಗುತ್ತಿದ್ದಂತೆ ಬೆಂಬಲಿಗರು ಹಾಗೂ ಮುಖಂಡರುಗಳು ಪಟಾಕಿ ಸಿಡಿಸಿ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಿದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಮಹಬೂಬ ಕೆಂಭಾವಿ ಅವರು ಮಾತನಾಡಿ ನನ್ನ ಮೇಲೆ ವಿಶ್ವಾಸ ಇಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ ಅವರೆಲ್ಲರನ್ನು ಒಗ್ಗೂಡಿಸಿಕೊಂಡು ಬ್ಯಾಂಕಿನ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು. ಸಮಾಜದ ಗಣ್ಯರಾದ ಮಾಸೂಮಸಾಬ ಕೆಂಭಾವಿ, ಅಬ್ದುಲ್ ಗನಿಸಾಬ ಲಾಹೋರಿ, ಮುರ್ತುಜಾಸಾಬ ಜಮಾದಾರ, ಅಬ್ದುಲ್ ರೆಹಮಾನಸಾಬ ಎಕೀನ, ಹೈದರಶಾ ಮಕಾಂದಾರ, ಖಾಜಾಹುಸೇನ ಸಗರ, ಹಸನಸಾಬ ಮನಗೂಳಿ, ಆದಮಸಾಬ ಕೊಡೆಕಲ್ಲ, ಇಬ್ರಾಹಿಂ ಆರಬೋಳ, ಎನ್.ಎ.ಖಾಜಿ, ಅಬ್ಬಾಸಲಿ ನಿಡಗುಂದಿ, ರಫೀಕ ಬೇಪಾರಿ, ಆಸೀಫ ಕೆಂಭಾವಿ, ಲಾಡ್ಲೇಮಶಾಕ ಮುರಾಳ, ಹುಸೇನಸಾಬ ಕೆಂಭಾವಿ, ದಸ್ತಗೀರ ಕೆಂಭಾವಿ, ಮಹಮದ್ ಕೆಂಭಾವಿ, ಮೂಸಾ ಕೆಂಭಾವಿ, ಬಸೀರ ಎಕ್ಕೇಲಿ, ಸಂಜೀವ ಬರದೇನಾಳ, ರಾಮಣ್ಣ ಕಟ್ಟಿಮನಿ, ಹಾಗೂ ಅಭಿಮಾನಿಗಳು ಇದ್ದರು.

# ಮಲ್ಲಿನಾಥ ಹಿರೇಮಠರಿಗೆ ಆಧ್ಯಾತ್ಮರತ್ನ ಪ್ರಶಸ್ತಿ ಗರಿ ಅರ್ಹರಿಗೆ ಪ್ರಶಸ್ತಿ ಸಿಗಲಿ :– ಹಾರಕೂಡ ಶ್ರೀ.

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ: – ನಗರದ 11. ಪ್ರಶಸ್ತಿ ಗೌರವಗಳು ಅರ್ಹರಿಗೆ ಸಿಕ್ಕಾಗ ಅದಕ್ಕೊಂದು ಬೆಲೆ ಬರುತ್ತದೆ. ನಿಸ್ವಾರ್ಥ ಆಧ್ಯಾತ್ಮ ಸೇವೆ ಮತ್ತು ಶೈಕ್ಷಣಿಕ ಸೇವೆಯನ್ನು ಗುರುತಿಸಿ ಸಿರಿಗನ್ನಡ ವೇದಿಕೆ ಕಾರ್ಯ ಸ್ತುತ್ಯಾರ್ಹವೆಂದು ಹಾರಕೂಡ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಪೂಜ್ಯ ಶ್ರೀ ಡಾ.ಚೆನ್ನವೀರ ಶಿವಾಚಾರ್ಯರು ಆಶೀರ್ವದಿಸಿದರು. ಸಿರಿಗನ್ನಡ ವೇದಿಕೆ ಮತ್ತು ಸಾಕ್ಷಿ ಪ್ರತಿಷ್ಠಾನ ಕಲಬುರಗಿ ಕೊಡಮಾಡುವ ಲಿಂ. ಶ್ರೀ ಸಿದ್ಧೇಶ್ವರ ಆಧ್ಯಾತ್ಮ ರತ್ನ ಪ್ರಶಸ್ತಿ ಹಾರಕೂಡದ ಹಿರೇಮಠದಲ್ಲಿ ಮಲ್ಲಿನಾಥ ಹಿರೇಮಠ ಮತ್ತು ಹೇಮಲತಾ ಹಿರೇಮಠ ದಂಪತಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು. ಅವರು ತಮ್ಮ ಮಠದ ಆಧ್ಯಾತ್ಮ ಮತ್ತು ಸಾಂಸ್ಕೃತಿಕ ಕಾರ್ಯ ಸೇವೆ ಅಮೋಘವಾಗಿದೆ ಎಂದರು. ಸಿರಿಗನ್ನಡ ವೇದಿಕೆ ಅಧ್ಯಕ್ಷರಾದ ಡಾ.ಗವಿಸಿದ್ಧಪ್ಪ ಪಾಟೀಲ ಮಾತನಾಡಿ ಮಲ್ಲಿನಾಥ ಹಿರೇಮಠ ಅವರು ಶಿಕ್ಷಕರಾಗಿ ವಿದ್ಯಾರ್ಥಿ ಮನ ತೀಡಿದವರು, ಕೋಹಿನೂರು, ಮುಡಬಿ ವಲಯದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ, ಜೊತೆಗೆ ಹಾರಕೂಡ ಮಠದ ಸೇವೆಗೆ ತೊಡಗಿಕೊಂಡವರು ಅನೇಕ ಕೃತಿ ಸಂಪಾದಿಸಿದ್ದಾರೆ. ಅವರ ಕನ್ನಡ ಭಾಷೆ, ಸಾಹಿತ್ಯ, ಸಾಂಸ್ಕೃತಿಕ ಕೊಡುಗೆ ಗುರುತಿಸಿ ಆಧ್ಯಾತ್ಮ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದರು. ಕಾಡಾದ ಅಧ್ಯಕ್ಷರಾದ ಬಾಬು ಹೊನ್ನಾನಾಯಕರು ಅಧ್ಯಕ್ಷತೆ ವಹಿಸಿದ್ದರು. ಡಾ.ರಾಜಕುಮಾರ ಮಾಳಗೆ ಸ್ವಾಗತಿಸಿ–ಪ್ರಾಸ್ತಾವಿಕ ನುಡಿ. ಶಿವಕುಮಾರ ಡೋಲೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಡಾ.ಸಿದ್ಧಪ್ಪ ಹೊಸಮನಿ ನಿರೂಪಿಸಿದರು ಪ್ರೊ.ಭದ್ರೇಶ ವಂದಿಸಿದರು.

# 1000 ಮೀಟರ್ ಕನ್ನಡ ಬಾವುಟ ಯಾತ್ರೆ, ಬೀದರ್‌ನಲ್ಲಿ ಸಂಭ್ರಮದ ರಾಜ್ಯೋತ್ಸವ!



ಮಲ್ಲಮ್ಮ ನುಡಿ ವಾರ್ತೆ

ಬೀದರ್. ನ. 11 :– ಶ್ರೀ ಕೇತಕಿ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಬೀದರ್ ಹಾಗೂ ಹಣ್ಮು ಪಾಜಿ ಗೆಳೆಯರ ಬಳಗದ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ 2025ನೇ ಸಾಲಿನ ರಾಜ್ಯ ಮಟ್ಟದ ಕನ್ನಡ ಸಾರಥಿ ಪ್ರಶಸ್ತಿ ಪುರಸ್ಕೃತರು ಕರ್ನಾಟಕ ಸರ್ಕಾರ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಭಾಗಿಯಾಗಿದ್ದರು.

ಶಿಕ್ಷಣ ಪ್ರೇಮಿ ಯುವಕರ ಸ್ಫೂರ್ತಿ ಜಿ.ಬಿ ವಿನಯಕುಮಾರ್ ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ರು. ಒಂದು ಸಾವಿರ ಮೀಟರ್ ಕನ್ನಡ ಬಾವುಟ ಯಾತ್ರೆಗೆ ಚಾಲನೆ ನೀಡಿದ್ದಾರೆ. ಬೇರೆ ರಾಜ್ಯದ ಜಿಲ್ಲೆಗಳಿಂದ ಆಗಮಿಸಿ ರಾಜ್ಯ ಮಟ್ಟದ ಕನ್ನಡ ಸೇವಾ ರತ್ನ ಪ್ರಶಸ್ತಿ ಪಡೆದಿರುವ ಸಾಧಕರಿಗೆ, ಕಾರ್ಯಕ್ರಮದ ಯಶಸ್ಸಿಗೆ ಕಾರಣಿಕರ್ತರಾದ ಪೋಲಿಸ್ ಇಲಾಖೆಯ ಸಿಬ್ಬಂದಿಗಳಿಗೆ, ಮಾಧ್ಯಮ ಮಿತ್ರರಿಗೆ, ಯಾತ್ರೆಯಲ್ಲಿ ಭಾಗವಹಿಸಿರುವ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಮತ್ತು ಬೀದರ್ ಜಿಲ್ಲೆಯ ಸಮಸ್ತ ಕನ್ನಡ ಮನಸ್ಸುಗಳಿಗೆ ಧನ್ಯವಾದಗಳನ್ನ ಅರ್ಪಿಸಿದರು.

ನಿಮ್ಮೆಲ್ಲರ ಸಹಕಾರದಿಂದ ನಾಲ್ಕನೇ ವರ್ಷದ ಕನ್ನಡ ರಾಜ್ಯೋತ್ಸವ ಸಮಾರಂಭ ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸಲು ಸಾಧ್ಯವಾಗಿದೆ. ಇದರ ಯಶಸ್ಸು ಬೀದರ್ ಜಿಲ್ಲೆಯ ಸರ್ವ ಕನ್ನಡಿಗರಿಗೆ ಸಮರ್ಪಿಸುತ್ತೇವೆ. ಮುಂದೆ ಇದೇ ರೀತಿ ನಿಮ್ಮೆಲ್ಲರ ಪ್ರೀತಿ, ಅಭಿಮಾನ, ಸಹಕಾರ ಹಾಗೂ ಮಾರ್ಗದರ್ಶನ ಸದಾ ಇರಲಿ ಅಂತ ಕನ್ನಡದ ಸೇವಕ ಹಣ್ಮು ಪಾಜಿ ಹೇಳಿದ್ದಾರೆ.

# ನೀರಾವರಿ ಸಲಹಾ ಸಮಿತಿ ಸಭೆ ಬೆಂಗಳೂರಿನಲ್ಲಿ ನವೆಂಬರ್ 14ಕ್ಕೆ

ರಾಯಚೂರು ನವೆಂಬರ್ 11 (ಕರ್ನಾಟಕ ವಾರ್ತೆ): 2025–26ನೇ ಸಾಲಿನ ತುಂಗಭದ್ರಾ ಜಲಾಶಯದ ಹಿಂಗಾರು ಹಂಗಾಮಿಗೆ ಲಭ್ಯವಿರುವ ನೀರನ್ನು ಒದಗಿಸುವ ಕುರಿತು ನಿರ್ಣಯಿಸಲು ತುಂಗಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ 125ನೇ ನೀರಾವರಿ ಸಲಹಾ ಸಮಿತಿ ಸಭೆಯು ನವೆಂಬರ್ 14ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ವಿಧಾನಸೌಧದ 3ನೇ ಮಹಡಿಯ ಸಮಿತಿ ಕೊಠಡಿ ಸಂಖ್ಯೆ:313ರಲ್ಲಿ ನಿಗಧಿಪಡಿಸಲಾಗಿದೆ. ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರಾದ ಶಿವರಾಜ ಎಸ್. ತಂಗಡಗಿ ಅವರ ಉಪಸ್ಥಿತಿಯಲ್ಲಿ ಸಭೆ ನಡೆಯಲಿದೆ. ಸಚಿವರು, ಲೋಕಸಭಾ ಸದಸ್ಯರು, ವಿಧಾನಸಭೆ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ರಾಜ್ಯಸಭಾ ಸದಸ್ಯರು ಹಾಗೂ ನೀರಾವರಿ ಸಲಹಾ ಸಮಿತಿಯ ಸದಸ್ಯರು, ಮುನಿರಾಬಾದ್ ತುಂಗಭದ್ರಾ ಯೋಜನೆಯ ಆಡಳಿತಾಧಿಕಾರಿಗಳು, ನೀರಾವರಿ ಕೇಂದ್ರ ವಲಯದ ಎಂಜಿನಿಯರು, ತುಂಗಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು, ರಾಯಚೂರು, ಕೊಪ್ಪಳ, ವಿಜಯನಗರ ಮತ್ತು ಬಳ್ಳಾರಿಯ ಜಿಲ್ಲಾಧಿಕಾರಿಗಳು ಸೇರಿದಂತೆ ಇನ್ನೀತರರು ಸಭೆಯಲ್ಲಿ ಉಪಸ್ಥಿತರಿರುವರು ಎಂದು ತುಂಗಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಎಸ್.ಬಿ.ಮಲ್ಲಿಗವಾಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀ ಮಾಣಿಕ ಪ್ರಭು ವಾಯುವಿಹಾರ ಕಾರ್ಯ ಶ್ಲಾಘನೀಯ ಆನಂದರಾಜ ಪ್ರಭು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್, ಶ್ರೀ ಮಾಣಿಕಪ್ರಭು ವಾಯು ವಿಹಾರದ ಸಮಿತಿಯವರು ಸಾಮಾಜಿಕ, ಶೈಕ್ಷಣಿಕ, ಕಾರ್ಯ ಮಾಡುತ್ತಿದ್ದಾರೆ. ಇವರ ಕಾರ್ಯ ಉತ್ತಮವಾಗಿದೆ ಎಂದು ಶ್ರೀ ಮಾಣಿಕ ಪ್ರಭು ಸಂಸ್ಥಾನದ ಕಾರ್ಯದರ್ಶಿ ಆನಂದರಾಜ ಪ್ರಭು ರವರು ತಿಳಿಸಿದ್ದಾರೆ. ಮಂಗಳವಾರ ಮಾಣಿಕ ಪ್ರಭು ಅಂಧ ಮಕ್ಕಳಿಗೆ ಶ್ರಿಕಾಂತ ಕುಲಕರಣಿ ರವರು ತಂದ ಸುಟರ್ ಗಳನ್ನು ವಿತರಣೆ ಮಾಡಿ ಮಾತನಾಡುತ್ತಿದ್ದರು. ವಾಯು ವಿಹಾರದ ಅಧ್ಯಕ್ಷ ಸುರೇಶ ಸೀಗಿ ರವರು ಮಾತನಾಡಿ. ಸಾಮಾಜಿಕ ಕಾರ್ಯ ಮಾಡುವದು ನಮಗೆ ತ್ರಪ್ತಿ ತರುತ್ತದೆ ಎಂದರು. ಈ ಸಂದರ್ಬದಲ್ಲಿ ಉಪಾಧ್ಯಕ್ಷ ವೈಜಿನಾಥ ಪಾಟೀಲ, ಕಾರ್ಯದರ್ಶಿ, ಶ್ರೀನಾಥ ದೇವಣಿ, ಗುರಪ್ಪಾ ವಿಭೋತಿ, ಮಲ್ಲಿಕಾರ್ಜುನ ಮಠಪತಿ, ರಮೇಶ ರಡ್ಡಿ, ಬಸವರಾಜ ಕನಕಟ, ಸಿದ್ದು ಸ್ವಾಮಿ, ಮಡಿವಾಳಯ್ಯ ಸ್ವಾಮಿ, ರಮೇಶ ಜಾಧವ, ಸುಭಾಷ ಪಾಟೀಲ, ದಿನಕರ ಕುಲಕರ್ಣಿ, ಶ್ರಿಕಾಂತ ಕುಲಕರಣಿ ಮತ್ತು ಪ್ರಭು ಪಂಚಾಳ ಸೇರಿದಂತೆ ಇತರರಿದ್ದರು

# ಟ್ರ್ಯಾಕ್ಟರ್ ಹಿಂದೆ ರೇಡಿಯಂ ಅಳವಡಿಸಲು ಶಾಸಕ ಬೆಲ್ದಾಳೆ ಕರೆ

ಚಿಟಗುಪ್ಪ: ಮನ್ನಾಏಖೇಳ್ಳಿ ತೆರಳುವ ರಸ್ತೆಯಲ್ಲಿ (ವಿಂಟೇಜ್ ಬಳಿ) ಕಾರ್ಖಾನೆಗೆ ಸಾಗಿಸುವ ಕಬ್ಬಿನ ಟ್ರ್ಯಾಕ್ಟರ್ ಹಿಂದೆ ರೇಡಿಯಂ ಇಲ್ಲದ ಕಾರಣ ದ್ವಿಚಕ್ರ ವಾಹನ ಅಪಘಾತ ಸಂಭವಿಸಿ ಕಾಲು ಮುರಿದು ಒದ್ದಾಡುತಿದ್ದ ಬಂಬುಳಗಿ ಗ್ರಾಮದ ಸುನೀಲ ಎಂಬ ವ್ಯಕ್ತಿಗೆ ಗಂಭೀರ ಗಾಯಗೊಂಡಿದ್ದು, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಅಂಬುಲೆನ್ಸ್ ತರಿಸಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲು ವೈದ್ಯರಿಗೆ ತಿಳಿಸಿದರು. ನಂತರ ಮಾತನಾಡಿ, ಹಲವು ಬಾರಿ ಕೆಡಿಪಿ ಸಭೆಯಲ್ಲಿ ಸಾರ್ವಜನಿ ಕಾರ್ಯಕ್ರಮದಲ್ಲಿ, ಸರ್ಕಾರಿ ಕಾರ್ಯಕ್ರಮದಲ್ಲಿ ಮಾತನಾಡುವಾಗ ಲಾರಿ, ಟ್ರ್ಯಾಕ್ಟರ್ ಹಿಂಭಾಗದಲ್ಲಿ ರೇಡಿಯಂ ಎಚ್ಚರ ಫಲಕ ಅಳವಡಿಸಲು ಮನವಿ ಮಾಡಿದ್ದೆ ಆದರೆ ಹಲವು ವಾಹನಗಳು ಎಚ್ಚರ ಫಲಕ, ರೇಡಿಯಂ ಅಳವಡಿಸಿಕೊಂಡು ಸಾಗುತ್ತಿಲ್ಲ ಪೋಲಿಸ್ ಅಧಿಕಾರಿಗಳು ಈ ವಿಷಯ ಕುರಿತು ರಾತ್ರಿ ಹೊತ್ತು ಪರಿಶೀಲನೆ ನಡೆಸಿ ರೇಡಿಯಂ ಅಳವಡಿಸುವಂತೆ ಸೂಚನೆ ನೀಡಬೇಕು ಮತ್ತು ಆಯಾ ಕಾರ್ಖಾನೆ ಮಾಲೀಕರು ಸಹ ಈ ಕುರಿತು ಗಮನ ಹರಿಸಿ ಪ್ರಾಣ ರಕ್ಷಣೆಗೆ ಮುಂದಾಗಬೇಕು ಎಂದು ಮನವಿ ಮಾಡಿದರು.

# ಟಿಪ್ಪರ್–ಬೈಕ್ ಡಿಕ್ಕಿ: ಇಬ್ಬರ ಸಾವು



ಕಲಬುರಗಿ,ನ.11–ಟಿಪ್ಪರ್ ಮತ್ತು ಬೈಕ್ ನಡುವೆ ಡಿಕ್ಕಿ ಸಂಭವಿಸಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಸರಡಗಿ ಕ್ರಾಸ್ ಹತ್ತಿರ ಇಂದು ಮುಂಜಾನೆ 11.30ರ ಸುಮಾರಿಗೆ ನಡೆದಿದೆ.

ಮೃತರನ್ನು ಭಾಗಣ್ಣ ತಂದೆ ಭೀಮರಾಯ ಕೋಳಕೂರ (30) ಮತ್ತು ಶರಣಬಸಪ್ಪ ತಂದೆ ಓಗಪ್ಪ ಪೂಜಾರಿ (32) ಎಂದು ಗುರುತಿಸಲಾಗಿದೆ.

ಇವರು ಜೇವರ್ಗಿಯಿಂದ ಕಲಬುರಗಿಗೆ ಕಡೆಗೆ ಬೈಕ್ ಮೇಲೆ ಬರುತ್ತಿದ್ದಾಗ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ. ಸುದ್ದಿ ತಿಳಿದು ಸಂಚಾರ ಪೊಲೀಸ್ ಠಾಣೆ–1 ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮನೆ ಬೀಗ ಮುರಿದು 1.67 ಲಕ್ಷ ರೂ. ಮೌಲ್ಯದ ಚಿನ್ನ ಬೆಳ್ಳಿ ಆಭರಣ ಕಳವು

ಕಲಬುರಗಿ,ನ.11–ಮನೆ ಬೀಗ ಮುರಿದು 1.67 ಲಕ್ಷ ರೂ. ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣ ಕಳವು ಮಾಡಿರುವ ಘಟನೆ ಇಲ್ಲಿನ ದೇವಿ ನಗರದಲ್ಲಿ ನಡೆದಿದೆ.

ಖಾಸಗಿಶಾಲೆಯಲ್ಲಿಶಿಕ್ಷಕರಾಗಿರುವ ಗುರುಬಸಯ್ಯ ಹಿರೇಮಠ ಅವರ ಮನೆ ಬೀಗ ಮುರಿದು ಕಳ್ಳರು 25 ಸಾವಿರ 5 ಗ್ರಾಂ.ತಾಳಿಚೈನ, 25 ಸಾವಿರ ರೂ.ಮೌಲ್ಯದ 5 ಗ್ರಾಂ.ಲಾಕೆಟ್, 40 ಸಾವಿರ ರೂ. ಮೌಲ್ಯದ 4 ಗ್ರಾಂ.ನ ಬಂಗಾರದ ಕಿವಿಯೋಲೆ, 10 ಸಾವಿರ ರೂ. ಮೌಲ್ಯದ 3 ಗ್ರಾಂ.ಬಂಗಾರದ ರಿಂಗ್, 10 ಸಾವಿರ ರೂ.ಮೌಲ್ಯದ 2 ಗ್ರಾಂ. ಬಂಗಾರದ ಲಾಕೆಟ್ ಪೆಂಡೆಂಟ್, 20 ಸಾವಿರ ರೂ. ಮೌಲ್ಯದ 20 ಗ್ರಾಂ.ನ ಗಣೇಶ ಮೂರ್ತಿ, 1200 ರೂ.ಮೌಲ್ಯದ 20 ಗ್ರಾಂ.ನ ಬೆಳ್ಳಿ ಬಟ್ಟಲು, 25 ಸಾವಿರ ರೂ.ಮೌಲ್ಯದ 50 ಗ್ರಾಂ.ನ ಬೆಳ್ಳಿ ಖಡಗ, ಪ್ಲೇಟ್ ಸೇರಿ 1.67 ಲಕ್ಷ ರೂ.ಮೌಲ್ಯದ ಚಿನ್ನ, ಬೆಳ್ಳಿ ಆಭರಣ ಕಳವು ಮಾಡಿದ್ದಾರೆ.

ಗುರುಬಸಯ್ಯ ಹಿರೇಮಠ ಅವರು ಮನೆಗೆ ಬೀಗ ಹಾಕಿಕೊಂಡು ಶಾಲೆಗೆ ಮತ್ತು ಅವರ ಪತ್ನಿ ಗೆಳತಿಯ ಮಗಳ ಮದುವೆ ಕಾರ್ಯಕ್ರಮಕ್ಕೆಂದು ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ.

ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿಪ್ರಕರಣದಾಖಲಾಗಿದ್ದು, ತನಿಖೆ ನಡೆದಿದೆ.

# ಬೆಂಗಳೂರಲ್ಲೂ ಬಿಗಿ ಭದ್ರತೆ:ವ್ಯಾಪಕ ತಪಾಸಣೆ



ದೆಹಲಿಯಲ್ಲಿ ಬಾಂಬ್ ಸ್ಫೋಟ ಸಂಭವಿಸಿರುವ ಹಿನ್ನಲೆಯಲ್ಲಿ ವಿಧಾನಸೌಧದಲ್ಲಿ ಸಿಬ್ಬಂದಿಯೊಬ್ಬರ ಬ್ಯಾಗನ್ನು ಪೊಲೀಸರು ಪರಿಶೀಲಿಸಿದರು.

ಬೆಂಗಳೂರು,ನ.11–ನವದೆಹಲಿಯ ಕೆಂಪುಕೋಟೆ ಬಳಿ ಕಾರು ಸ್ಫೋಟ ಹಿನ್ನೆಲೆಯಲ್ಲಿ ನಗರ ಸೇರಿ ರಾಜ್ಯಾದ್ಯಂತ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ನಗರದ ಸೂಕ್ಷ್ಮ,ಅತಿ ಸೂಕ್ಷ್ಮ ಪ್ರದೇಶಗಳು, ಜನಸಂದಣಿಯ ಸ್ಥಳಗಳು ರಾಜ್ಯದ ಪ್ರಮುಖ ನಗರಗಳಲ್ಲಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಿ ಕಟ್ಟೆಚ್ಚರ ವಹಿಸಲಾಗಿದ್ದು, ಹಿರಿಯ ಪೊಲೀಸ್ ಅಧಿಕಾರಿಗಳು ಪರಿಸ್ಥಿತಿಯ ಮೇಲೆ ನಿಗಾ ವಹಿಸಿದ್ದಾರೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹೈಅಲರ್ಟ್ ಘೋಷಿಸಲಾಗಿದ್ದು, ಏರ್‌ಪೋರ್ಟ್‌ಗೆ ಬರುವ, ಹೋಗುವ ವಾಹನಗಳ ಮೇಲೆ ಹದ್ದಿನ ಕಣ್ಣಿಡಲಾಗಿದೆ. ಏರ್ಪೋರ್ಟ್ ಭದ್ರತೆಗೆ ಹೆಚ್ಚುವರಿ ಶಸ್ತ್ರ ಸಜ್ಜಿತ ಸಿಐಎಸ್‌ಎಫ್ ನಿಯೋಜನೆ ಜೊತೆಗೆ ವಿಮಾನ ನಿಲ್ದಾಣದ ಒಳ ಮತ್ತು ಹೊರ ಆವರಣದಲ್ಲಿ ಪ್ಯಾಟ್ರೋಲಿಂಗ್ ಗಸ್ತು ಹೆಚ್ಚಳ ಮಾಡಲಾಗಿದೆ. ಏರ್‌ಪೋರ್ಟ್‌ಗೆ ಬರುವ ಪ್ರಯಾಣಿಕರು, ಸಿಬ್ಬಂದಿಯ ತಪಾಸಣೆ ಮಾಡಲಾಗುತ್ತಿದೆ. ವಾಹನ ನಿಲುಗಡೆ ಸೇರಿ ಎಲ್ಲಡೆ ಭದ್ರತಾ ಪಡೆ ಕಟ್ಟೆಚ್ಚರ ವಹಿಸಲಾಗಿದೆ. ದೆಹಲಿಯ ಸ್ಫೋಟ ಪ್ರಕರಣವನ್ನು ರಾಜ್ಯ ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ತೀವ್ರ ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಸೂಚನೆ ನೀಡಿದ್ದೇನೆ. ಜನನಿಬಿಡ ಸ್ಥಳಗಳಲ್ಲಿ ಭದ್ರತೆಯನ್ನು ಹೆಚ್ಚಿಸಿ, ಜನರ ಸುರಕ್ಷತೆಗೆ ಆದ್ಯತೆ ನೀಡುವಂತೆ ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಯಾವುದೇ ತರನಾದ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರು ಕೂಡ ಪೊಲೀಸ್ ಇಲಾಖೆಯ ಜೊತೆ ಸಹಕರಿಸಬೇಕು ಎಂದು ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ.

# ಹುಮ್ನಾಬಾದ್ ವಿದ್ಯುತ್ ಸುರಕ್ಷಿತ ಕಾರ್ಯಗಾರ ಜರುಗಿತು.




ಹುಮ್ನಾಬಾದ್: ಪಟ್ಟಣದ ರಾಮ ಮತ್ತು ರಾಜ್ ಪ್ರೌಢಶಾಲೆ ಯಲ್ಲಿ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ವತಿಯಿಂದ ವಿದ್ಯುತ್ ಸುರಕ್ಷತಾ ಜಾಗೃತಿ ಕಾರ್ಯಗಾರ ಹಾಗೂ ಹಾಗೂ ವಿದ್ಯುತ್ ಪರಿವರ್ತಕ ಕಾರ್ಯಗಾರ ಯಶಸ್ವಿಯಾಗಿ ಜರುಗಿತು. ಈ ಕಾರ್ಯಗಾರದಲ್ಲಿ ಪ್ರಭಾರಿ ಕಾರ್ಯನಿರ್ವಾಹಕ ಅಭಿಯಂತರಾದ ಗುರುಶಾಂತ್ ವಾರದ್. ಸಾಯಕ ಕಾರ್ಯನಿರ್ವಾಹಕ ಅಭಿಯಂತರಾದ ರಮೇಶ್, ವೀರೇಶ್ ಕುಂಬಾರ್, ನಾರಾಯಣರಾವ ಜಾಜಿ ಗಣಪತಿ ಉಪಸ್ಥಿತರಿದ್ದರು. ಡಾಕ್ಟರ್ ಮುಸ್ತಫ ಕಾರ್ಯಗಾರದಲ್ಲಿ ವಿದ್ಯುತ್ ಸುರಕ್ಷತಾ ಕ್ರಮಗಳ ಬಗ್ಗೆ ಮುಂಜಾಗ್ರತೆ ವಹಿಸುವ ಕುರಿತು ಮಾತನಾಡಿದರು. ಅಗ್ನಿಶಾಮಕ ಠಾಣೆಯ ಸಲಾವುದ್ದೀನ್ ವಿದ್ಯುತ್ ಸುರಕ್ಷತೆ ಕುರಿತು ಪ್ರಾಯೋಗಿಕವಾಗಿ ಮಾತನಾಡಿದರು. ಪ್ರಕಾಶ್ ವರ್ಮ ಕಾರ್ಯಕ್ರಮ ನಿರೂಪಿಸಿ ವಂದಿಸಿದರು

# ಒನಕೆ ಓಬವ್ವ ಜಯಂತಿ ಆಚರಣೆ: ವೀರವನಿತೆಯಾಗಿ ನಮ್ಮ ದೇಶದ ಶತೃಗಳನ್ನು ಸದೆ ಬಡಿದ ಮಹಾನ ತಾಯಿ ಶಾಸಕ ಅಲ್ಲಮ್‌ಪ್ರಭು ಪಾಟೀಲ



ಕಲಬುರಗಿ: ನ,11 (ಕ.ವಾ) 18 ನೇ ಶತಮಾನದಲ್ಲಿ ಚಿತ್ರದುರ್ಗದ ವೀರಯೋಧಿಯಾಗಿದ್ದ ಒನಕೆ ಓಬವ್ವ ವೀರವನಿತೆಯಾಗಿ ನಮ್ಮ ದೇಶದ ಶತ್ರುಗಳನ್ನು ಸದೆ ಬಡಿದ ಮಹಾನ ತಾಯಿ ಇವರು ಎಂದು ಕಲಬುರಗಿ ದಕ್ಷಣ ಮತ ಕ್ಷೇತ್ರದ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಹೇಳಿದರು.

ಮಂಗಳವಾರ ಡಾ.ಎಸ್.ಪಂಡಿತ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ವೀರವನಿತೆ ಒನಕೆ ಓಬವ್ವ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತನ್ನ ಒನಕೆಯನ್ನು ಅಸ್ತ್ರವನ್ನಾಗಿ ಮಾಡಿಕೊಂಡು ದೇಶದ ಶತ್ರು ಆದ ಹೈದಾರಾಲಿಯ ಸೈನ್ಯವನ್ನು ಸದೆ ಬಡೆದು ನಾಶ ಮಾಡಿ ಹೆಣ್ಣು ಕುಲದ ಗೌರವವನ್ನು ಎತ್ತಿ ಹಿಡಿದ ಮಹಾತಾಯಿ ಇವರು, ಆಗಿನ ಕಾಲದಲ್ಲಿ ಹೆಣ್ಣು ಮಕ್ಕಳಿಗೆ ಯಾವುದೆ ಸ್ಥಾನ ಇರಲಿಲ್ಲ. ಅಂತಹ ಸಮಯದಲ್ಲಿ ಅವರು ಮಾಡಿದ ಧೈರ್ಯ ಸಾಹಾಸವನ್ನು ನಾವು ಮೆಚ್ಚಲೆಬೇಕು ಎಂದರು.

ಸಮಾಜದಲ್ಲಿ ಪ್ರತಿಯೊಂದು ಮನೆಯಲ್ಲಿ ಹೆಣ್ಣು ಮಗಳು ಅವರ ಹಾಗೆ ಹುಟ್ಟಿ ಬೆಳೆಯಬೇಕು ಬರಿ ಟಿವಿ ಧಾರಾವಾಹಿಗಳನ್ನು ನೋಡುತ್ತಾ ಕುಳಿತರೆ ಹೇಗೆ ಇತಿಹಾಸದ ಬಗ್ಗೆ ಹೆಣ್ಣು ಮಕ್ಕಳಿಗೆ ಗಮನ ವಿರಲಿ ಎಂದು ಹೇಳಿದರು.

ಯಾರು ಇತಿಹಾಸ ಬಲ್ಲವರು ಅವರೇ ಇತಿಹಾಸ ಸೃಷ್ಟಿ ಮಾಡುವರು ಎಂದು ಡಾ. ಬಾಬ ಸಾಹೇಬ ಅಂಬೇಡ್ಕರ ಅವರು ಹೇಳಿದ್ದಾರೆ. ಹಿಂದಿನ ಕಾಲದಲ್ಲಿ ಹೆಣ್ಣು ಮಕ್ಕಳಿಗೆ ಹೆಚ್ಚು ಸ್ಥಾನಮಾನ ಇರಲಿಲ್ಲ. ಇಂದಿನ ಯುಗದಲ್ಲಿ ಹೆಣ್ಣು ಹೆಚ್ಚಿನ ಸ್ಥಾನ ಮಾನ ಹೊಂದಿದ್ದಾರೆ. ಎಂದರು.

ನಾವು ಚಿಕ್ಕವರಿಂದ್ದಾಗ ವೀರವನಿತೆ ಒನಕೆಒಬ್ಬವಕಥೆಗಳು ಪಠ್ಯಪುಸ್ತಕಗಳನ್ನು ಓದುತ್ತಿದ್ದೇವೆ ವೀರವನಿತೆ ಒನಕೆ ಓಬ್ಬವ ಕಥೆಗಳು ಇಂದಿನ ಪೀಳಿಗೆಗಳಿಗೆ ಪರಿಚಯಸಬೇಕೆಂದರು.

ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಜೀಯವರು , ಮಾಜಿ ಮುಖ್ಯಮಂತ್ರಿಗಳಾ ಧರ್ಮಸಿಂಗ್ ಅವರ ಪ್ರಯತ್ನದಿಂದ ಈ ಭಾಗಕ್ಕೆ 371 (ಜೆ) ತಂದು ಅನೇಕ ಸೌಲಭ್ಯಗಳನ್ನು ಪಡೆದುಕೊಂಡಿವೆ ಎಂದರು.

ಸಮಾಜದಲ್ಲಿ ಪ್ರತಿಯೊಂದು ಹೆಣ್ಣುಮಗಳು ಮನಸ್ಸು ಮಾಡಿದರೆ ದೇಶವನ್ನೆ ಸೃಷ್ಟಿ ಮಾಡುತ್ತಾರೆ. ಅದರಿಂದ ಎಲ್ಲಾ ಹೆಣ್ಣು ಮಕ್ಕಳಿಗೆ ಧೀರ, ಶೂರ, ಮಹಿಳೆ ಮತ್ತು ಭೂ ತಾಯಿಗೆ ಹೊಲಿಸುತ್ತಾರೆ ಆದರಿಂದ ಪ್ರತಿಯೊಂದು ಹೆಣ್ಣು ಮಗಳು ಸಮಾಜದಲ್ಲಿ ಸಾಧನೆ ಮಾಡಬೇಕು ಎಂದರು.

ಕರ್ನಾಟಕ ಛಲವಾದಿ ಸಮಾಜದ ಜಿಲ್ಲಾಧ್ಯಕ್ಷ ಮಹಾದೇವ ಮೋಘಾ ಅವರು ಮಾತನಾಡಿ ಛಲವಾದಿ ಸಮಾಜದ ವೀರವನಿತೆ ಒನಕೆ ಓಬವ್ವನವರ ಜಯಂತಿಯ ಅಂಗವಾಗಿ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಗಳು ಹಾಗೂ ಜಿಲ್ಲೆಯಲ್ಲಿ ಸಾಧನೆ ಮಾಡಿದಂತಹ ಒಟ್ಟು 22 ಮಹಿಳೆಯರಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಸನ್ಮಾನಿಸಲಾಗುತ್ತದೆ ಎಂದರು.

ಕಾಲೇಜು ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿನಿಯರಾದ ಮಹಾಲಕ್ಷ್ಮೀ ಅಶೋಕ ಪ್ರಥಮ ಸ್ಥಾನ, ದ್ವಿತೀಯ ಸ್ಥಾನ ಭೀಮಾಬಾಯಿ, ತೃತೀಯ ಶಿವಾನಿ ತಂದೆ ಮಲ್ಲಿಕಾರ್ಜುನ ಅವರಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾ ವರ್ಷಾ ರಾಜೀವ ಜಾನೆ, ಕಲಬುರಗಿ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ಗ್ರೇಡ್–2 ತಹಶೀಲ್ದಾರರ ಆನಂದ ಶೀಲ, ಜಿಲ್ಲಾಧಿಕಾರಿಗಳಶಿಷ್ಠಾಚಾರದತಹಶೀಲ್ದಾರ ಪಂಪಯ್ಯ. ಎಸ್‌ಸಿ/ಎಸ್‌ಟಿ ಜಿಲ್ಲಾ ನೌಕರ ಸಂಘದ ಅಧ್ಯಕ್ಷ ಮಹೇಶ ಹುಬಳ್ಳಿ, ಸೇರಿದಂತೆ ಚಲುವಾದಿ ಸಮಾಜ ಮುಖಂಡರಾದ ಸುರೇಶ ಬಡಿಗೇರ ಸೇರಿದಂತೆ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಸಮಾಜದ ಮುಖಂಡರು ಭಾಗವಹಿಸಿದ್ದರು.

# ಅಗ್ನಿವೀರ್ ಸೇನಾ ಭರ್ತಿ ಸ್ಥಳಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.11(ಕರ್ನಾಟಕ ವಾರ್ತೆ): ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಪ್ರಕ್ರಿಯೆಯು ನ.13 ರಿಂದ ಆರಂಭವಾಗಲಿದ್ದು, ಈ ಕುರಿತು ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಸೇನಾ ಭರ್ತಿ ಸ್ಥಳಕ್ಕೆ ಮಂಗಳವಾರ ಭೇಟಿ ನೀಡಿ ವೀಕ್ಷಣೆ ನಡೆಸಿದರು.

ನಗರದ ಜಿಲ್ಲಾ ಕ್ರೀಡಾಂಗಣ, ವಾಲ್ಮೀಕಿ ಭವನಕ್ಕೆ ಭೇಟಿ ನೀಡಿದ ಅವರು, ವಸತಿ ಸೌಕರ್ಯ ಬಗ್ಗೆ ಚರ್ಚಿಸಿದರು. ಬಳಿಕ ಅಗ್ನಿವೀರ ಸೇನಾ ನೇಮಕಾತಿ

ರ್‍ಯಾಲಿಯ ಪ್ರಕ್ರಿಯೆ ಬಗ್ಗೆ ಸೇನಾ ಅಧಿಕಾರಿ ಆರ್‌ಓ ಮೇಜರ್ ಕಪಿಲ್.ಕೆ ಸೇರಿದಂತೆ ಇನ್ನಿತರ ಸೇನಾ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ.,

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್ ಸೇರಿದಂತೆ ಸೇನಾ ನೇಮಕಾತಿ ಅಧಿಕಾರಿಗಳು, ನಿರ್ಮಿತಿ ಕೇಂದ್ರದ ಅಧಿಕಾರಿಗಳು ಹಾಗೂ ಇನ್ನೀತರರು ಹಾಜರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)